ಸಂಪುಟ: 05 ಸಂಚಿಕೆ: 13 ಪುಟಗಳು: 08 ಗುರುವಾರ 27 ಮಾರ್ಚ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಉದಯ ಸಂಭ್ರಮ

# ಅಕ್ರಮವಾಗಿ ಮರ ಕಡಿದರೇ ಬೀಳುತ್ತೆ ಭಾರಿ ದಂಡ!

• ಉದಯವಾಹಿನಿ, ಬೆಂಗಳೂರು

ಅಕ್ರಮ ಮರ ಕಡಿತಲೆಗೆ ಪ್ರಸಕ್ತ ವಿಧಿಸಲಾಗುತ್ತಿರುವ ದಂಡ ಮತ್ತು ಶಿಕ್ಷೆಯ ಪ್ರಮಾಣವನ್ನು ಹತ್ತುಪಟ್ಟು ಹೆಚ್ಚಿಸಲು ಅನುವಾಗುವಂತೆ ವೃಕ್ಷ ಸಂರಕ್ಷಣಾ ಕಾಯಿದೆ 1972ಕ್ಕೆ ತಿದ್ದುಪಡಿ ತರಲು ಕ್ರಮ ವಹಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ, ಸೂಚನೆ ನೀಡಿದ್ದಾರೆ. ತತ್ಸಂಬಂಧ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅರಣ್ಯ ಪಡೆ ಮುಖ್ಯಸ್ಥರಿಗೆ ಸೂಚನೆ ನೀಡಿರುವ ಸಚಿವರು, ದೊಡ್ಡ ಸಂಖ್ಯೆಯಲ್ಲಿ ಮರಗಳನ್ನು



ಕಡಿಯುವುದು, ಮಾನವ ಹತ್ಯೆ ಮಾಡಿದಂತೆ ಅಥವಾ ಅದಕ್ಕಿಂತ ಎಂದು ಘನ ಸುಪ್ರೀಂಕೋರ್ಟ್ ಅಭಿಪ್ರಾಯಪಟ್ಟಿರುವುದನ್ನು ಉಲ್ಲೇಖಿಸಿದ್ದಾರೆ. ಅಕ್ರಮವಾಗಿ ಕತ್ತರಿಸಿದ ಪ್ರತಿ ಮರಕ್ಕೆ 1 ಲಕ್ಷ ರೂ. ದಂಡ ವಿಧಿಸಿರುವ ವಿಚಾರದಲ್ಲಿ ಕರುಣೆ ತೋರುವ ಅಗತ್ಯವಿಲ್ಲ ಎಂದು ಸುಪ್ರೀಂಕೋರ್ಟ್

**ಶಿಕ್ಷೆ ಪ್ರಮಾಣ ಹೆಚ್ಚಳಕ್ಕೆ ಸೂಚನೆ**



ನ್ಯಾಯಮೂರ್ತಿಗಳು ಅಭಿಪ್ರಾಯಪಟ್ಟಿರುವುದನ್ನೂ ತಮ್ಮ ಟಿಪ್ಪಣಿಯಲ್ಲಿ ಉಲ್ಲೇಖಿಸಿರುವ ಸಚಿವರು, ಅಕ್ರಮ ಮರಗಳ ಕಡಿತಲೆಗೆ ವಿಧಿಸುವ ದಂಡದ ಪ್ರಮಾಣ ಹೆಚ್ಚಳದ ಅಗತ್ಯ ಪ್ರತಿಪಾದಿಸಿದ್ದಾರೆ. ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಸವಾಲುಗಳನ್ನು ಇಡೀ ವಿಶ್ವ ಎದುರಿಸುತ್ತಿರುವ ಪ್ರಸಕ್ತ ಸನ್ನಿವೇಶದಲ್ಲಿ, ಇರುವ ಒಂದೇ ಭೂಮಿಯನ್ನು ರಕ್ಷಿಸಿ, ಸುರಕ್ಷಿತವಾಗಿ ಮುಂದಿನ ಪೀಳಿಗೆಗೆ ಹಸ್ತಾಂತರಿಸಲು, ಪ್ರಕೃತಿ, ಪರಿಸರ ಉಳಿಸುವುದು ನಮ್ಮೆಲ್ಲರ ಹೊಣೆಯಾಗಿದೆ ಎಂದೂ ತಿಳಿಸಿದ್ದಾರೆ.

ಸಂಸ್ಕೃತದಲ್ಲಿ ಧರ್ಮೋ ರಕ್ಷತಿ ರಕ್ಷಿತಃ' ಎಂಬ ಮಾತಿದೆ. ಈಗ ಇದನ್ನು ವೃಕ್ಷೋ ರಕ್ಷತಿ ರಕ್ಷಿತಃ' ಎಂದು ಬದಲಾಯಿಸಿಕೊಳ್ಳಬೇಕಾದ ಕಾಲಘಟ್ಟದಲ್ಲಿ ನಾವಿದ್ದೇವೆ. ಹತ್ತಾರು, ನೂರಾರು ವರ್ಷದಿಂದ ಬೆಳೆದ ಮರಗಳನ್ನು ಸಂರಕ್ಷಿಸದಿದ್ದರೆ ಮುಂದೆ ದೊಡ್ಡ ಅಪಾಯ ಎದುರಿಸಬೇಕಾಗುತ್ತದೆ.

ಈ ನಿಟ್ಟಿನಲ್ಲಿ ವೃಕ್ಷ ಸಂರಕ್ಷಣಾ ಕಾಯಿದೆಗೆ ತಿದ್ದುಪಡಿ ತರಲು ಕ್ರಮ ವಹಿಸುವಂತೆ ಆದೇಶ ನೀಡಿದ್ದಾರೆ.

## ದಕ್ಷಿಣ ಕೊರಿಯಾದಲ್ಲಿ ಕಾಡ್ಗಿಚ್ಚು 24 ಸಾವು, 27 ಸಾವಿರ ಜನರ ಸ್ಥಳಾಂತರ

• ಉದಯವಾಹಿನಿ, ಬೆಂಗಳೂರು

ದಕ್ಷಿಣ ಕೊರಿಯಾದ ಆಗ್ನೇಯ ಭಾಗಗಳಲ್ಲಿ ಸಂಭವಿಸಿದ ಭೀಕರ ಕಾಡ್ಗಿಚ್ಚಿಗೆ 24 ಮಂದಿ ಸಾವನ್ನಪ್ಪಿದ್ದು, 200 ಕಟ್ಟಡಗಳಿಗೆ ಹಾನಿಯಾಗಿದೆ. ಅಲ್ಲದೇ ಆ ಪ್ರದೇಶದಲ್ಲಿದ್ದ 27,000 ಜನರನ್ನು ಸ್ಥಳಾಂತರಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಉತ್ತರ ಜಿಯೋಂಗ್‌ಸಾಂಗ್ ಪ್ರಾಂತ್ಯದ ಸ್ಯಾಚಿಯಾಂಗ್ ಕೌಂಟಿಯಲ್ಲಿ ಮಾ. 21ರಂದು ಸಂಜೆ ಕಾಡ್ಗಿಚ್ಚು ಕಾಣಿಸಿಕೊಂಡಿತ್ತು. ರಾಜಧಾನಿ ಸಿಯೋಲ್‌ನಿಂದ ಸುಮಾರು 180 ಕಿ.ಮೀ ಆಗ್ನೇಯಕ್ಕಿರುವ ಉಯಿಸಿಯಾಂಗ್ ಕೌಂಟಿ ಭಾಗಕ್ಕೆ ಈ ಬೆಂಕಿಯು ವ್ಯಾಪಿಸಿತ್ತು. ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಐತಿಹಾಸಿಕ ಗೌನ್ಸಾ ದೇವಾಲಯ ಸೇರಿದಂತೆ ನೂರಾರು ಕಟ್ಟಡಗಳು ಬೆಂಕಿಯಲ್ಲಿ ಸುಟ್ಟು ಕರಕಲಾಗಿವೆ. ಜೊತೆಗೆ ಯುನೆಸ್ಕೋ ಪಾರಂಪರಿಕ ಪಟ್ಟಿಯಲ್ಲಿರುವ ಪ್ರವಾಸಿ ತಾಣ ಹಾಹೋಫೋಕ್ ಗ್ರಾಮದ 8 ಕಿ.ಮೀ ಪ್ರದೇಶಕ್ಕೆ ಬೆಂಕಿ ಆವರಿಸಿಕೊಂಡಿದೆ. ಉಯಿಸಿಯಾಂಗ್‌ನಲ್ಲಿ ಕಾಡ್ಗಿಚ್ಚು ನಿಯಂತ್ರಣ ಕಾರ್ಯದಲ್ಲಿದ್ದ ಹೆಲಿಕಾಪ್ಟರೊಂದು ಪತನಗೊಂಡಿದೆ. ಪರಿಣಾಮ ಹೆಲಿಕಾಪ್ಟರ್‌ನಲ್ಲಿದ್ದ ಪೈಲಟ್ ಸಾವನ್ನಪ್ಪಿದ್ದಾರೆ. ಕಾಡ್ಗಿಚ್ಚಿನಲ್ಲಿ 26ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ.

## ಜಾತಿ ಕೇಳಿ, ಮತ ಬ್ಯಾಂಕಿನಡಿ ಮಣೆ ಹಾಕುವುದು ಕಾಂಗ್ರೆಸ್ಸಿನ ನೀತಿ

• ಉದಯವಾಹಿನಿ, ಬೆಂಗಳೂರು

'ಸಬ್ ಕಾ ಸಾಥ್, ಸಬ್ ಕಾ ವಿಕಾಸ್, ಸಬ್ ಕಾ ವಿಶ್ವಾಸ್' ಈ ಒಂದು ಮಂತ್ರದ ಮೂಲಕ ಎಲ್ಲರಿಗೂ ಯೋಜನೆ ತಲುಪುವಂತೆ ಮಾಡಲಾಗಿದೆ. ಯಾವುದೇ ಯೋಜನೆಯಲ್ಲಿ ಜಾತಿ ಯಾವುದೆಂದು ನರೇಂದ್ರ ಮೋದಿಯವರು ಕೇಳಿಲ್ಲ ಎಂದು ಮಾಜಿ ಸಚಿವ ಮತ್ತು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ತಿಳಿಸಿದ್ದಾರೆ. ಜನ್‌ಧನ್ ಖಾತೆ ಕೊಟ್ಟರು. ಜಾತಿ ಯಾವುದೆಂದು ಕೇಳಿ ಕೊಟ್ಟಿದ್ದಾರಾ ಕಿಸಾನ್ ಸಮ್ಮಾನ್ ಕೊಡುವಾಗ ನಿಮ್ಮ ಜಾತಿ ಯಾವುದೆಂದು ಕೇಳಿದ್ದಾರಾ ಎಲ್ಲಾರಿಗೂ ಅಕ್ಕಿ ಕೊಡುವಾಗ ಜಾತಿ ಯಾವುದೆಂದು ಕೇಳಿ ಕೊಟ್ಟರೇ ಎಂದು ಪ್ರಶ್ನಿಸಿದರು. ಜಾತಿ ಕೇಳುವುದು, ಮತಬ್ಯಾಂಕಿನಡಿ ಮಣೆ ಹಾಕುವುದು ಕಾಂಗ್ರೆಸ್ಸಿನ ನೀತಿ. ಅದು ಮೋದಿಯವರ ನೀತಿಯಲ್ಲ ಎಂದು ತಿಳಿಸಿದರು.


ಪ್ರಿಯಾಂಕ್ ಖರ್ಗೆಯವರೇ ಪೇಪರ್ ಓದಿದ್ದರೆ ಪೂರ್ತಿ ಓದಿ. ಇದು ಸರ್ಕಾರದ ಕಾರ್ಯಕ್ರಮವಲ್ಲ ಎಂಬುದು ಅರ್ಥವಾಗುತ್ತದೆ. ಬಿಜೆಪಿ ಅಲ್ಪಸಂಖ್ಯಾತರ ಮೋರ್ಚಾವು ತಾನು ಖಾಸಗಿಯಾಗಿ ರಂಜಾನ್ ಹಿನ್ನೆಲೆಯಲ್ಲಿ ಮೋದಿಯವರ ಹೆಸರಿನಲ್ಲಿ 32 ಲಕ್ಷ ಕಿಟ್ ವಿತರಿಸುತ್ತಿದೆ. ಬಿಜೆಪಿಯ ಒಂದು ಮೋರ್ಚಾವು ಮೋದಿಯವರ ಹೆಸರಿನಲ್ಲಿ ಕಿಟ್ ನೀಡುತ್ತಿದೆ. ಸರ್ಕಾರದ ಕಾರ್ಯಕ್ರಮ ಬೇರೆ, ಒಬ್ಬ ವ್ಯಕ್ತಿ, ಮೋರ್ಚಾ ಮಾಡುವ ಕಾರ್ಯಕ್ರಮವೇ ಬೇರೆ ಎಂದು ಸ್ಪಷ್ಟಪಡಿಸಿದರು. ಬಿಜೆಪಿ ಸರ್ಕಾರವು ಎಲ್ಲಾ ಜಾತಿಯವರಿಗೆ ಸೌಲಭ್ಯ ಕಲ್ಪಿಸಿದೆ. ಒಂದು ಕಣ್ಣಿಗೆ ಬೆಣ್ಣೆ, ಇನ್ನೊಂದು ಕಣ್ಣಿಗೆ ಸುಣ್ಣ ನೀತಿ ಅನುಸರಿಸಿದ್ದು ಕೇವಲ ಕಾಂಗ್ರೆಸ್ ಪಕ್ಷ ಎಂದು ಸಿ.ಟಿ.ರವಿ ಆಕ್ಷೇಪಿಸಿದರು. ಇದು ಸರ್ಕಾರದ ದುಡ್ಡಲ್ಲ, ಮೈನಾರಿಟಿ ಮೋರ್ಚಾದ ಅಧ್ಯಕ್ಷರ ಕಾರ್ಯಕ್ರಮ. ನೀವು ಸರ್ಕಾರದ ದುಡ್ಡಲ್ಲಿ ಮುಸ್ಲಿಮರಿಗೆ ಮಾತ್ರ ಮದುವೆಗೆ ಮೊತ್ತ ಕೊಡುವ ಶಾದಿ ಭಾಗ್ಯ ತಂದಿದ್ದೀರಿ. ಮೊನ್ನೆ ಸಂವಿಧಾನ ವಿರೋಧಿಯಾಗಿ ಶೇ.4ರಷ್ಟು ಮತೀಯ ಆಧಾರಿತ ಮೀಸಲಾತಿಯನ್ನು ನೀವು ಡಾ.ಅಂಬೇಡ್ಕರರ ಆಶಯಕ್ಕೆ ವಿರುದ್ಧವಾಗಿ ತಂದಿದ್ದೀರಿ ಸಂವಿಧಾನದಲ್ಲಿ ಮತೀಯ ಆಧಾರಿತ ಮೀಸಲಾತಿಗೆ ಎಲ್ಲಿ ಅವಕಾಶ ಇದೆ ಎಂದು ಕೇಳಿದರು.

## ಮುಂದೆ ಈ ರೀತಿ ಆಗಬಾರದು ಅನ್ನೋದೇ ಉದ್ದೇಶ

• ಉದಯವಾಹಿನಿ, ಬೆಂಗಳೂರು

ರಾಜ್ಯ ರಾಜಕಾರಣದಲ್ಲಿ ಹನಿಟ್ರ್ಯಾಪ್ ಹಗರಣ ತೀವ್ರ ಸಂಚಲನ ಉಂಟು ಮಾಡುತ್ತಿದೆ. ಸಹಕಾರಿ ಸಚಿವ ಕೆಎನ್ ರಾಜಣ್ಣ ಕಲಾಪದಲ್ಲಿ ನನ್ನ ಮೇಲೂ ಹನಿಟ್ರ್ಯಾಪ್ ಯತ್ನ ನಡೆದಿತ್ತು ಹಾಗೂ ಸುಮಾರು 48 ಜನ ದೊಡ್ಡ ದೊಡ್ಡ ರಾಜಕಾರಣಿಗಳ ಮೇಲೂ ಹನಿಟ್ರ್ಯಾಪ್ ಯತ್ನ ನಡೆದಿದೆ ಎಂದು ಹೇಳಿರುವುದು ತೀವ್ರ ಚರ್ಚೆಗೆ ಕಾರಣವಾಗಿದೆ. ಅಲ್ಲದೇ ನಿನ್ನೆಯಷ್ಟೇ ಸಚಿವ ಕೆಎನ್ ರಾಜಣ್ಣ ಗೃಹಸಚಿವ ಪರಮೇಶ್ವರ್ ಅನ್ನು ಭೇಟಿ ಮಾಡಿ ದೂರನ್ನೂ ನೀಡಿದ್ದಾರೆ. ಇದೀಗ ಈ ಬೆನ್ನಲ್ಲೇ ನ್ಯೂಸ್18 ಜೊತೆ ಸಚಿವ ರಾಜಣ್ಣ ಪುತ್ರ ಎಂಎಲ್‌ಸಿ ರಾಜೇಂದ್ರ ಮಾತನಾಡಿದ್ದು, ಹನಿಟ್ರ್ಯಾಪ್ ಯತ್ನದ ಬಗ್ಗೆ ದೂರು ನೀಡುವುದಾಗಿ ಹೇಳಿದ್ದಾರೆ. ಸದನದಲ್ಲಿ ಸಚಿವ ರಾಜಣ್ಣ ಹನಿಟ್ರ್ಯಾಪ್ ವಿಚಾರ ಮಾತನಾಡುತ್ತಿದ್ದಂತೆ ಹಲವು ನಾಯಕರು ಈ ಬಗ್ಗೆ ಧ್ವನಿಯೆತ್ತಿದ್ದರು. ನನ್ನ ವಿರುದ್ಧವೂ ಹನಿಟ್ರ್ಯಾಪ್ ನಡೆದಿದೆ ಎಂದು ಹೇಳಿದ್ದರು. ಇದೀಗ ಈ ಸಂಬಂಧ ನಾಳೆ ದೂರು ನೀಡೋದಾಗಿ ಹೇಳಿದ್ದಾರೆ.

# ಯತ್ನಾಳ್ ಉಚ್ಚಾಟನೆ



**ಯತ್ನಾಳ್ ಬಾಯಿಗೆ ಬೀಗ ಜಡಿದ ಬಿಜೆಪಿ ಕೇಂದ್ರಿಯ ಸಮಿತಿ**

**ಪಕ್ಷದಿಂದ 6 ವರ್ಷ ಉಚ್ಚಾಟನೆ**

**ಸತ್ಯವಂತರಿಗಿದು ಕಾಲವಲ್ಲ..**

**ತಪ್ಪನ್ನು.. ತಪ್ಪು ಎಂದು ತೋರಿಸಿದ್ದರ ಪ್ರತಿಫಲ**

ಬಿವೈ ವಿಜಯೇಂದ್ರ ವಿರುದ್ಧ ಪದೇ ಪದೇ ಹೇಳಿಕೆ ನೀಡುತ್ತಿದ್ದ ಬಸನಗೌಡ ಪಾಟೀಲ್ ಅವರಿಗೆ ಬಿಜೆಪಿಯ ಕೇಂದ್ರ ಶಿಸ್ತು ಸಮಿತಿಯು ಕಾರಣ ಕೇಳಿ ನೋಟಿಸ್ ನೀಡಿತ್ತು. ಇದಕ್ಕೆ ಉತ್ತರಿಸಿದ್ದ ಯತ್ನಾಳ್ ಉತ್ತಮ ನಡವಳಿಕೆಯ ಭರವಸೆ ನೀಡಿದ್ದರು. ಆದರೆ, ಹಾಗೆ ಭರವಸೆ ನೀಡಿದವರು ಮತ್ತೆ ತಮ್ಮ ಚಾಳಿ ಮುಂದುವರಿಸಿದ್ದರು. ವಿಜಯೇಂದ್ರ ವಿರುದ್ಧ ಹೇಳಿಕೆ ನೀಡುವುದನ್ನು ಮುಂದುವರಿಸಿದ್ದರು. ಅಲ್ಲದೆ ಬಿವೈವಿ ವಿರುದ್ಧ ಅಸಮಾಧಾನ ಇರುವವರೆನ್ನಲ್ಲ ಒಟ್ಟುಗೂಡಿಸಲು ಆರಂಭಿಸಿದ್ದರು. ಹಲವರು ಜೊತೆಯೂ ಆಗಿದ್ದರು. ನಿರಂತರ ಸಭೆಗಳನ್ನು ನಡೆಸುವುದು, ದಿಲ್ಲಿಗೆ ಭೇಟಿ ನೀಡಿ ದೂರು - ದುಮ್ಮಾನಗಳನ್ನು ಹೇಳಿಕೊಳ್ಳುವುದು ಮುಂದುವರಿದಿತ್ತು. ಇದಲ್ಲದೆ, ಉತ್ತರ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ವಕ್ಫ್ ಸಂಬಂಧ ತಮ್ಮದೇ ತಂಡ ಕಟ್ಟಿಕೊಂಡು ಅಭಿಯಾನದ ರೀತಿ ಸಣ್ಣ ಪುಟ್ಟ ಪಾದಯಾತ್ರೆಗಳನ್ನು ನಡೆಸಿದ್ದರು. ಮತ್ತಷ್ಟು ಮುಂದುವರಿದು ಲಿಂಗಾಯತರ ಸಮಾವೇಶಕ್ಕೂ ಸಿದ್ಧತೆ ನಡೆಸುತ್ತಿದ್ದರು. ಇನ್ನೇನು ಪಕ್ಷದೊಳಗಿನ ಬೆಳವಣಿಗೆಗಳು ಪೂರ್ತಿ ಕೈಮೀರಿ ಹೋಗಲಿವೆ ಎಂಬ ಪರಿಸ್ಥಿತಿ ಸೃಷ್ಟಿಯಾದ ಹಿನ್ನೆಲೆಯಲ್ಲಿ ರಂಗ ಪ್ರವೇಶಿಸಿರುವ ಬಿಜೆಪಿ ಶಿಸ್ತು ಸಮಿತಿ ಉಚ್ಚಾಟನೆ ಆದೇಶ ಹೊರಡಿಸಿದೆ. ಈ ಮೂಲಕ ಬಂಡಾಯದ ಬಾವುಟ ಹಾರಿಸುತ್ತಿದ್ದವರಿಗೆ ಬಿಸಿ ಮುಟ್ಟಿಸಿದೆ.

**ದಿಢೀರ್ ನಿರ್ಧಾರಕ್ಕೆ ಕಾರಣ ಏನು..**

## ಯತ್ನಾಳ್ ದಿಲ್ಲಿಯಲ್ಲಿ ಇರುವಾಗಲೇ ಈ ಆದೇಶ ಹೊರಬಿದ್ದಿದೆ

• ಉದಯವಾಹಿನಿ, ಬೆಂಗಳೂರು

ಪಕ್ಷದ ಶಿಸ್ತು ಉಲ್ಲಂಘನೆ ವಿಚಾರವಾಗಿ ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು 6 ವರ್ಷಗಳ ಕಾಲ ಬಿಜೆಪಿಯಿಂದ ಉಚ್ಚಾಟನೆ ಮಾಡಲಾಗಿದೆ.

ಪಕ್ಷದ ಶಿಸ್ತು ಉಲ್ಲಂಘನೆ ವಿಚಾರವಾಗಿ ಫೆಬ್ರವರಿ 10ರಂದು ಯತ್ನಾಳ್ ಅವರಿಗೆ ಪಕ್ಷದ ಕೇಂದ್ರೀಯ ಶಿಸ್ತು ಸಮಿತಿ ಶೋಕಾಸ್ ನೋಟಿಸ್ ನೀಡಿತ್ತು. 72 ಗಂಟೆಯೊಳಗೆ ಉತ್ತರಿಸುವಂತೆ ನೋಟಿಸ್ ನಲ್ಲಿ ತಿಳಿಸಿತ್ತು. ಇದೀಗ ಯತ್ನಾಳ್ ಅವರನ್ನು ಆರು ವರ್ಷಗಳ ಕಾಲ ಪಕ್ಷದಿಂದ ಉಚ್ಚಾಟನೆ ಮಾಡಲಾಗಿದೆ. ಆಶ್ವಾಸನೆ ಬಳಿಕವೂ ಪದೇ ಪದೇ ಶಿಸ್ತು ನಿಯಮ ಉಲ್ಲಂಘನೆ ಮಾಡಿರುವುದನ್ನು ಗಂಭೀರವಾಗಿ ಪರಿಗಣಿಸಿ ಪಕ್ಷದಿಂದ ಉಚ್ಚಾಟನೆ ಮಾಡುತ್ತಿರುವುದಾಗಿ ಶಿಸ್ತು ಸಮಿತಿಯ ಸದಸ್ಯ ಕಾರ್ಯದರ್ಶಿ ಓಂ ಪಾಠಕ್, ಪಕ್ಷ ಕೈಗೊಂಡಿರುವ ನಿರ್ಧಾರವನ್ನು ಅಧಿಕೃತವಾಗಿ ಯತ್ನಾಳ್ ಅವರಿಗೆ ಪತ್ರದಲ್ಲಿ ತಿಳಿಸಿದ್ದಾರೆ.

ತಕ್ಷಣದಿಂದಲೇ ಜಾರಿಗೆ ಬರುವಂತೆ ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ಉಚ್ಚಾಟನೆ ಮಾಡಲಾಗಿದ್ದು, ಪಕ್ಷದ ಇತರ ಜವಾಬ್ದಾರಿಗಳಿಂದಲೂ ಅವರನ್ನು ತೆಗೆಯಲಾಗಿದೆ ಎಂದು ಅವರು ತಿಳಿಸಿದ್ದಾರೆ.

**ಸ್ಫೋಟಕ ಸತ್ಯ ಬಿಚ್ಚಿಟ್ಟ ರೇಣುಕಾಚಾರ್ಯ:** ಬಿಜೆಪಿ ಕೇಂದ್ರ ಶಿಸ್ತು ಸಮಿತಿ ನನಗೆ ಶೋಕಾಸ್ ನೋಟಿಸ್ ನೀಡಿರುವ ಹಿಂದೆ 'ಮಹಾನ್ ನಾಯಕರೊಬ್ಬರಿದ್ದಾರೆ'. ನನ್ನನ್ನು ಪಕ್ಷದಿಂದ ಉಚ್ಚಾಟನೆ ಮಾಡುವ ಬಗ್ಗೆ ಎರಡು ತಿಂಗಳ ಹಿಂದೆಯೇ ಮಾತನಾಡಿಕೊಂಡಿದ್ದರು. ನಾನುಭಯ ಬಿದ್ದಿಲ್ಲ, ದಾಖಲೆ ಸಹಿತ ನಾನು ಉತ್ತರ ಕೊಡುತ್ತೇನೆ. ನನಗೆ ನೋಟಿಸ್ ಬಂದಿದ್ದು ಸಂತೋಷವಾಗಿದೆ. ಇದಕ್ಕೆ ದಾಖಲೆ ಸಹಿತವಾಗಿ ಉತ್ತರ ಕೊಡುತ್ತೇನೆ ಎಂದು ಮಾಜಿ ಶಾಸಕ ಎಂಪಿ ರೇಣುಕಾಚಾರ್ಯ ವಾಗ್ದಾಳಿ ನಡೆಸಿದರು. ನಗರದ ಕುಮಾರ ಕೃಪಾ ಅತಿಥಿ ಗೃಹದಲ್ಲಿ ಮಾತನಾಡಿದ ಅವರು, ಯಡಿಯೂರಪ್ಪ ಅವರ ಪರವಾಗಿ ಮಾತನಾಡಿದ್ದಕ್ಕೆ ನೋಟಿಸ್ ಕೊಟ್ಟಿದ್ದಾರೆ. ಯಡಿಯೂರಪ್ಪ ಅವರ ಬಗ್ಗೆ ಹಗುರವಾಗಿ ಮಾತನಾಡಿದ್ದವರ ವಿವರ ಕೊಡುತ್ತೇನೆ. ಅವರ ವಿರುದ್ಧ ಏಕೆ ಕ್ರಮ ಇಲ್ಲ ಎಂದು ಪ್ರಶ್ನಿಸಿದರು. ನೋಟಿಸ್ ಬಂದಿದ್ದು ನನಗೆ ಬೇಸರವಾಗಿಲ್ಲ, ನೋವು ಆಗಿಲ್ಲ ಬದಲಾಗಿ ಅತ್ಯಂತ ಸಂತೋಷವಾಗಿದೆ.

ತಡ ರಾತ್ರಿ ನೋಟಿಸ್ ಕೈ ಸೇರಿದೆ. ನೋಟಿಸ್ ಬಂದ ಬಳಿಕ ಕಾರ್ಯಕರ್ತರು ಶಾಸಕರು ಮಾಜಿ ಶಾಸಕರು ನನ್ನ ಜೊತೆ ಮಾತನಾಡಿದ್ದಾರೆ ಜೊತೆಗ ವೀರಶೈವ ಮುಖಂಡರು ಸಹ ಕರೆ ಮಾಡಿ ಮಾತನಾಡಿದ್ದಾರೆ. ರೇಣುಕಾಚಾರ್ಯ ಜೊತೆ ನಾವು ಇದ್ದೇವೆ ಎಂದು ಭರವಸೆ ನೀಡಿದ್ದಾರೆ. ಭಯ ಬಿಳಬೇಡಿ ಎಂದ ಧೈರ್ಯವಾಗಿ ಇರಿ ಎಂದಿದ್ದರು. ಆದ್ರೆ ನಾನು ನೋಟಿಸ್ ಯಾವುದೇ ಭಯಪಟ್ಟಿಲ್ಲ ರೇಣುಕಾಚಾರ್ಯ ಎಂದಿಗೂ ಭಯಬಿಳುವ ವ್ಯಕ್ತಿಯಲ್ಲ ಎಂದರು.

| 1 | ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ 6 ವರ್ಷಗಳ ಕಾಲ ಬಿಜೆಪಿ ಪಕ್ಷದಿಂದ ಉಚ್ಚಾಟನೆ |
|---|---|
| 2 | ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಯಡಿಯೂರಪ್ಪ ಕುಟುಂಬದ ವಿರುದ್ಧ ಬಹಿರಂಗ ಆಕ್ರೋಶ ವ್ಯಕ್ತಪಡಿಸುತ್ತಿದ್ದ ಯತ್ನಾಳ್ |
| 3 | ಪದೇ ಪದೇ ಪಕ್ಷದ ಶಿಸ್ತನ್ನು ಉಲ್ಲಂಘಿಸಿದ ಕಾರಣ ಕೇಂದ್ರ ಶಿಸ್ತು ಸಮಿತಿಯಿಂದ ಕಠಿಣ ನಿರ್ಧಾರ ಈ ಮೂಲಕ ಪಕ್ಷದೊಳಗಿನ ಬಂಡಾಯ ವನ್ನು ಹತ್ತಿಕ್ಕಲು ಹೊರಟಿದೆ ಬಿಜೆಪಿ ಹೈಕಮಾಂಡ್ |

**ನೋಟಿಸ್‌ನಲ್ಲಿ ಏನಿದೆ..**

ಪಕ್ಷದ ಕೇಂದ್ರ ಶಿಸ್ತು ಸಮಿತಿಯು ಫೆಬ್ರವರಿ 10, 2025ರಂದು ನೀಡಿದ್ದ ಶೋಕಾಸ್ ನೋಟಿಸ್‌ಗೆ ನಿಮ್ಮ ಪ್ರತಿಕ್ರಿಯೆಯನ್ನು ಪರಿಗಣಿಸಿದೆ. ಮತ್ತು ಹಿಂದಿನ ಶೋಕಾಸ್ ನೋಟಿಸ್‌ಗಳಿಗೆ ಪ್ರತಿಕ್ರಿಯೆಯಾಗಿ ಉತ್ತಮ ನಡವಳಿಕೆಯ ಭರವಸೆಯ ನೀಡಿದ್ದರೂ ಪಕ್ಷದ ಶಿಸ್ತನ್ನು ಮತ್ತೆ ಮತ್ತೆ ಉಲ್ಲಂಘಿಸುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಈ ಹಿನ್ನಲೆಯಲ್ಲಿ ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ತಕ್ಷಣದಿಂದಲೇ ಜಾರಿಗೆ ಬರುವಂತೆ 6 ವರ್ಷಗಳ ಅವಧಿಗೆ ನಿಮ್ಮನ್ನು ಹೊರಹಾಕಲು ನಿರ್ಧರಿಸಲಾಗಿದೆ. ನೀವು ಇಲ್ಲಿಯವರೆಗೆ ಹೊಂದಿದ್ದ ಪಕ್ಷದ ಸ್ಥಾನದಿಂದ ನಿಮ್ಮನ್ನು ವಜಾ ಮಾಡಲಾಗಿದೆ, ಎಂದು ಕೇಂದ್ರ ಶಿಸ್ತು ಸಮಿತಿಯ ಸದಸ್ಯ ಕಾರ್ಯದರ್ಶಿ ಓಂ ಪಾಠಕ್ ಅವರು ಆದೇಶದಲ್ಲಿ ತಿಳಿಸಿದ್ದಾರೆ.

ಪಕ್ಷದ ಹಿರಿಯರು ಹಾಗೂ ವರಿಷ್ಠರು ಈ ವಿಷಯದಲ್ಲಿ ಎಂದಿಗೂ ರಾಜಿ ಮಾಡಿಕೊಂಡಿರುವ ಉದಾಹರಣೆ ನಮ್ಮ ಮುಂದಿಲ್ಲ, ಸದ್ಯ ಬಸನಗೌಡ ಪಾಟೀಲ್ ಅವರ ವಿರುದ್ಧದ ಶಿಸ್ತುಕ್ರಮ ವರಿಷ್ಠರು ಸುದೀರ್ಘ ಅವಧಿಯಿಂದ ಸ್ಥಿತಿ-ಗತಿಗಳನ್ನು ಅವಲೋಕಿಸಿ ಅನಿವಾರ್ಯವಾಗಿ ತೆಗೆದುಕೊಂಡಿರುವ ಕ್ರಮವಾಗಿರುತ್ತದೆ. ಬಿಜೆಪಿಯಿಂದ ತನನ್ನು ಉಚ್ಚಾಟನೆ ಮಾಡಿರುವ ಬಗ್ಗೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮೊದಲ ಪ್ರತಿಕ್ರಿಯೆ ನೀಡಿದ್ದು, ಈ ಬಗ್ಗೆ ಟ್ವೀಟ್ ಮಾಡಿರುವ ಯತ್ನಾಳ್, ಸತ್ಯವಂತರಿಗಿದು ಕಾಲವಲ್ಲ ದುಷ್ಟಜನರಿಗೆ ಸುಭಿಕ್ಷಕಾಲ।। ಉಪಕಾರ ಮಾಡಿದರೆ ಅಪಕರಿಸುವ ಕಾಲ ಸಕಲವು ತಿಳಿದವಗೆ ದುರ್ಭಿಕ್ಷ ಕಾಲ. ಧರ್ಮ ಮಾಡುವಗೆ ನಿರ್ಮೂಲವಾಗುವ ಕಾಲ ಕರ್ಮಿ ಪಾತಕರಿಗೆ ಬಹು ಸೌಖ್ಯಕಾಲ ಸತ್ಯವಂತರಿಗಿದು ಕಾಲವಲ್ಲ ಎಂದು ಬೇಸರ ಹೊರ ಹಾಕಿದ್ದಾರೆ.

**ಶಿಸ್ತು ಕ್ರಮವನ್ನು ನಾನು ಸಂಭ್ರಮಿಸಲಾರೆ**



ಯತ್ನಾಳ್ ವಿರುದ್ಧದ ಶಿಸ್ತುಕ್ರಮ ವರಿಷ್ಠರು ಸುದೀರ್ಘ ಅವಧಿಯಿಂದ ಸ್ಥಿತಿ-ಗತಿಗಳನ್ನು ಅವಲೋಕಿಸಿ ಅನಿವಾರ್ಯವಾಗಿ ತೆಗೆದುಕೊಂಡಿರುವ ಕ್ರಮವಾಗಿರುತ್ತದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಹೇಳಿದ್ದಾರೆ. ಯತ್ನಾಳ್‌ವರನ್ನು ಬಿಜೆಪಿ 6 ವರ್ಷಗಳ ಉಚ್ಚಾಟನೆ ಮಾಡಿದ ಬೆನ್ನಲ್ಲೇ ವಿಜಯೇಂದ್ರ ಅವರು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಪ್ರಕಟಿಸಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಪಕ್ಷದ ಹಿರಿಯರು ಹಾಗೂ ವರಿಷ್ಠರು ಈ ವಿಷಯದಲ್ಲಿ ಎಂದಿಗೂ ರಾಜಿ ಮಾಡಿಕೊಂಡಿರುವ ಉದಾಹರಣೆ ನಮ್ಮ ಮುಂದಿಲ್ಲ, ಸದ್ಯ ಬಸನಗೌಡ ಪಾಟೀಲ್ ಯತ್ನಾಳ್ ಅವರ ವಿರುದ್ಧದ ಶಿಸ್ತುಕ್ರಮ ವರಿಷ್ಠರು ಸುದೀರ್ಘ ಅವಧಿಯಿಂದ ಸ್ಥಿತಿ-ಗತಿಗಳನ್ನು ಅವಲೋಕಿಸಿ ಅನಿವಾರ್ಯವಾಗಿ ತೆಗೆದುಕೊಂಡಿರುವ ಕ್ರಮವಾಗಿರುತ್ತದೆ. ಪಕ್ಷದ ಬೆಳವಣಿಗೆಯಲ್ಲಿನ ಕಹಿ ಘಟನೆಗಳನ್ನು ಉಲ್ಲೇಖಿಸಿ ಪಕ್ಷದ ವರಿಷ್ಠರಿಗೆ ನಾನು ಎಂದೂ ದೂರುಗಳನ್ನು ಹೇಳಿಕೊಂಡಿಲ್ಲ, ದಾಖಲಿಸಿಯೂ ಇಲ್ಲ. ಪೂಜ್ಯ ತಂದೆ ಯಡಿಯೂರಪ್ಪನವರು ಎಲ್ಲಾರನ್ನೂ ಸಮಚಿತ್ತ ಭಾವದಿಂದ ನೋಡಿ, ಪಕ್ಷವನ್ನು ಕುಟುಂಬದಂತೆ ಬೆಳೆಸಿದ ಮಾದರಿಯಲ್ಲಿಯೇ ನಡೆಯಬೇಕೆಂಬ ಸಂಕಲ್ಪ ಹೊತ್ತು, ಸಂಘದ ಹಿರಿಯರು ಮತ್ತು ಪಕ್ಷದ ಹಿರಿಯರ ಮಾರ್ಗದರ್ಶನದಲ್ಲಿ ಮುನ್ನಡೆಯುತ್ತಿದ್ದೇನೆ.

**ಸುದೀರ್ಘ ಅವಧಿಯಿಂದ ಸ್ತಿತಿ-ಗತಿಗಳನ್ನು ಅವಲೋಕಿಸಿ ತೆಗೆದುಕೊಂಡ ಕ್ರಮ**

## ಯತ್ನಾಳ್ ಬೆನ್ನಲ್ಲೇ ಎಸ್‌ಟಿಎಸ್, ಹೆಬ್ಬಾರ್‌ಗೆ ಉಚ್ಚಾಟನೆ ಭೀತಿ

• ಉದಯವಾಹಿನಿ, ಹುಬ್ಬಳ್ಳಿ

ಶಾಸಕ ಬಸವನಡಿಗೌಡ ಪಾಟೀಲ್ ಯತ್ನಾಳ್ ಉಚ್ಚಾಟನೆಯಿಂದ ರಾಜ್ಯ ಬಿಜೆಪಿಯಲ್ಲಿ ಸಂಚಲನ ಸೃಷ್ಟಿಯಾಗಿದೆ. ಹೈಕಮಾಂಡ್‌ನ ಈ ನಿರ್ಧಾರದಿಂದ ಯತ್ನಾಳ್ ಬಣದ ಕೆಲ ನಾಯಕರು ಬೇಸರಗೊಂಡಿದ್ದು ಮಾತ್ರವಲ್ಲದೇ, ನಮಗೆ ಇದು ಎಚ್ಚರಿಕೆ ಗಂಟೆಯೇ ಎಂದು ಯೋಚಿಸುತ್ತಿದ್ದಾರೆ. ಯತ್ನಾಳ್ ಉಚ್ಚಾಟನೆ ಬೆನ್ನಲ್ಲೇ ರಾಜ್ಯ ಬಿಜೆಪಿಯ ಶಾಸಕರಾದ ಎಸ್‌ಟಿ ಸೋಮಶೇಖರ್ ಮತ್ತು ಶಿವರಾಮ್ ಹೆಬ್ಬಾರ್‌ಗೂ ಕೂಡ ಉಚ್ಚಾಟನೆ ಭೀತಿ ಶುರುವಾಗಿದೆ. ಈ ಬಗ್ಗೆ ರಾಜ್ಯ ಶಿಸ್ತು ಸಮಿತಿಯಿಂದ ಮಹತ್ವದ ಸುಳಿವು ಸಿಕ್ಕಿದೆ. ಇದು ಎಲ್ಲಾರಿಗೂ ಎಚ್ಚರಿಕೆಯ ಗಂಟೆ. ಶಾಸಕರಾದ ಎಸ್.ಟಿ.ಸೋಮಶೇಖರ್, ಶಿವರಾಮ್ ಹೆಬ್ಬಾರ್ ವಿರುದ್ಧವೂ ಕ್ರಮ ಆಗುತ್ತೆ ಅಂತ ಎಂದು ಲಿಂಗರಾಜ್ ಪಾಟೀಲ್ ಹೇಳಿದರು. ಹುಬ್ಬಳ್ಳಿಯಲ್ಲಿ ಮಾಧ್ಯಮ





ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಪಕ್ಷಕ್ಕೆ ಸಾಮಾನ್ಯ ಕಾರ್ಯಕರ್ತ ಅವಶ್ಯಕ. ಇಲ್ಲಿ ವ್ಯಕ್ತಿಗಿಂತ ಪಕ್ಷ ಮುಖ್ಯ. ನೋಟಿಸ್ ಕೊಟ್ಟರೂ, ಹಗುರವಾಗಿ ಮಾತಾಡತಿದ್ದರು. ಹೀಗಾಗಿ, ಪಕ್ಷದಿಂದ ಬಸನಗೌಡ ಪಾಟೀಲ್ ಯತ್ನಾಳ್‌ರನ್ನು ಉಚ್ಚಾಟನೆ ಮಾಡಲಾಗಿದೆ ಎಂದರು.

ಹೌದು, ಶಾಸಕರಾದ ಎಸ್‌ಟಿ ಸೋಮಶೇಖರ್ ಮತ್ತು ಶಿವರಾಮ್ ಹೆಬ್ಬಾರ್ ಕಾಂಗ್ರೆಸ್‌ನಲ್ಲಿ ಕಾಣಿಸಿಕೊಳ್ಳುತ್ತಿದ್ದು, ಹೆಚ್ಚು ಕಡಿಮೆ ಬಿಜೆಪಿಯಿಂದ ಕಾಲು ಹೊರಗೆ ಇಟ್ಟಿದ್ದಾರೆ. ಅಲ್ಲದೇ,

**ಶಿಸ್ತು ಸಮಿತಿ ಸ್ಫೋಟಕ ಸುಳಿವು**

ಈ ಇಬ್ಬರು ಶಾಕರು ಪಕ್ಷದ ವಿರುದ್ಧ ಹೇಳಿಕೆಗಳನ್ನು ನೀಡುತ್ತಿದ್ದ ಹಿನ್ನೆಲೆಯಲ್ಲಿ ಶಿಸ್ತು ಸಮಿತಿ ನೋಟಿಸ್ ಜಾರಿ ಮಾಡಿದೆ. ನೋಟಿಸ್ 72 ಗಂಟೆಯ ಒಳಗೆ ಉತ್ತರ ನೀಡದಿದ್ದರೇ ಈ ಇಬ್ಬರೂ ನಾಯಕರು ಯತ್ನಾಳ್ ರೀತಿ ಉಚ್ಚಾಟನೆಯಾಗುವ ಸುಳಿವು ದೊರೆತಿದೆ.

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಉಚ್ಚಾಟನೆಗೆ ಬಿಜೆಪಿಯ ಹಿರಿಯ ನಾಯಕ, ವಿಧಾನಸಭೆ ವಿಪಕ್ಷ ಉಪನಾಯಕ ಅರವಿಂದ ಬೆಲ್ಲದ್ ಬೇಸರ ವ್ಯಕ್ತಪಡಿಸಿದ್ದಾರೆ.

# ಭಾರತದಲ್ಲಿ ಧಾರ್ಮಿಕ ಅಲ್ಪಸಂಖ್ಯಾತರಿಗೆ ಕಿರುಕುಳ: ಮೋದಿ ಕೆಂಡಾಮಂಡಲ


### ಅಮೆರಿಕದ ಧಾರ್ಮಿಕ ಸ್ವಾತಂತ್ರ್ಯ ಸಂಸ್ಥೆಯು, ಭಾರತದಲ್ಲಿ ಅಲ್ಪಸಂಖ್ಯಾತರ ಸ್ಥಿತಿಗತಿ ಕುರಿತು ವರದಿ ಪ್ರಕಟ | ತಪ್ಪು ಮಾಹಿತಿ ಹರಡುತ್ತಿದೆ

• ಉದಯವಾಹಿನಿ, ಹೊಸದಿಲ್ಲಿ

ಅಮೆರಿಕದ ಧಾರ್ಮಿಕ ಸ್ವಾತಂತ್ರ್ಯ ಸಂಸ್ಥೆಯ ಭಾರತದಲ್ಲಿ ಧಾರ್ಮಿಕ ಅಲ್ಪಸಂಖ್ಯಾತರಿಗೆ ಕಿರುಕುಳ ನೀಡಲಾಗುತ್ತಿದೆ ಎಂಬ ವರದಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕೆಂಡಾಮಂಡಲವಾಗಿದೆ. ಈ ವರದಿಯನ್ನು ಕಟುಶಬ್ದಗಳಲ್ಲಿ ತಿರಸ್ಕರಿಸಿರುವ ಭಾರತವು, USCIRF ಈ ಮೇಲೆ ಪಕ್ಷಪಾತದ ಆರೋಪ ಹೊರಿಸಿದೆ.

ಅಮೆರಿಕದ ಧಾರ್ಮಿಕ ಸ್ವಾತಂತ್ರ್ಯ ಸಂಸ್ಥೆಯು, ಭಾರತದಲ್ಲಿ ಅಲ್ಪಸಂಖ್ಯಾತರ ಸ್ಥಿತಿಗತಿ ಕುರಿತು ವರದಿ ಪ್ರಕಟಿಸಿದ್ದು, ಇದರಲ್ಲಿ, ಭಾರತದಲ್ಲಿ ಅಲ್ಪಸಂಖ್ಯಾತರಿಗೆ ಕಿರುಕುಳ ನೀಡಲಾಗುತ್ತಿದೆ.. ಎಂದು ಆರೋಪಿಸಿದೆ. ಭಾರತವನ್ನು ನಿರ್ದಿಷ್ಟ ಕಾಳಜಿಯ ದೇಶ ಎಂದು ಪರಿಗಣಿಸಲು ಶಿಫಾರಸು ಮಾಡಿರುವ ಈ ವರದಿ, ಭಾರತದ ಬಾಹ್ಯ ಗುಪ್ತಚರ ಸಂಸ್ಥೆ R&AW ಮೇಲೆ ನಿರ್ಬಂಧ ಹೇರುವಂತೆಯೂ ಶಿಫಾರಸು ಮಾಡಿದೆ. ಈ ವರದಿಗೆ ತೀಕ್ಷ್ಣ ಪ್ರತಿಕ್ರಿಯೆ ನೀಡಿರುವ ಭಾರತದ ವಿದೇಶಾಂಗ ಸಚಿವಾಲಯ, USCIRFನ್ನು ಕಾಳಜಿಯ ಘಟಕ ಎಂದು ಪರಿಗಣಿಸಬೇಕು.. ಎಂದು ಒತ್ತಾಯಿಸಿದೆ. ಅಮೆರಿಕದ ಧಾರ್ಮಿಕ ಸಂಸ್ಥೆಯ ವರದಿಗಳು ಪಕ್ಷಪಾತ ಮತ್ತು ರಾಜಕೀಯ ಪ್ರೇರಿತವಾಗಿರುತ್ತವೆ.. ಎಂದು ಭಾರತದ ವಿದೇಶಾಂಗ ಇಲಾಖೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ.

**ಕಟು ಶಬ್ಧಗಳಲ್ಲಿ ತಿರಸ್ಕರಿಸಿದ ಮೋದಿ**



USCIRF ತಪ್ಪು ಮಾಹಿತಿಯನ್ನು ಹರಡುತ್ತಿದೆ. ಈ ಸಂಸ್ಥೆಯ ವರದಿಗಳು ಪಕ್ಷಪಾತದಿಂದ ಕೂಡಿದ್ದು, ರಾಜಕೀಯ ಪ್ರೇರಿತವಾಗಿರುತ್ತವೆ. ಈ ಸಂಸ್ಥೆ ನಿಖರವಲ್ಲದ ಘಟನೆಗಳನ್ನು ತಪ್ಪಾಗಿ ಅರ್ಥೈಸುತ್ತದೆ. ಭಾರತವು ಬಹುಸಾಂಸ್ಕೃತಿಕ ಸಮಾಜವನ್ನು ಹೊಂದಿದ್ದು, ಧರ್ಮನಿರಪೇಕ್ಷತೆ ಬಗ್ಗೆ ನಮಗೆ ಯಾರೂ ಪಾಠ ಮಾಡುವ ಅವಶ್ಯಕತೆ ಇಲ್ಲ. USCIRF ಭಾರತದ ಬಗ್ಗೆ ತಪ್ಪು ಕಲ್ಪನೆಗಳನ್ನು ಹರಡುತ್ತಿದೆ.. ಎಂದು ವಿದೇಶಾಂಗ ಇಲಾಖೆ ಬಿಡುಗಡೆ ಮಾಡಿರುವ ಪ್ರಕಟಣೆಯಲ್ಲಿ ತೀವ್ರ ಆಕ್ರೋಶ ಹೊರಹಾಕಲಾಗಿದೆ.

ಭಾರತದ ಬಹುಸಾಂಸ್ಕೃತಿಕ ಸಮಾಜದ ಬಗ್ಗೆ ಇಡೀ ಜಗತ್ತೇ ಗೌರವ ಭಾವನೆಯನ್ನು ಹೊಂದಿದೆ. ಆದರೆ USCIRF ಭಾರತದ ಬಗ್ಗೆ ತಪ್ಪು ಕಲ್ಪನೆಗಳನ್ನು ಬಿತ್ತುವುದರಲ್ಲಿ ನಿರತವಾಗಿದ್ದು, ಸಂಸ್ಥೆಯು ಧಾರ್ಮಿಕ ಸ್ವಾತಂತ್ರ್ಯದ ಬಗ್ಗೆ ನಿಜವಾದ ಕಾಳಜಿಯನ್ನು ಹೊಂದಿಲ್ಲ.. ಎಂದು ಭಾರತ ಆಕ್ಷೇಪಿಸಿದೆ.

**ಏನಿದು USCIRF**

USCIRFಅಂದರೆ ಯುನೈಟೆಡ್ ಸ್ಟೇಟ್ಸ್ ಕಮಿಷನ್ ಆನ್ ಇಂಟರ್ನ್ಯಾಷನಲ್ ರಿಲಿಜಿಯಸ್ ಫ್ರೀಡಂ. ಇದು ಅಮೆರಿಕದ ಒಂದು ಅಂಗ ಸಂಸ್ಥೆಯಾಗಿದ್ದು, ಇದು ಬೇರೆ ದೇಶಗಳಲ್ಲಿ ಧಾರ್ಮಿಕ ಸ್ವಾತಂತ್ರ್ಯದ ಬಗ್ಗೆ ಅಮೆರಿಕ ಸರ್ಕಾರಕ್ಕೆ ವರದಿ ನೀಡುತ್ತದೆ. ಆದರೆ ಈ ವರದಿಯನ್ನು ಸ್ವೀಕರಿಸುವ ಅಥವಾ ತಿರಸ್ಕರಿಸುವ ಹಕ್ಕು ಅಮೆರಿಕದ ಸರ್ಕಾರಕ್ಕಿದೆ. ಸದ್ಯ USCIRF ಭಾರತದ ಅಲ್ಪಸಂಖ್ಯಾತರ ಸ್ಥಿತಿಗತಿ ಕುರಿತು ಮತ್ತು R&AW ಮೇಲೆ ನಿರ್ಬಂಧ ಹೇರುವ ಕುರಿತು ನೀಡಿರುವ ವರದಿಯನ್ನು, ಡೊನಾಲ್ಡ್ ಟ್ರಂಪ್ ಆಡಳಿತ ತಿರಸ್ಕರಿಸುವ ಸಾಧ್ಯತೆ ಹೆಚ್ಚು ಎಂದು ಹೇಳಲಾಗಿದೆ.

ಭಾರತವು 1.4 ಶತಕೋಟಿ ಜನರನ್ನು ಹೊಂದಿದೆ. ಇಲ್ಲಿ ಎಲ್ಲಾ ಧರ್ಮದ ಜನರು ಸಹಬಾಳ್ವೆಯ ತತ್ವದ ಆಧಾರದ ಮೇಲೆ ಜೀವನ ಕಟ್ಟಿಕೊಂಡಿದ್ದಾರೆ.

USCIRF ಭಾರತದ ವಾಸ್ತವತೆಯನ್ನು ಎಂದಿಗೂ ಅರ್ಥಮಾಡಿಕೊಳ್ಳುವುದಿಲ್ಲ.. ಎಂದು ಭಾರತ ತಿರುಗೇಟು ನೀಡಿದೆ.

ಭಾರತದ ಪ್ರಜಾಪ್ರಭುತ್ವ ಮತ್ತು ಸಹಿಷ್ಣುತೆಯ ಸ್ಥಾನವನ್ನು ದುರ್ಬಲಗೊಳಿಸುವ USCIRF ಪ್ರಯತ್ನಗಳು ಯಶಸ್ವಿಯಾಗುವುದಿಲ್ಲ. ವಾಸ್ತವವಾಗಿ ಧಾರ್ಮಿಕ ಸಹಿಷ್ಣುತೆ ಬಗ್ಗೆ ಭಾರತಕ್ಕೆ ಪಾಠ ಮಾಡುವ ಈ ಸಂಸ್ಥೆಯ ಪ್ರಯತ್ನಗಳೇ ಹಾಸ್ಯಾಸ್ಪದವಾಗಿದೆ.. ಎಂದು ವಿದೇಶಾಂಗ ಸಚಿವಾಲಯ ವ್ಯಂಗ್ಯವಾಡಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹8,940/Gram24ct ₹8,195/Gram22ct | ಬೆಳ್ಳಿ: ₹102.00/Gram

# ಗ್ರೇಟರ್ ಬೆಂಗಳೂರು ಆಡಳಿತ ಮಸೂದೆ ರಾಜ್ಯಪಾಲರಿಂದ ವಾಪಸ್

## ರಾಜ್ಯಪಾಲರು ಮಸೂದೆ ಹಿಂದಕ್ಕೆ ಕಳುಹಿಸಿದ್ದು ಸರ್ಕಾರಕ್ಕೆ ಹಿನ್ನೆಡೆಯಾಗಿದೆ

• **ಉದಯವಾಹಿನಿ, ಬೆಂಗಳೂರು**

- ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಗ್ರೇಟರ್ ಬೆಂಗಳೂರು ಆಡಳಿತ ಮಸೂದೆ ವಾಪಸ್ ಕಳುಹಿಸಿದ ರಾಜ್ಯಪಾಲರು.
- ರಾಜ್ಯಪಾಲರು ಮಸೂದೆ ಹಿಂದಕ್ಕೆ ಕಳುಹಿಸಿದ್ದು ಸರ್ಕಾರಕ್ಕೆ ಹಿನ್ನೆಡೆಯಾಗಿದೆ.
- ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್‌ಕೆ ಪಾಟೀಲ್ ಮಾಹಿತಿ.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಗ್ರೇಟರ್ ಬೆಂಗಳೂರು ಆಡಳಿತ ಮಸೂದೆಯನ್ನು ರಾಜ್ಯಪಾಲರು ಅಂಕಿತ ಹಾಕದೇ ವಾಪಸ್ ಕಳುಹಿಸಿದ್ದಾರೆ. ಇದು ಸರ್ಕಾರಕ್ಕೆ ಮತ್ತೊಂದು ಹಿನ್ನೆಡೆಯಾಗಿದೆ. ಬಿಬಿಎಂಪಿ ವಿಭಜನೆ ಮಾಡಿ ಬೆಂಗಳೂರು ನಗರ ವಿಸ್ತೀರ್ಣ ಮಾಡುವ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರ ಗ್ರೇಟರ್ ಬೆಂಗಳೂರು ಆಡಳಿತ ಮಸೂದೆ ಜಾರಿಗೆ ಮುಂದಾಗಿತ್ತು.

ಬಜೆಟ್ ಅಧಿವೇಶನದಲ್ಲಿ ವಿಧಾನಸಭೆ, ವಿಧಾನ ಪರಿಷತ್ತಿನಲ್ಲಿ ಈ ಮಸೂದೆ ಅಂಗೀಕಾರವಾಗಿ ರಾಜ್ಯಪಾಲರ ಅಂಕಿತಕ್ಕೆ ಕಳುಹಿಸಲಾಗಿತ್ತು. ಸದ್ಯ ರಾಜ್ಯಪಾಲರು ಅಂಕಿತ ಹಾಕಲು ನಿರಾಕರಣೆ ಮಾಡಿದ್ದಾರೆ. ಈ ಬಗ್ಗೆ ಸ್ವತಃ ರಾಜ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್‌ಕೆ ಪಾಟೀಲ್ ಮಾಹಿತಿ ನೀಡಿದ್ದಾರೆ. ರಾಜ್ಯಪಾಲರು ಕೆಲವು ಸ್ಪಷ್ಟನೆಗಳನ್ನು ಕೋರಿಗೆ ವಾಪಸ್ ಕಳುಹಿಸಿದ್ದಾರೆ.

ಆ ಸ್ಪಷ್ಟನೆಗಳನ್ನು ನೀಡಿ ಮತ್ತೆ ಕಳುಹಿಸಿಕೊಡಲಾಗುವುದು ಎಂದು ಸಚಿವರು ಮಾಹಿತಿ ನೀಡಿದ್ದಾರೆ.

**ಧ್ವನಿ ಮತದ ಮೂಲಕ ಅಂಗೀಕಾರ:** ವಿಧಾನಮಂಡಲ ಜಂಟಿ ಪರಿಶೀಲನಾ ಸಮಿತಿ ಶಿಫಾರಸಿನಂತೆ ಸಮರ್ಥ ಆಡಳಿತ ಹಾಗೂ ಪಾರದರ್ಶಕತೆಗಾಗಿ ಸದ್ಯದ ಬಿಬಿಎಂಪಿಯನ್ನು ವಿಭಜಿಸಿ ಹಲವು ಸಣ್ಣ ಪಾಲಿಕೆಗಳನ್ನು ರಚಿಸಲು ಅವಕಾಶ ಕಲ್ಪಿಸುವ 'ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕ -2024'ಕ್ಕೆ ಸದನ ಧ್ವನಿಮತದ ಒಪ್ಪಿಗೆ ನೀಡಿತ್ತು.



**ಬೆಂಗಳೂರನ್ನು ಒಡೆಯುತ್ತಿಲ್ಲ ಎಂದಿದ್ದ ಡಿಕೆಶಿ:** ಗ್ರೇಟರ್ ಬೆಂಗಳೂರು ಆಡಳಿತ ವಿಧೇಯಕದಲ್ಲಿ 74ನೇ ತಿದ್ದುಪಡಿಗೆ ಯಾವುದೇ ಧಕ್ಕೆಯಾಗುವುದಿಲ್ಲ. ಬೆಂಗಳೂರಿನ ಭವಿಷ್ಯದ ಹಿತದೃಷ್ಟಿಯಿಂದ ಈ ವಿಧೇಯಕ ಪವಿತ್ರವಾದದ್ದು. ಬೆಂಗಳೂರು ವೇಗವಾಗಿ ಬೆಳೆಯುತ್ತಿರುವ ಕಾರಣ ಓರ್ವ ಪಾಲಿಕೆ ಆಯುಕ್ತರು, ಮುಖ್ಯ ಇಂಜಿನಿಯರ್ ಗಳಿಂದ ನಿಭಾಯಿಸಲು ಕಷ್ಟವಾಗುತ್ತಿದೆ. ಹೀಗಾಗಿ ಈ ಮಸೂದೆಯಲ್ಲಿ 7 ಪಾಲಿಕೆ ರಚನೆಗೆ ಮುಂದಾಗಿದ್ದೇವೆ. ಭವಿಷ್ಯದ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಈ ಪ್ರಸ್ತಾವನೆ ಸಲ್ಲಿಸಿದ್ದೇವೆ. ಸ್ಥಳೀಯ ಮಟ್ಟದಲ್ಲಿ ಶಾಸಕರಿಗೆ ನಿಯಂತ್ರಣ ಇರಬೇಕು, ವಾರ್ಡ್ ಸಮಿತಿಗಳಾಗಬೇಕು, ಅಲ್ಲಿ ಜನಪ್ರತಿನಿಧಿಗಳು ಇರಬೇಕು.

**ಧ್ವನಿ ಮತದ ಮೂಲಕ ಅಂಗೀಕಾರ**

ಈ ಮಸೂದೆಯಲ್ಲಿ ಎಲ್ಲಾ ಶಾಸಕರು, ಸಂಸದರು ಕೂಡ ಸದಸ್ಯರಾಗಿರುತ್ತಾರೆ. ಮುಖ್ಯಮಂತ್ರಿಗಳು ಇದರ ಅಧ್ಯಕ್ಷರಾಗಿರುತ್ತಾರೆ. ಜಿಲ್ಲಾ ಉಸ್ತುವಾರಿ ಸಚಿವರು ಇದಕ್ಕೆ ಉಪಾಧ್ಯಕ್ಷರಾಗಿರುತ್ತಾರೆ. ಪಾಲಿಕೆ ರಚನೆಯನ್ನು ನಾವು ಯಾವುದೇ ರೀತಿ ಬದಲಾವಣೆ ಮಾಡುತ್ತಿಲ್ಲ ಎಂದು ತಿಳಿಸಿದ್ದರು.

### ಮಸೂದೆ ಬಗ್ಗೆ ಸರ್ಕಾರದ ನಿಲುವೇನು?

**ಬೆಂಗಳೂರಿನ ಜನಸಂಖ್ಯೆ ಸುಮಾರು 1.5 ಕೋಟಿ ತಲುಪಿದೆ. 786 ಚ.ಕಿಮೀ ವಿಸ್ತೀರ್ಣದ ಬೆಂಗಳೂರು ನಗರವು ವಿಸ್ತರಣೆಯಾಗುತ್ತಿದೆ. ಒಬ್ಬ ಮೇಯರ್ ಮತ್ತು ಆಯುಕ್ತರಿಂದ ನಿರ್ವಹಣೆ ಮಾಡಲಾಗದು. ಆಡಳಿತ ಹತೋಟಿಗೆ ಸಿಗುತ್ತಿಲ್ಲ. ಪಾಲಿಕೆಯಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆಯುತ್ತಿದ್ದು, ಪಾರದರ್ಶಕತೆ ಮತ್ತು ಸಮರ್ಥ ಆಡಳಿತದ ದೃಷ್ಟಿಯಿಂದ ಅಧಿಕಾರ ವಿಕೇಂದ್ರೀಕರಣ ಆಗಬೇಕು. ಹೀಗಾಗಿ, ಗ್ರೇಟರ್ ಬೆಂಗಳೂರು ಆಡಳಿತ ಮಸೂದೆ ಅಗತ್ಯವಿದೆ ಎನ್ನುವುದು ಕರ್ನಾಟಕ ಸರ್ಕಾರದ ನಿಲುವು.**

---

## ತೀವ್ರ ಸುಟ್ಟ ಗಾಯಗಳಿಂದ ಗಂಭೀರ ಪರಿಸ್ಥಿತಿಯಲ್ಲಿ ದಂಪತಿ!

• **ಉದಯವಾಹಿನಿ, ಬೆಂಗಳೂರು**

ಮನೆಯಲ್ಲಿ ಅಡುಗೆ ಅನಿಲದ ಸಿಲಿಂಡರ್ ಸ್ಫೋಟದಿಂದ 45 ವರ್ಷದ ವ್ಯಕ್ತಿ ಹಾಗೂ ಅವರ ಪತ್ನಿಗೆ ತೀವ್ರ ಸುಟ್ಟಗಾಯಗಳಾಗಿದ್ದು, ಗಂಭೀರ ಪರಿಸ್ಥಿತಿಯಲ್ಲಿರುವ ಘಟನೆ ಇಂದು ಬೆಳಗ್ಗೆ ಪುಲಿಕೇಶಿನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಸಿದ್ದೇಶ್, ಅವರ 44 ವರ್ಷದ ಪತ್ನಿ ಶಿಶಿಲಾ ಅವರ ಪರಿಸ್ಥಿತಿ ಚಿಂತಾಜನಕವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬೆಳಗ್ಗೆ ಎದ್ದ ಕೂಡಲೇ ಸಿದ್ದೇಶ್ ಟೀ ಮಾಡಲು ಕಿಚನ್ ಗೆ ಹೋಗಿದ್ದು, ಗ್ಯಾಸ್ ಸ್ಟೌವ್ ಹಚ್ಚಿದ್ದಾರೆ. ಸಿಲಿಂಡರ್ ಹಠಾತ್ತನೇ ಸ್ಫೋಟಿಸಿದ್ದು, ಅವರು ಹಾಗೂ ಅವರ ಪತ್ನಿ ಗಾಯಗೊಂಡಿದ್ದಾರೆ.

ಸ್ಫೋಟಕ್ಕೆ ಅನಿಲ ಸೋರಿಕೆ ಕಾರಣವಿರಬಹುದು ಎಂದು ಪೊಲೀಸರು ಹೇಳಿದ್ದಾರೆ. ಸಿದ್ದೇಶ್ ದೇಹದ ಶೇ. 45 ರಷ್ಟು ಭಾಗ ಸುಟ್ಟ ಗಾಯಗಳಾಗಿದ್ದರೆ, ಅವರ ಪತ್ನಿಗೆ ಶೇ. 90 ರಷ್ಟು ಭಾಗ ಸುಟ್ಟ ಗಾಯಗಳಿಂದ ಸಾವು-ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದಾರೆ. ಇಬ್ಬರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಪರಿಸ್ಥಿತಿ ಗಂಭೀರವಾಗಿದೆ. ಈ ಕುರಿತು ತನಿಖೆ ನಡೆಯುತ್ತಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

---



ಉದಯವಾಹಿನಿ ಚಿತ್ರ

ವಿಜಯನಗರ ಕ್ಷೇತ್ರದ ವ್ಯಾಪ್ತಿಯ ಟೆಲಿಕಾಂ ಬಡಾವಣೆಯಲ್ಲಿರುವ ಶಿಥಿಲಗೊಂಡಿದ್ದ ಶ್ರೀ ಕುಕ್ಕಡಮ್ಮ ದೇವಿಯ ದೇವಸ್ಥಾನವನ್ನು ಹೊಸದಾಗಿ ನಿರ್ಮಾಣ ಮಾಡಲು ಗುದ್ದಲಿ ಪೂಜಾ ಕಾರ್ಯಕ್ರಮವನ್ನು ನೆರವೇರಿಸಿದ ಮಾಜಿ ಉಪ ಮಹಾಪೌರರಾದ ಎಂ.ಲಕ್ಷ್ಮೀನಾರಾಯಣ್ ರವರು,ಇವರ ಜೊತೆ ಕ್ಷೇತ್ರದ ಮುಖಂಡರಾದ ಆರ್.ಚಂದ್ರಪ್ಪ, ಎಲ್.ಹನುಮಂತಪ್ಪ ಹಾಗೂ ಅವಲಹಳ್ಳಿ ಮುಖಂಡರುಗಳು ಭಾಗಿಯಾಗಿದ್ದರು.

---

## ಯುಗಾದಿ, ಹಬ್ಬಕ್ಕೆ ಕೆಎಸ್‌ಆರ್‌ಟಿಸಿಯಿಂದ 2,000 ಹೆಚ್ಚುವರಿ ಬಸ್ ವ್ಯವಸ್ಥೆ

• **ಉದಯವಾಹಿನಿ, ಬೆಂಗಳೂರು**

ಯುಗಾದಿ, ರಂಜಾನ್ ಹಬ್ಬಕ್ಕೆ 2,000 ಹೆಚ್ಚುವರಿ ಬಸ್‌ಗಳನ್ನು ಓಡಿಸುವುದಾಗಿ ಸರ್ಕಾರಿ ಸ್ವಾಮ್ಯದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ(ಕೆಎಸ್‌ಆರ್‌ಟಿಸಿ) ಬುಧವಾರ ತಿಳಿಸಿದೆ. ಮಾರ್ಚ್ 30 ಮತ್ತು 31 ರಂದು ಕ್ರಮವಾಗಿ ಯುಗಾದಿ ಮತ್ತು ರಂಜಾನ್(ಈದ್ ಉಲ್-ಫಿತರ್) ಹಬ್ಬಗಳನ್ನು ಗಮನದಲ್ಲಿಟ್ಟುಕೊಂಡು, ಮಾರ್ಚ್ 28 ರಿಂದ 30 ರವರೆಗೆ ಪ್ರಯಾಣಿಸುವ ಸಾರ್ವಜನಿಕರಿಗೆ ಸಾರಿಗೆ ಸೌಲಭ್ಯವನ್ನು ಒದಗಿಸಲು ಅಸ್ತಿತ್ವದಲ್ಲಿರುವ ವೇಳಾಪಟ್ಟಿಗಳ ಜೊತೆಗೆ ಬೆಂಗಳೂರಿನಿಂದ ವಿವಿಧ ಸ್ಥಳಗಳಿಗೆ 2,000 ಹೆಚ್ಚುವರಿ ಬಸ್‌ಗಳನ್ನು ಓಡಿಸಲು ಕೆಎಸ್‌ಆರ್‌ಟಿಸಿ ವ್ಯವಸ್ಥೆ ಮಾಡಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ. ನಂತರ, ಮಾರ್ಚ್ 31 ರಂದು ರಾಜ್ಯ ಮತ್ತು ಅಂತರರಾಜ್ಯ ಸ್ಥಳಗಳಿಂದ ಬೆಂಗಳೂರಿಗೆ ವಿಶೇಷ ಬಸ್‌ಗಳನ್ನು ಓಡಿಸಲಾಗುವುದು ಎಂದು ಕೆಎಸ್‌ಆರ್ ಟಿಸಿ ತಿಳಿಸಿದೆ. ಬೆಂಗಳೂರಿನ ಕೆಂಪೇಗೌಡ ಬಸ್ ನಿಲ್ದಾಣದಿಂದ ಧರ್ಮಸ್ಥಳ, ಕುಕ್ಕೆಸುಬ್ರಹ್ಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲಬುರಗಿ, ಬಳ್ಳಾರಿ, ಕೊಪ್ಪಳ, ಯಾದಗಿರಿ, ಬೀದರ್, ತಿರುಪತಿ, ವಿಜಯವಾಡ, ಹೈದರಾಬಾದ್ ಮುಂತಾದ ಸ್ಥಳಗಳಿಗೆ ವಿಶೇಷ ಬಸ್ ಇರಲಿದೆ ಬೆಂಗಳೂರಿನ ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ವಿಶೇಷ ಬಸ್‌ಗಳು ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲನಗರ ಮತ್ತು ಮಡಿಕೇರಿ ಕಡೆಗೆ ಪ್ರತ್ಯೇಕವಾಗಿ ಕಾರ್ಯನಿರ್ವಹಿಸಲಿವೆ. ತಮಿಳುನಾಡು ಮತ್ತು ಕೇರಳ ಕಡೆಗೆ ಅಂದರೆ ಮಧುರೈ, ಕುಂಬಕೋಣಂ, ಚೆನ್ನೈ, ಕೊಯಮತ್ತೂರು, ತಿರುಚ್ಚಿ, ಪಾಲಕ್ಕಾಡ್, ತ್ರಿಶೂರ್, ಎರ್ನಾಕುಲಂ, ಕ್ಯಾಲಿಕಟ್ ಮುಂತಾದ ಸ್ಥಳಗಳಿಗೆ ಹೋಗುವ ಸಾರಿಗೆ ಸಂಸ್ಥೆಯ ಪ್ರತಿಷ್ಠಿತ ಬಸ್‌ಗಳು ಶಾಂತಿನಗರದಲ್ಲಿನ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಿಂದ ಹೊರಡಲಿವೆ. ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಬಸ್‌ಗಳ ಆಸನಗಳನ್ನು ಮುಂಗಡವಾಗಿ ಕಾಯ್ದಿರಿಸುವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

---

## ನಾನು ಪಕ್ಷ ವಿರೋಧಿ ಚಟುವಟಿಕೆ ನಡೆಸಿಲ್ಲ ಬಿಜೆಪಿ ಶಾಸಕ ಸೋಮಶೇಖರ್

• **ಉದಯವಾಹಿನಿ, ಬೆಂಗಳೂರು**

ನಾನು ಪಕ್ಷ ವಿರೋಧಿ ಚಟುವಟಿಕೆ ನಡೆಸಿಲ್ಲ. ಸರ್ಕಾರದ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಪಕ್ಷ ವಿರೋಧಿ ಚಟುವಟಿಕೆ ಅಲ್ಲ ಎಂದು ಬಿಜೆಪಿ ಶಾಸಕ ಎಸ್.ಟಿ.ಸೋಮಶೇಖರ್ ತಿಳಿಸಿದರು.ಪಕ್ಷ ನೀಡಿರುವ ನೋಟೀಸ್‌ಗೆ 74 ಗಂಟೆಗಳಲ್ಲಿ ಉತ್ತರ ನೀಡುತ್ತೇನೆ ಎಂದು ಅವರು ಸುದ್ದಿಗೋಷ್ಠಿಯಲ್ಲಿ ಹೇಳಿದರು. ಕಾಂಗ್ರೆಸ್ ಸೇರುವ ಉದ್ದೇಶವಿಲ್ಲ. ಸಾಕಷ್ಟು ಬಹುಮತ ಹೊಂದಿರುವ ಆ ಪಕ್ಷಕ್ಕೆ ನಮ್ಮ ಅಗತ್ಯವೂ ಇಲ್ಲ. 2028ಕ್ಕೆ ವಿಧಾನಸಭೆ ಚುನಾವಣೆ ನಡೆಯಲಿದೆ. ಆಗ ಎಲ್ಲಿಂದ ಸ್ಪರ್ಧಿಸಬೇಕು ಎಂಬುದನ್ನು ಕಾರ್ಯಕರ್ತರ ಜತೆ ಚರ್ಚಿಸಿ ತೀರ್ಮಾನಿಸುತ್ತೇನೆ ಎಂದು ಅವರು ಹೇಳಿದರು. ಪಕ್ಷದ ರಾಜ್ಯ ನಾಯಕರು ಯಾವುದೇ ಸಭೆಗೂ ನನ್ನನ್ನು ಆಹ್ವಾನಿಸುತ್ತಿಲ್ಲ. ಶಾಸಕಾಂಗ ಪಕ್ಷದ ಸಭೆಗೂ ಕರೆಯುತ್ತಿಲ್ಲ, ಲೋಕಸಭಾ ಚುನಾವಣೆ, ವಿಧಾನಪರಿಷತ್ ಚುನಾವಣೆ ವೇಳೆ ಪ್ರಚಾರಕ್ಕೆ ಕರೆಯದೇ ನಿರ್ಲಕ್ಷಿಸಲಾಗಿದೆ. ಯಾವುದೇ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳುತ್ತಿಲ್ಲ ಎಂದರು.

---

## ರೂ. 2 ಲಕ್ಷ ಲಂಚ: ಈಶಾನ್ಯ ಸೆನ್ ಠಾಣೆ ಎಸಿಪಿ, ಎಎಸ್‌ಐ ಬಂಧನ

• **ಉದಯವಾಹಿನಿ, ಬೆಂಗಳೂರು**

ಖಾಸಗಿ ಕಂಪನಿಯೊಂದರ ವೆಬ್‌ಸೈಟ್ ಹ್ಯಾಕಿಂಗ್ ಸಂಬಂಧಿಸಿದ ಕ್ರಿಮಿನಲ್ ಪ್ರಕರಣದಲ್ಲಿ ಆರೋಪಿಗಳನ್ನು ಬಂಧಿಸಲು ರೂ. 4 ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟು, ರೂ.2 ಲಕ್ಷ ಪಡೆಯುತ್ತಿದ್ದ ಈಶಾನ್ಯ ವಿಭಾಗದ ಸೆನ್ ಪೊಲೀಸ್ ಠಾಣೆಯ ಎಸಿಪಿ ತನ್ವೀರ್ ಎಸ್.ಆರ್. ಮತ್ತು ಸಹಾಯಕ ಸಬ್ ಇನ್ಸ್ಪೆಕ್ಟರ್ (ಎಎಸ್‌ಐ) ಕೃಷ್ಣಮೂರ್ತಿ ಅವರನ್ನು ಲೋಕಾಯುಕ್ತ ಪೊಲೀಸರು ಮಂಗಳವಾರ ತಡರಾತ್ರಿ ಬಂಧಿಸಿದ್ದಾರೆ. ಅದ್ದಿ ಗ್ರೂಪ್ ಆಫ್ ಕಂಪನೀಸ್ ಎಂಬ ಉದ್ಯಮ ಸಮೂಹದ ವೆಬ್‌ಸೈಟ್ ಅನ್ನು ಹ್ಯಾಕ್ ಮಾಡಿದ್ದ ದುಷ್ಕರ್ಮಿಗಳು, ಅದರಲ್ಲಿ ತಪ್ಪು ಮಾಹಿತಿ ಪ್ರಕಟಿಸಿದ್ದರು. ಇದರಿಂದ ಕಂನಿಗೆ ನಷ್ಟವಾಗುತ್ತಿತ್ತು. ಈ ಸಂಬಂಧ ಕಂಪನಿಯ ಮಾಲೀಕ ಮಧುಸೂದನ್ ಬಿ.ಎಸ್. ಅವರು ಈಶಾನ್ಯ ವಿಭಾಗದ ಸೆನ್ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಪೊಲೀಸರು ಎಫ್‌ಐಆರ್ ದಾಖಲಿಸಿದ್ದರೂ, ಆರೋಪಿಗಳನ್ನು ಬಂಧಿಸಿರಲಿಲ್ಲ. ಆರೋಪಿಗಳನ್ನು ಬಂಧಿಸುವಂತೆ ಮಧುಸೂದನ್ ಅವರು ಮನವಿ ಮಾಡಿದ್ದರು. ಆರೋಪಿಗಳನ್ನು ಬಂಧಿಸಲು 4 ಲಕ್ಷ ಲಂಚ ನೀಡುವಂತೆ ಎಸಿಪಿ ಮತ್ತು ಎಎಸ್‌ಐ ಬೇಡಿಕೆ ಇಟ್ಟಿದ್ದರು. ಚೌಕಾಸಿ ಮಾಡಿದಾಗ ರೂ.2 ಲಕ್ಷ ನೀಡಿದರೆ ಆರೋಪಿಗಳನ್ನು ಬಂಧಿಸುವುದಾಗಿ ಹೇಳಿದ್ದರು. ಮಧುಸೂದನ್ ಅವರು ಈ ಕುರಿತು ಲೋಕಾಯುಕ್ತ ಪೊಲೀಸ್ ವಿಭಾಗದ ಬೆಂಗಳೂರು ನಗರ ಘಟಕ-2ಕ್ಕೆ ದೂರು ಸಲ್ಲಿಸಿದ್ದರು.ಲಂಚದ ಹಣವನ್ನು ಎಎಸ್‌ಐ ಬಳಿ ನೀಡುವಂತೆ ಎಸಿಪಿ ತನ್ವೀರ್ ಸೂಚಿಸಿದ್ದರು. ರಾತ್ರಿ ಆರ್.ಟಿ.ನಗರದ ಸ್ಥಳವೊಂದಕ್ಕೆ ಬಂದು ಹಣ ತಲುಪಿಸುವಂತೆ ಕೃಷ್ಣಮೂರ್ತಿ ಸೂಚಿಸಿದ್ದರು. ಅದರಂತೆ ಅಲ್ಲಿಗೆ ತಲುಪಿದ ದೂರುದಾರರು ಹಣ ತಲುಪಿಸಿದರು. ತಕ್ಷಣ ದಾಳಿಮಾಡಿದ ಲೋಕಾಯುಕ್ತ ಪೊಲೀಸರು ಆರೋಪಿಯನ್ನು ಬಂಧಿಸಿದರು. ಎಸಿಪಿ ತನ್ವೀರ್ ಅವರ ಮನೆಯನ್ನು ಪತ್ತೆಮಾಡಿ ತಡರಾತ್ರಿ ವೇಳೆಗೆ ಬಂಧಿಸಿದರು.

---

## ಪತ್ನಿ ಕೊಂದು ಪೊಲೀಸರಿಗೆ ಶರಣಾದ ಕ್ಯಾಬ್ ಚಾಲಕ

• **ಉದಯವಾಹಿನಿ, ಬೆಂಗಳೂರು**



39 ವರ್ಷದ ಕ್ಯಾಬ್ ಚಾಲಕನೊಬ್ಬ ತನ್ನ ಪತ್ನಿಯ ಕತ್ತು ಹಿಸುಕಿ ಕೊಂದು ನಂತರ ಪೊಲೀಸ್ ಠಾಣೆಗೆ ಆಗಮಿಸಿ ಶರಣಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಪೊಲೀಸರು ಅಪರಾಧ ನಡೆದ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದ ನಂತರ ಆರೋಪಿ ಚಂದ್ರಶೇಖರ್ ನನ್ನು ವಶಕ್ಕೆ ಪಡೆದಿದ್ದಾರೆ. ನಂತರ ಮೃತದೇಹ ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ.

ಆರೋಪಿಗೆ ತನ್ನ ಪತ್ನಿಯ ಶೀಲದ ಬಗ್ಗೆ ಅನುಮಾನವಿತ್ತು ಮತ್ತು ಪ್ರಾಥಮಿಕವಾಗಿ ಇದು ಕೊಲೆಗೆ ಕಾರಣ ಎಂದು ಪೊಲೀಸರು ತಿಳಿಸಿದ್ದಾರೆ. ಪೊಲೀಸರ ಪ್ರಕಾರ, ಆರೋಪಿಯ ಪತ್ನಿ ಯಾವಾಗಲೂ ಫೋನ್‌ನಲ್ಲಿ ಯಾರೊಂದಿಗೂ ಮಾತನಾಡುತ್ತಿದ್ದಳು. ಇದು ಆಗಾಗ್ಗೆ ದಂಪತಿಗಳ ನಡುವೆ ಜಗಳಕ್ಕೆ ಕಾರಣವಾಗುತ್ತಿತ್ತು.

ಮಂಗಳವಾರವೂ ಸಹ, ಚಂದ್ರಶೇಖರ್ ಮತ್ತು ಅವರ 35 ವರ್ಷದ ಪತ್ನಿ ವೇಲಾರಮಣಿ ನಡುವೆ ಜಗಳ ನಡೆದಿದೆ. ಈ ಜಗಳ ವಿಕೋಪಕ್ಕೆ ತಿರುಗಿ ಆಕೆಯನ್ನು ಕತ್ತು ಹಿಸುಕಿ ಕೊಂದಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

**ಚಂದ್ರಶೇಖರ್ ಸುಮಾರು 12 ವರ್ಷಗಳ ಹಿಂದೆ ಮದುವೆಯಾಗಿದ್ದು, ಅವರಿಗೆ 10 ವರ್ಷ ಮತ್ತು ಆರು ವರ್ಷದ ಇಬ್ಬರು ಗಂಡು ಮಕ್ಕಳಿದ್ದಾರೆ. ಘಟನೆ ನಡೆದ ಸಮಯದಲ್ಲಿ ಮಕ್ಕಳು ಶಾಲೆ ಹೋಗಿದ್ದರು ಅವರು ತಿಳಿಸಿದ್ದಾರೆ. ಈ ಸಂಬಂಧ ನಾವು ಕೊಲೆ ಪ್ರಕರಣವನ್ನು ದಾಖಲಿಸಿದ್ದೇವೆ ಮತ್ತು ಆರೋಪಿಯನ್ನು ಬಂಧಿಸಿದ್ದೇವೆ ಎಂದು ಅಧಿಕಾರಿ ಹೇಳಿದ್ದಾರೆ.**

ಚಂದ್ರಶೇಖರ್ ಪತ್ನಿಯನ್ನು ಕೊಂದ ನಂತರ ಸಂಪಿಗೆಹಳ್ಳಿ ಪೊಲೀಸ್ ಠಾಣೆಗೆ ಹೋಗಿ ತಾನೇ ಪತ್ನಿ ಕೊಲೆ ಮಾಡಿರುವುದಾಗಿ ಒಪ್ಪಿಕೊಂಡಿದ್ದಾನೆ. ವಿಚಾರಣೆಯ ಸಮಯದಲ್ಲಿ, ಆಕೆಗೆ ಬೇರೊಬ್ಬರೊಂದಿಗೆ ಸಂಬಂಧವಿದೆ ಎಂದು ಶಂಕಿಸಿರುವುದಾಗಿ ಆರೋಪಿ, ಪೊಲೀಸರಿಗೆ ತಿಳಿಸಿದ್ದಾನೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಹೇಳಿದ್ದಾರೆ.

---

## ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ತನ್ನ ಪತ್ನಿಗೆ ವರದಕ್ಷಿಣೆ ಕಿರುಕುಳ

• **ಉದಯವಾಹಿನಿ, ಬೆಂಗಳೂರು**



ಕಾನೂನು ಪಾಲಿಸಬೇಕಾದ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ತನ್ನ ಪತ್ನಿಗೆ ವರದಕ್ಷಿಣೆ ಕಿರುಕುಳ ನೀಡಿ ಪೊಲೀಸ್ ಬೆಲ್ಟ್‌ನಿಂದ ಮಾರಣಾಂತಿಕ ಹಲ್ಲೆ ನಡೆಸಿ ಕೊಲೆಗೆ ಯತ್ನಿಸಿರುವ ಘಟನೆ ಬಯಲಾಗಿದೆ.

ಪತ್ನಿಗೆ ವರದಕ್ಷಿಣೆ ಕಿರುಕುಳ, ಕೊಲೆಗೆ ಯತ್ನಿಸಿರುವ ಆರೋಪದಲ್ಲಿ ಸಿಲುಕಿರುವ ಧರ್ಮಸ್ಥಳ ಠಾಣೆಯ ಪಿಎಸ್‌ಐ ಪಿ.ಕಿಶೋರ್ ಹಾಗೂ ಅವರ ಕುಟುಂಬಸ್ಥರ ವಿರುದ್ಧ ಚಂದ್ರಾ ಲೇಔಟ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಪತಿ, ಕಿಶೋರ್ ಎಸಗಿರುವ ಕ್ರೌರ್ಯದ ಕುರಿತು ದಾಖಲೆ ಹಾಗೂ ವೈದ್ಯಕೀಯ ವರದಿ ಸಮೇತ ಪೊಲೀಸರಿಗೆ ದೂರು ನೀಡಿರುವ ಅವರ ಪತ್ನಿ ವರ್ಷಾ (27) ಅವರಿಗೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿದಿದೆ. ಪ್ರಕರಣ ದಾಖಲಾಗುತ್ತಿದ್ದಂತೆ ಪಿಎಸ್‌ಐ ಕಿಶೋರ್ ಮೊಬೈಲ್ ಸ್ವಿಚ್ ಆಫ್ ಮಾಡಿಕೊಂಡಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. 2024ರ ಫೆಬ್ರವರಿಯಲ್ಲಿ ನೆಲಮಂಗಲ ಮೂಲದ ಪಿಎಸ್‌ಐ ಕಿಶೋರ್ ಜತೆ ನಾಗರಬಾವಿ ನಿವಾಸಿ ಬಿಬಿಎ ಪದವೀಧರೆ ವರ್ಷಾ ಅವರ ವಿವಾಹ ಸುಮಾರು 60 ಲಕ್ಷ ರೂ. ವೆಚ್ಚದಲ್ಲಿ ಅದ್ದೂರಿಯಾಗಿ ನಡೆದಿತ್ತು. ಮದುವೆ ಸಮಯದಲ್ಲಿ ಒಂದು ಬ್ರೇಸ್‌ಲೆಟ್, ಒಂದು ಉಂಗುರ, ಎರಡು ಲಕ್ಷ ರೂ.ನಗದನ್ನು ವರದಕ್ಷಿಣೆಯಾಗಿ ಕಿಶೋರ್ ಪಡೆದಿದ್ದರು. ಮದುವೆ ಖರ್ಚಿಗೆ ಎಂದು ಪ್ರತ್ಯೇಕವಾಗಿ 10 ಲಕ್ಷ ರೂ. ಅವರ ಕುಟುಂಬಸ್ಥರು ಪಡೆದುಕೊಂಡಿದ್ದರು.

ಅಷ್ಟೇ ಅಲ್ಲದೆ, 23.60 ಲಕ್ಷರೂ. ಮೌಲ್ಯದ ಕಾರೊಂದನ್ನು ಕಿಶೋರ್ ಪಡೆದುಕೊಂಡಿದ್ದರು. ಸರಕಾರಿ ನೌಕರಿಯಲ್ಲಿ ಇರುವ ಕಾರಣಕ್ಕೆ ತೊಂದರೆ ಆಗಲಿದೆ ಎಂದು ತಮ್ಮ ತಂದೆಯ ಹೆಸರಿನಲ್ಲಿ ಖರೀದಿಸಿದ ಕಾರನ್ನು ಕಿಶೋರ್ ಅವರೇ ಬಳಸುತ್ತಿದ್ದಾರೆ.

ಇಷ್ಟಾದರೂ ಪುನಃ ತವರು ಮನೆಯಿಂದ ಪ್ರತಿ ತಿಂಗಳು 50 ಸಾವಿರ ರೂ. ತರುವಂತೆ ಗಂಡ ಕಿಶೋರ್ ಹಾಗೂ ಅವರ ಕುಟುಂಬಸ್ಥರು ನಿರಂತರವಾಗಿ ಕಿರುಕುಳ ನೀಡುತ್ತಿದ್ದಾರೆ ಎಂದು ವರ್ಷಾ ದೂರಿನಲ್ಲಿ ಆರೋಪಿಸಿದ್ದಾರೆ.

**ಬೆಲ್ಟ್, ಲಟ್ಟಣಿಗೆಯಿಂದ ಹಲ್ಲೆ:** ಮದುವೆ ಯಾದ ಕೆಲ ತಿಂಗಳಲ್ಲಿಯೇ ತವರು ಮನೆ ಯಿಂದ ಹೆಚ್ಚಿನ ಹಣ ತರುವಂತೆ ಗಂಡ ಕಿಶೋರ್ ಕಿರುಕುಳ ನೀಡುತ್ತಿದ್ದರು. ಇದಕ್ಕೆ ಒಪ್ಪದಿದ್ದಕ್ಕೆ ಅವಾಚ್ಯ ಶಬ್ದಗಳಿಂದ ನಿಂದಿಸಿ ಹಲ್ಲೆ ನಡೆಸುತ್ತಿದ್ದರು. ಗನ್ ಹಣೆಗೆ ಇಟ್ಟು ಕೊಲ್ಲುವುದಾಗಿ ಬೆದರಿಕೆ ಒಡ್ಡುತ್ತಿದ್ದರು.

---

## ಕರ್ನಾಟಕ ಅಂಚೆ ಸರ್ಕಲ್ ನಿಂದ 32 ಸಮಗ್ರ ವಿತರಣಾ ಕೇಂದ್ರ ಆರಂಭ

• **ಉದಯವಾಹಿನಿ, ಬೆಂಗಳೂರು**

ಅಂಚೆ ಇಲಾಖೆಯು ವಿತರಣಾ ಪ್ರಕ್ರಿಯೆಯ ದಕ್ಷತೆಯನ್ನು ಹೆಚ್ಚಿಸುವ ಗುರಿಯೊಂದಿಗೆ ಕರ್ನಾಟಕದಲ್ಲಿ ಜುಲೈ 1 ರೊಳಗೆ ರಾಜ್ಯಾದ್ಯಂತ 32 ಸಮಗ್ರ ವಿತರಣಾ ಕೇಂದ್ರಗಳನ್ನು ತೆರೆಯಲು ಮುಂದಾಗಿದೆ.ಪ್ರಸ್ತುತ ಇರುವ ದೈನಂದಿನ ವಿತರಣೆಯ ಸಂಖ್ಯೆಯನ್ನು ಎರಡಕ್ಕೆ ಹೆಚ್ಚಿಸುವ ಗುರಿಯನ್ನು ಇಲಾಖೆ ಹೊಂದಿದ್ದು, ಇದರಿಂದ ಸಾರ್ವಜನಿಕರಿಗೆ ಪ್ರಯೋಜನವಾಗಲಿದೆ.

ಕರ್ನಾಟಕದಲ್ಲಿ 58 ಮುಖ್ಯ ಅಂಚೆ ಕಚೇರಿಗಳು ಮತ್ತು 1,741 ಉಪ ಅಂಚೆ ಕಚೇರಿಗಳಿವೆ. ಎಲ್ಲಾ ಮುಖ್ಯ ಅಂಚೆ ಕಚೇರಿಗಳು ಮತ್ತು ಸುಮಾರು 50 ಪ್ರತಿಶತ ಉಪ ಅಂಚೆ ಕಚೇರಿಗಳು ಪತ್ರಗಳು ಮತ್ತು ಪಾರ್ಸೆಲ್‌ಗಳನ್ನು ತಲುಪಿಸುತ್ತಿವೆ.



ಉದಯವಾಹಿನಿ ಚಿತ್ರ

ವಿತರಣಾ ಪ್ರಕ್ರಿಯೆಯನ್ನು ಸುಗಮಗೊಳಿಸಲು ಮತ್ತು ಸುಧಾರಿಸಲು ಇದು ದೇಶಾದ್ಯಂತ ನಡೆಯುತ್ತಿರುವ ಪ್ರಯತ್ನದ ಭಾಗವಾಗಿದೆ. ಈ ಕೇಂದ್ರಗಳಲ್ಲಿರುವ ಎಲ್ಲಾ ಬೀಟ್‌ಗಳನ್ನು ಯಾಂತ್ರೀಕೃತಗೊಳಿಸಲಾಗುವುದು ಎಂದು ರಾಜೇಂದ್ರ ಕುಮಾರ್ ಹೇಳಿದ್ದಾರೆ.

ನಮ್ಮ ವಿತರಣಾ ಸಿಬ್ಬಂದಿ ಈಗ ಒಂದೇ ಬಾರಿ ವಿತರಣೆ ಮಾಡುತ್ತಿದ್ದಾರೆ. ಈ ದೈನಂದಿನ ವಿತರಣೆಯ ಸಂಖ್ಯೆಯನ್ನು ಎರಡಕ್ಕೆ ಹೆಚ್ಚಿಸಲು ನಾವು ಯೋಜಿಸುತ್ತಿದ್ದೇವೆ ಎಂದು ಅವರು ತಿಳಿಸಿದರು. ಇನ್ನು ಸಮಗ್ರ ಕೇಂದ್ರಗಳು ಸ್ಥಳಾವಕಾಶವಿರುವ ಅಸ್ತಿತ್ವದಲ್ಲಿರುವ ದೊಡ್ಡ ಅಂಚೆ ಕಚೇರಿಗಳಲ್ಲಿ ಸ್ಥಾಪನೆಯಾಗುತ್ತವೆ ಮತ್ತು ಅವುಗಳಿಗೆ 'ಬ್ರೌನ್‌ಫೀಲ್ಡ್ ಕೇಂದ್ರಗಳು' ಎಂದು ಬಿಲ್ ಮಾಡಲಾಗುತ್ತದೆ. ಜಿಪಿಒ, ಬಸವನಗುಡಿ, ಜೆಪಿ ನಗರ, ಚಾಮರಾಜಪೇಟೆ ಮತ್ತು ಪೀಣ್ಯ ಪೋಸ್ಟ್ ಆಯ್ಕೆಯಾದ ಕಚೇರಿಗಳಲ್ಲಿ ಸೇರಿವೆ ಎಂದು ಅವರು ಹೇಳಿದ್ದಾರೆ.

**''ಜುಲೈ 1 ರೊಳಗೆ ನಾವು ಪ್ರಾರಂಭಿಸಲು ಯೋಜಿಸಿರುವ 32 ಕೇಂದ್ರಗಳಲ್ಲಿ ಒಟ್ಟು 16 ಕೇಂದ್ರಗಳು ಬೆಂಗಳೂರಿನಲ್ಲಿವೆ. ಪತ್ರಗಳನ್ನು ತಲುಪಿಸುವ ಅಂಚೆ ಕಚೇರಿಗಳು ವಿಶಿಷ್ಟ ಪಿನ್ ಕೋಡ್‌ಗಳನ್ನು ಹೊಂದಿವೆ'' ಎಂದು ಕರ್ನಾಟಕ ವೃತ್ತದ ಮುಖ್ಯ ಪೋಸ್ಟ್‌ಮಾಸ್ಟರ್ ಜನರಲ್ ಎಸ್ ರಾಜೇಂದ್ರ ಕುಮಾರ್ ಅವರು ಟಿಒಐಗೆ ತಿಳಿಸಿದ್ದಾರೆ**


---

## ಗಾರ್ಡನ್ ಸಿಟಿಗೆ ಮತ್ತೆ ಗಾರ್ಬೇಜ್ ಸಂಕಷ್ಟ ಶುರು?

• **ಉದಯವಾಹಿನಿ, ಬೆಂಗಳೂರು**

ತಮ್ಮ ಸೇವೆಗಳನ್ನು ಕ್ರಮಬದ್ಧಗೊಳಿಸುವಂತೆ ಹಾಗೂ ಇತರೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿರುವ ಬಿಬಿಎಂಪಿಯ ತ್ಯಾಜ್ಯ ನಿರ್ವಹಣಾ ಘಟಕವಾದ ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಲಿಮಿಟೆಡ್ (ಬಿಎಸ್‌ಡಬ್ಲ್ಯೂಎಂಎಲ್) ನ ಸಾವಿರಾರು ಕ್ಲೀನರ್‌ಗಳು ಮತ್ತು ಚಾಲಕರು ಬುಧವಾರ ಪ್ರತಿಭಟನೆ ನಡೆಸಲಿದ್ದು, ಇದರ ಪರಿಣಾಮ ಗಾರ್ಡನ್ ಸಿಟಿ ಬೆಂಗಳೂರಿಗೆ ಮತ್ತೆ ತ್ಯಾಜ್ಯದ ಸಂಕಷ್ಟ ಎದುರಾಗುವ ಸಾಧ್ಯತೆಗಳಿವೆ.

ಕಾರ್ಮಿಕ ಸಂರಕ್ಷಣೆ ಸಂಘಟನೆಯ ಅಧ್ಯಕ್ಷ ತ್ಯಾಗರಾಜ್, ಅವರು ಮಾತನಾಡಿ, ಡಿಸಿಎಂ ಮತ್ತು ಬೆಂಗಳೂರು ಅಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್ ನಾಲ್ಕು ತಿಂಗಳ ಹಿಂದೆ ನಮ್ಮ ಸಮಸ್ಯೆಯನ್ನು ಪರಿಶೀಲಿಸುವುದಾಗಿ ಭರವಸೆ ನೀಡಿದ್ದರು. ಆದರೆ, ಯಾವುದೇ ಪ್ರಗತಿ ಕಂಡುಬಂದಿಲ್ಲ. ಸುಮಾರು 10,000 ಕ್ಲೀನರ್‌ಗಳು ಮತ್ತು ಚಾಲಕರು ಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿದ್ದಾರೆ, ಸರ್ಕಾರ ಮತ್ತು ಬಿಬಿಎಂಪಿ ನಮ್ಮನ್ನು ನಿರ್ಲಕ್ಷಿಸಿದೆ ಎಂದು ಹೇಳಿದ್ದಾರೆ. ನಾವು ನಗರವನ್ನು ಸ್ವಚ್ಛವಾಗಿಡುತ್ತೇವೆ. ನಮ್ಮ ಜೀವಗಳನ್ನು ಪಣಕ್ಕಿಟ್ಟು ಕೆಲಸ ಮಾಡುತ್ತೇವೆ, ಆದರೆ ಸರ್ಕಾರ ನಮ್ಮನ್ನು ಬಿಬಿಎಂಪಿಯ ಘನತ್ಯಾಜ್ಯ ನಿರ್ವಹಣಾ ವಿಭಾಗದ ಖಾಯಂ ಸಿಬ್ಬಂದಿಯನ್ನಾಗಿ ಮಾಡುವ ಅಥವಾ ನೇರ ಪಾವತಿ ನೀಡುವ ಯಾವುದೇ ಭರವಸೆಯನ್ನು ನೀಡುತ್ತಿಲ್ಲ. ಕಾರ್ಮಿಕರಿಗೆ ಬಿಬಿಎಂಪಿ ಗುತ್ತಿಗೆದಾರರು ವೇತನ ನೀಡುತ್ತಿದ್ದಾರೆ.



ಉದಯವಾಹಿನಿ ಚಿತ್ರ

**ನೌಕರರಿಂದ ಮುಷ್ಕರದ ಬೆದರಿಕೆ**

ಶಿವಕುಮಾರ್ ಅವರನ್ನು ಕನಿಷ್ಠ ನಾಲ್ಕು ಬಾರಿ ಭೇಟಿಯಾಗಿ, ಕನಿಷ್ಠ ಪಕ್ಷ ನೇರ ಪಾವತಿ ನೀಡಿ, ಗುತ್ತಿಗೆದಾರರ ಹಿಡಿತದಿಂದ ಮುಕ್ತಗೊಳಿಸುವಂತೆ ವಿನಂತಿಸಿದ್ದೆವು. ಆದರೆ, ಸ್ಪಂದನೆ ಸಿಕ್ಕಿಲ್ಲ.

ಹೀಗಾಗಿ ಬಿಬಿಎಂಪಿ ಮುಖ್ಯ ಕಚೇರಿಯಲ್ಲಿ ಸಭೆ ಸೇರಿ, ಫ್ರೀಡಂ ಪಾರ್ಕ್‌ಗೆ ಮೆರವಣಿಗೆ ನಡೆಸಿ, ಅನಿರ್ದಿಷ್ಟಾವಧಿ ಮುಷ್ಕರ ನಡೆಸುತ್ತೇವೆಂದು ತಿಳಿಸಿದರು. ಮಂಡಿಸಲಾಗುವ ಬಿಬಿಎಂಪಿ ಬಜೆಟ್‌ನಲ್ಲಿ ನಮ್ಮ ಕಳವಳಗಳನ್ನು ಪರಿಹರಿಸಲಾಗುವುದು ಎಂದು ಭರವಸೆಯಲ್ಲಿದ್ದೇವೆ. ನಮ್ಮ ಬೇಡಿಕೆಗಳು ಗಮನಕ್ಕೆ ಬರಲಿ ಎಂದೇ ಬುಧವಾರದಿಂದ ಪ್ರತಿಭಟನೆ ನಡೆಸಲು ನಿರ್ಧರಿಸಿದ್ದೇವೆಂದು ಹೇಳಿದರು.

---

## ರಾಜಧಾನಿ ಜನರಿಗೆ ಈ ಬಜೆಟ್ ಸಿಹಿಯೋ ಕಹಿಯೋ? ನಿರೀಕ್ಷೆ ಏನಿದೆ?

• **ಉದಯವಾಹಿನಿ, ಬೆಂಗಳೂರು**

ಬಿಬಿಎಂಪಿಯ 2025-26 ನೇ ಸಾಲಿನ ಬಜೆಟನ್ನು ಹಣಕಾಸು ವಿಭಾಗದ ವಿಶೇಷ ಆಯುಕ್ತ ತಾ. ಕೆ.ಹರೀಶ್ ಕುಮಾರ್ ಅವರು ಮಾರ್ಚ್ 28 ರಂದು ಮಂಡಿಸಲಿದ್ದಾರೆ. ಈ ಸಲ ಬಜೆಟ್ ಗಾತ್ರವು 19 ಸಾವಿರ ಕೋಟಿ ರೂ. ದಾಟುವ ಸಾಧ್ಯತೆಗಳಿವೆ.

ನಗರದ ಪುರಭವನದಲ್ಲಿ ಬೆಳಗ್ಗೆ 11 ಗಂಟೆಗೆ ದಾಖಲೆ ವೆಚ್ಚದ ಆಯವ್ಯಯವನ್ನು ಮಂಡನೆ ಮಾಡಲಾಗುತ್ತಿದೆ. ರಾಜ್ಯ ಸರಕಾರವು ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಭರಪೂರ ಅನುದಾನ ಒದಗಿಸಿದೆ.

ರಾಜ್ಯದ ಆರ್ಥಿಕತೆಗೆ ಹೆಚ್ಚಿನ ಕೊಡುಗೆ ನೀಡುತ್ತಿರುವ ಬೆಂಗಳೂರಿನ ಮೂಲಸೌಲಭ್ಯಗಳ ಅಭಿವೃದ್ಧಿಗೆ ಪ್ರತಿ ವರ್ಷ ನೀಡುತ್ತಿದ್ದ 3 ಸಾವಿರ ಕೋಟಿ ರೂ. ಅನುದಾನವನ್ನು 7 ಸಾವಿರ ಕೋಟಿ ರೂ.ಗಳಿಗೆ ಹೆಚ್ಚಿಸಲಾಗಿದೆ. ರಾಜ್ಯ, ಕೇಂದ್ರ ಸರಕಾರದ ಅನುದಾನ ಹಾಗೂ ಸ್ವಂತ ಸಂಪನ್ಮೂಲವನ್ನು ನೆಚ್ಚಿಕೊಂಡು 19 ಸಾವಿರ ಕೋಟಿಗಿಂತ ಹೆಚ್ಚು ವೆಚ್ಚದ ಮುಂಗಡಪತ್ರ ಮಂಡಿಸಲು ಬಿಡಿಎಂಪಿ ತಯಾರಿ ಮಾಡಿಕೊಂಡಿದೆ. ಪಾಲಿಕೆ ಇತಿಹಾಸದಲ್ಲಿಯೇ ದಾಖಲೆದು ಬಜೆಟ್ ಇದಾಗಲಿದೆ. ಮಹತ್ವಾಕಾಂಕ್ಷಿ ಪೂರ್ವ-ಪಶ್ಚಿಮ, ಉತ್ತರ-ದಕ್ಷಿಣ ಕಾರಿಡಾರ್‌ನಲ್ಲಿ ಸುರಂಗ ರಸ್ತೆ ನಿರ್ಮಾಣಕ್ಕೆ 19 ಸಾವಿರ ರೂ.ಗಳ ಗ್ಯಾರಂಟಿಯ ಖಾತ್ರಿಯನ್ನು ಸರಕಾರ ಒದಗಿಸಿದೆ. ಉತ್ತರ-ದಕ್ಷಿಣ ಕಾರಿಡಾರ್‌ನ ವಿಸ್ತೃತ ಯೋಜನಾ ವರದಿ ಸಿದ್ಧವಾಗಿದ್ದು, ಟೆಂಡರ್ ಕರೆಯುವುದಷ್ಟೇ ಬಾಕಿ ಇದೆ. ರಾಜಧಾನಿಯನ್ನು ತೀವ್ರವಾಗಿ ಬಾಧಿಸುತ್ತಿರುವ ಸಂಚಾರ ದಟ್ಟಣೆ, ಕಸ, ರಸ್ತೆ ಗುಂಡಿ ಸಮಸ್ಯೆ ನಿವಾರಣೆಗೆ 2025-26 ನೇ ಸಾಲಿನ ಬಜೆಟ್‌ನಲ್ಲಿ ಹೆಚ್ಚಿನ ಆದ್ಯತೆ ನೀಡುವ ಸಾಧ್ಯತೆಗಳಿವೆ. ಅಲ್ಲದೆ, ಪ್ರವಾಹ ಪರಿಸ್ಥಿತಿ ನಿಯಂತ್ರಣಕ್ಕೂ ಅನುದಾನ ಒದಗಿಸುವ ನಿರೀಕ್ಷೆ ಇದೆ. ಈಗಾಗಲೇ ಸರಕಾರ ಪ್ರವಾಹ ನಿಯಂತ್ರಣಕ್ಕೆ ವ್ಯವಸ್ಥಿತ ಒಳಚರಂಡಿ ಜಾಲ ಎಸ್‌ಟಿಪಿಗಳನ್ನು ನಿರ್ಮಿಸಲು ಬಿಬಿಎಂಪಿ, ಜಲಮಂಡಳಿಗೆ 3 ಸಾವಿರ ಕೋಟಿ ರೂ. ಆರ್ಥಿಕ ನೆರವು ನೀಡಲು ತೀರ್ಮಾನಿಸಿದೆ. ಕಾಲುವೆಯ ಬಫರ್ ಪ್ರದೇಶವನ್ನು ಬಳಸಿಕೊಂಡು 3 ಸಾವಿರ ಕೋಟಿ ರೂ. ವೆಚ್ಚದಲ್ಲಿ 300 ಕಿ.ಮೀ. ಹೆಚ್ಚುವರಿ ರಸ್ತೆ ಜಾಲ ಅಭಿವೃದ್ಧಿ ಹಾಗೂ 463 ಕಿ.ಮೀ. ಉದ್ದದ ಆರ್ಟೀರಿಯಲ್ ಮತ್ತು ಸಬ್ ಆರ್ಟೀರಿಯಲ್ ರಸ್ತೆ ಜಾಲದ ಅಭಿವೃದ್ಧಿಗೆ 600 ಕೋಟಿ ರೂ. ಅನುದಾನ ಒದಗಿಸುವುದಾಗಿ ಬಜೆಟ್ ನಲ್ಲಿ ಸರಕಾರ ಘೋಷಿಸಿದೆ.



**ಗುರಿ 5210 ಕೋಟಿ -ಸಂಗ್ರಹ 4650 ಕೋಟಿ:** ಆಸ್ತಿ ತೆರಿಗೆಯೇ ಪಾಲಿಕೆಯ ಪ್ರಮುಖ ವರಮಾನದ ಮೂಲ. ಆದರೆ, ನಿರೀಕ್ಷಿತ ತೆರಿಗೆ . 2024-25 ಕ್ಕೆ 5210.48 ಕೋಟಿ ರೂ ತೆರಿಗೆ ಸಂಗ್ರಹದ ಗುರಿ ಹೊಂದಲಾಗಿತ್ತು. ಈವರೆಗೆ 4050 ಕೋಟಿ ರೂ. ವಸೂಲಾಗಿದೆ. ಜಾಹೀರಾತು ನೀತಿ, ಪ್ರೀಮಿಯಂ ಎಫ್‌ಎಆರ್ ಮಾರಾಟದಿಂದ ಹೆಚ್ಚುವರಿಯಾಗಿ 1500 ಕೋಟಿ ರೂ. ತೆರಿಗೆಯೇತರ ಸಂಪನ್ಮೂಲ ಸಂಗ್ರಹಿಸುವ ಗುರಿ ಈಡೇರಿಲ್ಲ. ಈ ಸಲ ತೆರಿಗೆ ವಸೂಲಾತಿಗೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲು ತೀರ್ಮಾನಿಸಲಿದೆ. ತೆರಿಗೆ ಜಾಲದಿಂದ ಹೊರಗಿರುವ ಸುಮಾರು 6 ಲಕ್ಷ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ತಂದು ವರಮಾನ ಹೆಚ್ಚಿಸಿಕೊಳ್ಳಲು ಉದ್ದೇಶಿಸಲಾಗಿದೆ.

---

# ಹನಿಟ್ರ್ಯಾಪ್ ಕೆಟ್ಟ ಚಾಳಿಯಾಗಿದೆ, ಅನಿಷ್ಟ ಪದ್ಧತಿ: ಪಾಟೀಲ್ ಆಕ್ರೋಶ

## ಸುಪ್ರೀಂ ಕೋರ್ಟ್ ಸಹ ಈ ಪ್ರಕರಣವನ್ನು ವಜಾ ಮಾಡಿದೆ ಎಂದು ಕೈಗಾರಿಕಾ ಸಚಿವ ಎಂಬಿ ಪಾಟೀಲ್ ಪ್ರತಿಕ್ರಿಯೆ

• **ಉದಯವಾಹಿನಿ, ಬೆಂಗಳೂರು**

ಹನಿಟ್ರ್ಯಾಪ್ ಕೆಟ್ಟ ಚಾಳಿಯಾಗಿದೆ ಹಾಗೂ ಅನಿಷ್ಟ ಪದ್ಧತಿಯಾಗಿದೆ. ಇದರಿಂದ ರಾಜ್ಯಕ್ಕೆ ಕೆಟ್ಟ ಹೆಸರು ಬರುತ್ತಿದೆ ಎಂದು ಕೈಗಾರಿಕಾ ಸಚಿವ ಎಂಬಿ ಪಾಟೀಲ್ ಆಕ್ರೋಶ ವ್ಯಕ್ತಪಡಿಸಿದರು.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಹನಿಟ್ರ್ಯಾಪ್ ವಿಚಾರವಾಗಿ ಸುಪ್ರೀಂಕೋರ್ಟ್‌ನಲ್ಲೂ ಅರ್ಜಿ ವಜಾ ಮಾಡಿದೆ. ರಾಜಕೀಯವಾಗಿ ಮುಗಿಸಲು, ಬ್ಲ್ಯಾಕ್ ಮೇಲ್ ಮಾಡಲಿಕ್ಕೆ ಇದನ್ನು ಬಳಸಿಕೊಳ್ಳುವುದು ಹೀನಕೃತ್ಯ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಸಹಕಾರಿ ಸಚಿವ ಕೆ ಎನ್ ರಾಜಣ್ಣ ವಿರುದ್ಧ ನಡೆದಿರುವ ಹನಿಟ್ರ್ಯಾಪ್ ಯತ್ನ ಪ್ರಕರಣದ ಹಿನ್ನೆಲೆಯಲ್ಲಿ ಪ್ರತಿಕ್ರಿಯೆ ನೀಡಿ, 'ಹನಿಟ್ರ್ಯಾಪ್ ನಿಂದ ರಾಜ್ಯಕ್ಕೆ ಕೆಟ್ಟ ಹೆಸರು ಬರುತ್ತಿದೆ. ಸುಪ್ರೀಂ ಕೋರ್ಟ್ ಸಹ ಈ ಪ್ರಕರಣವನ್ನು ವಜಾ ಮಾಡಿದೆ' ಎಂದು ಹೇಳಿದರು. ಡಿಸಿಎಂ ಡಿ ಕೆ ಶಿವಕುಮಾರ್ ಅವರು, ಸಂವಿಧಾನ ತಿದ್ದುಪಡಿ ಕುರಿತು ನೀಡಿದ್ದಾರೆ ಎನ್ನಲಾದ ಹೇಳಿಕೆ ವಿಚಾರವಾಗಿ, ಬಿಜೆಪಿಯವರು ಮಾಜಿ ಸಂಸದ ಅನಂತ ಕುಮಾರ ಹೆಗ್ಡೆ ಹೇಳಿದ ಹೇಳಿಕೆ ಬಗ್ಗೆ ಮೊದಲು ಮಾತನಾಡಲಿ. ಅವಾಗ ಯಾಕೆ ಪ್ರತಿಭಟನೆ ಮಾಡಲಿಲ್ಲ. ಯಾಕೆ ಬೂತ್ ಲೇವಲ್‌ನಲ್ಲಿ ಹೋರಾಟ ಯಾಕೆ ಮಾಡಲಿಲ್ಲ? ಡಿಕೆ ಶಿವಕುಮಾರ ಈಗಾಗಲೇ ಹೇಳಿದ್ದಾರೆ.

**ಹನಿಟ್ರ್ಯಾಪ್ ವಿಚಾರವಾಗಿ ರಾಜಣ್ಣ ದೂರು**

ನಾನು ಆ ರೀತಿ ಮಾತನಾಡಿಲ್ಲ ಅಂತಾ ಹೇಳಿದ್ದಾರೆ' ಎಂದು ಸಮರ್ಥಿಸಿಕೊಂಡರು.

ಅನಂತ ಕುಮಾರ್ ಹೆಗ್ಡೆ ನಾವು ಅಧಿಕಾರಕ್ಕೆ ಬಂದಿರೋದೇ ಸಂವಿಧಾನ ಬದಲಾವಣೆಗೆ ಅಂದಾಗ ಯಾಕೆ ಪ್ರತಿಭಟನೆ ಮಾಡಲಿಲ್ಲ. ಅವಾಗ ಅವರನ್ನ ಯಾಕೆ ಮಂತ್ರಿ ಸ್ಥಾನದಿಂದ ವಜಾ ಮಾಡಲಿಲ್ಲ ಎಂದು ಬಿಜೆಪಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.



**' ಹನಿಟ್ರ್ಯಾಪ್ ವಿಚಾರವಾಗಿ ರಾಜಣ್ಣ ದೂರು ನೀಡಲು ಹಿಂದೇಟು ಹಾಕಿರುವುದು ಅವರಿಗೆ ಬಿಟ್ಟ ವಿಚಾರ. ಅದು ಅವರಿಗೆ ಹಾಗೂ ಗೃಹ ಸಚಿವರಿಗೆ ಬಿಟ್ಟ ವಿಚಾರವಾಗಿದೆ ಎಂದರು. ಇನ್ನು ಇದೇ ಸಂದರ್ಭದಲ್ಲಿ ಡಿಜಿಟಲ್ ಮೀಟರ್ ಅಳವಡಿಕೆ ವಿಚಾರ ದೊಡ್ಡ ಹಗರಣದ ಆರೋಪದ ಬಗ್ಗೆ ಕೇಳಿದ ಪ್ರಶ್ನೆಗೆ ' ಈ ಆರೋಪದ ಬಗ್ಗೆ ನಾನು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ. ಬದಲಾಗಿ ಇಂಧನ ಸಚಿವರು ಉತ್ತರ ನೀಡ್ತಾರೆ ' ಎಂದರು.**

**ನಾರಾಯಣಪುರ ಡ್ಯಾಂ ನೀರು ಬಿಟ್ಟ ವಿಚಾರಕ್ಕೆ ಮಾತನಾಡಿದ ಅವರು, 10 ಟಿಎಂಸಿ ನೀರು ಬಿಡಲು ಸಾಧ್ಯವಿಲ್ಲ. ಒಂದು ಟಿಎಂಸಿ ನೀರು ಬಿಟ್ಟಿರಬಹುದು ಎಂದು ಸಮರ್ಥಿಸಿಕೊಂಡರು. ಎಂಎಸ್ ಎಂಇ ವಿಚಾರವಾಗಿ ಚರ್ಚಿಸಲು ದೆಹಲಿಗೆ ಹೋಗುವ ಪ್ಲ್ಯಾನ್ ಇದೆ. ಈ ವೇಳೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡುತ್ತೇನೆ. ಸಂಪುಟ ವಿಸ್ತರಣೆ ವಿಚಾರವಾಗಿ ಚರ್ಚಿಸಲು ಸಿಎಂ ಸಿದ್ದರಾಮಯ್ಯ ಅವರಿಗೆ ದೆಹಲಿಗೆ ಆಹ್ವಾನ ಬಂದಿರುವ ಬಗ್ಗೆ ನನಗೆ ಮಾಹಿತಿ ಇಲ್ಲ. ಅವರು ಹೇಳಿದ್ರೆ, ಅವರ ಬಳಿಯೇ ಮಾಹಿತಿ ಕೇಳಿ ಎಂದರು.**






### ಮುಸ್ಲಿಮರಿಗೆ ಮೋದಿ ಮೀಸಲಾತಿ ಕೊಟ್ಟರೆ ಸರಿ, ನಾವು ಕೊಟ್ಟರೆ ತಪ್ಪೇ?: ಯತೀಂದ್ರ ಸಿದ್ದರಾಮಯ್ಯ

# ನಾವು ಧರ್ಮದ ಆಧಾರದ ಮೇಲೆ ಮೀಸಲಾತಿ ಕೊಟ್ಟಿಲ್ಲ

• **ಉದಯವಾಹಿನಿ, ಮೈಸೂರು**

ಮುಸ್ಲಿಂ ಸಮುದಾಯದ 70 ಜಾತಿಗೆ ಮೀಸಲಾತಿ ಕೊಟ್ಟಿದ್ದೇವೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಹೆಮ್ಮೆಯಿಂದ ಹೇಳಿದ್ದಾರೆ. ಮುಸ್ಲಿಮರಿಗೆ ಮೋದಿ ಮೀಸಲಾತಿ ನೀಡಿದರೆ ಸರಿ ನಾವು, ಮಾಡಿದರೆ ತಪ್ಪಾಗುತ್ತದೆಯೇ? ಎಂದು ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಅವರು ಪ್ರಶ್ನೆ ಮಾಡಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರಿ ಗುತ್ತಿಗೆ ಕಾಮಗಾರಿಗಳಲ್ಲಿ ಮುಸ್ಲಿಂ ಸಮುದಾಯಕ್ಕೆ ಶೇ.4 ಮೀಸಲಾತಿ ನೀಡಿರುವ ವಿಚಾರವಾಗಿ ಪ್ರತಿಕ್ರಿಯೆ ನೀಡಿದರು. ನಾವು ಧರ್ಮದ ಆಧಾರದ ಮೇಲೆ ಮೀಸಲಾತಿ ಕೊಟ್ಟಿಲ್ಲ. ಹಿಂದುಳಿದ ವರ್ಗ ಎನ್ನುವ ಕಾರಣಕ್ಕೆ ಕೊಟ್ಟಿದ್ದೇವೆ. ಅಲ್ಪಸಂಖ್ಯಾತರು, ಹಿಂದುಳಿದ ವರ್ಗಕ್ಕೆ ಮೀಸಲಾತಿ ಕೊಟ್ಟಾಗ ಮುಸ್ಲಿಂ ಧರ್ಮದವರಿಗೂ ಕೊಡಬೇಕಾಗುತ್ತದೆ. ಮುಸ್ಲಿಂ ಮೀಸಲಾತಿ ಕರ್ನಾಟಕ ಮಾತ್ರವಲ್ಲದೇ ಬೇರೆ ರಾಜ್ಯದಲ್ಲೂ ಇದೆ. ಆದರೆ, ನಾವು ಕೇವಲ ಮುಸ್ಲಿಂರಿಗೆ ಮಾತ್ರ ಮೀಸಲಾತಿ ಕೊಟ್ಟಿಲ್ಲ ಎಂದು ಹೇಳಿದರು.

1977ರಲ್ಲೇ ಹಾವನೂರು ಆಯೋಗ ಮುಸ್ಲಿಮರನ್ನ ಹಿಂದುಳಿದ ವರ್ಗಕ್ಕೆ ಸೇರಿಸಿದೆ. ಹಿಂದುಳಿದ ವರ್ಗಕ್ಕೆ ಕೊಟಾಗ ಮುಸ್ಲಿಮರಿಗೂ ಕೊಡಬೇಕಾಗುತ್ತದೆ. ಮುಸ್ಲಿಂ ಸಮುದಾಯದ 70 ಜಾತಿಗೆ ಮೀಸಲಾತಿ ಕೊಟ್ಟಿದ್ದೇವೆ ಎಂದು ಮೋದಿಯವರು ಹೆಮ್ಮೆಯಿಂದ ಹೇಳಿದ್ದಾರೆ. ಮೋದಿಯವರು ಮಾಡಿದರೆ ಸರಿ ನಾವು ಮಾಡಿದ್ರೆ ತಪ್ಪಾಗುತ್ತದೆಯೇ? ಎಂದು ಬಿಜೆಪಿಗೆ ತಿರುಗೇಟು ನೀಡಿದರು. ಇದೇ ವೇಳೆ ಸಚಿವ ಸ್ಥಾನದ ಆಕಾಂಕ್ಷಿಯಾಗಿದ್ದೀರಾ ಎಂಬ ಪ್ರಶ್ನೆಗೆ ಉತ್ತರಿಸಿ, ನಮ್ಮ ತಂದೆಯವರು ಎಲ್ಲಿಯವರೆಗೂ ಸಿಎಂ ಆಗಿರುತ್ತಾರೆ ಅಲ್ಲಿವರೆಗೆ ಸಚಿವ ಸ್ಥಾನ ಕೇಳಲ್ಲ. ನಾನು ಸಚಿವ ಸ್ಥಾನದ ಆಕಾಂಕ್ಷಿಯಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.



ಬಳಿಕ ಹನಿಟ್ರ್ಯಾಪ್ ಪ್ರಕರಣ ಕುರಿತು ಪ್ರತಿಕ್ರಿಯಿಸಿದ ಅವರು, ಬಿಜೆಪಿಯಲ್ಲೇ ಹನಿಟ್ರ್ಯಾಪ್ ಗಳು ನಡೆದಿವೆ. ಹೀಗಾಗಿಯೇ ಬಿಜೆಪಿ ಶಾಸಕರು, ಮಾಜಿ ಸಿಎಂ ಕೋರ್ಟ್ ನಲ್ಲಿ ಸ್ಟೇ ತಂದಿದ್ದಾರೆ. ಹೀಗಿರುವಾಗ ಬಿಜೆಪಿಯವರಿಗೆ ನಮ್ಮ ನಾಯಕರ ಬಗ್ಗೆ ಮಾತನಾಡಲು ಏನು ಹಕ್ಕಿದೆ ಎಂದು ಪ್ರಶ್ನೆ ಮಾಡಿದರು. ಸಚಿವರ ಮನೆಗೆ ಸಿಸಿಟಿವಿ ಹಾಕದ ವಿಚಾರಕ್ಕೆ ಪ್ರತಿಕ್ರಿಯಿಸಿ, ಕೆಲವರು ಹನಿಟ್ರ್ಯಾಪ್ ಮಾಡಲೆಂದೇ ಸಚಿವರ ಮನೆಗೆ ಬರುತ್ತಾರೆ. ಈಗಾಗಿ ಸಿಸಿಟಿವಿ ಹಾಕಿಸಬೇಕು. ಸಚಿವರ ಮನೆಗಳಿಗೆ ಸಿಸಿಟಿವಿ ಇಲ್ಲದ ವಿಚಾರ ನನಗೆ ಗೊತ್ತಿಲ್ಲ. ಆದರೆ, ಸಿಎಂ ಮನೆಗೆ ಸಿಸಿಟಿವಿ ಇದೆ. ನಾನು ಅಲ್ಲೇ ಇರುವುದರಿಂದ ಸಿಸಿಟಿವಿ ಇರುವ ಬಗ್ಗೆ ನನಗೆ ಗೊತ್ತಿದೆ, ಬೇರೆಯವರ ಮನೆಯ ವಿಚಾರ ನನಗೆ ಗೊತ್ತಿಲ್ಲ ಎಂದರು. ಸಿಎಂ ಮನೆಗೆ ಪೊಲೀಸ್ ಬಂದೂಬಸ್ತ್ ಸಹ ಇದೆ, ಯಾರೇ ಬಂದರೂ ರೆಕಾರ್ಡ್ ಆಗುತ್ತೆ. ಸಚಿವರ ಮನೆಗೆ ಖಂಡಿತವಾಗಿ ಸಿಸಿಟಿವಿ ಹಾಕಬೇಕು. ಸಿಸಿಟಿವಿ ಇದ್ದರೇ ಹನಿಟ್ರ್ಯಾಪ್ ಮಾಡುವವರ ಮೇಲೆ ಕಣ್ಣಿಡಬಹುದು ಎಂದು ಹೇಳಿದರು. ಡಿ.ಕೆ.ಶಿವಕುಮಾರ್ ಅವರ ಸಂವಿಧಾನ ಬದಲಾವಣೆ ವಿಚಾರವಾಗಿ ಮಾತನಾಡಿ, ಬಿಜೆಪಿಯವರಿಗೆ ಏನು ವಿಷಯ ಇಲ್ಲ. ಡಿ.ಕೆ.ಶಿವಕುಮಾರ್ ಅವರು ಈಗಾಗಲೇ ಸ್ಪಷ್ಟನೆ ಕೊಟ್ಟಿದ್ದಾರೆ.

> **ಇಂಗ್ಲಿಷ್ ಅವರ ಮಾತೃ ಭಾಷೆ ಅಲ್ಲ. ಆದ್ದರಿಂದ ಅವರು ಹೇಳಬೇಕಾದ ವಿಚಾರ ಸರಿಯಾಗಿ ಹೇಳಲು ಆಗಿಲ್ಲ ಅಷ್ಟೆ. ಸಂವಿಧಾನ ರಕ್ಷಣೆ ಮಾಡಲು ಕಾಂಗ್ರೆಸ್ ಹೋರಾಟ ಮಾಡಿಕೊಂಡು ಬಂದಿದೆ. ನಾವು ಸಂವಿಧಾನ ಬದಲಾಯಿಸುವ ಪ್ರಯತ್ನ ಮಾಡಲ್ಲ. ಸಂವಿಧಾನ ಬದಲಾವಣೆ ವಿಚಾರವಾಗಿ ಬಿಜೆಪಿ ಅವರು ಹೇಳಿಕೆ ಕೊಟ್ಟ ಮೇಲೆ ಸ್ಪಷ್ಟನೆ ಕೊಟ್ಟಿಲ್ಲ. ಅನಂತ್ ಕುಮಾರ್ ಹೆಗಡೆ ಹೇಳಿಕೆ ಕೊಟ್ಟ ನಂತರ ಸ್ಪಷ್ಟನೆ ಕೊಡುವ ಕೆಲಸ ಮಾಡಿಲ್ಲ. ಆದರೆ ಡಿಕೆಶಿ ಸ್ಪಷ್ಟನೆಕೊಟ್ಟಿದ್ದಾರೆ. ಆದ್ರೆ ಬಿಜೆಪಿಯವರಿಗೆ ಕೆಲಸ ಇಲ್ಲದೆ ಈ ರೀತಿ ಮಾಡುತ್ತಿದ್ದಾರೆ**
>
> – **ಯತೀಂದ್ರ ಸಿದ್ದರಾಮಯ್ಯ**, ವಿಧಾನ ಪರಿಷತ್ ಸದಸ್ಯ

## ಹನಿಟ್ರ್ಯಾಪ್ ಮಾಡಿ ಬ್ಲಾಕ್‌ಮೇಲ್ ಮಾಡುವವರಿಗೆ ಶಿಕ್ಷೆಯಾಗಬೇಕು

ರಾಜಕಾರಣಿಗಳಿಗೆ ಸಾಕಷ್ಟು ಜನರು ಫೋನ್ ಮಾಡುತ್ತಾರೆ, ಕೆಲವೊಂದು ಬಾರಿ ಯಾರು ಎಂದು ಗೊತ್ತಿಲ್ಲದಿದ್ದರೂ ಸಹ ಫೋನನ್ನು ರಿಸೀವ್ ಮಾಡುತ್ತೇವೆ, ತಂತ್ರಜ್ಞಾನವನ್ನು ದುರುಪಯೋಗಪಡಿಸಿಕೊಂಡು ಹನಿಟ್ರ್ಯಾಪ್ ಮೂಲಕ ಬ್ಲಾಕ್‌ಮೇಲ್ ಮಾಡುವವರಿಗೆ ತಕ್ಕ ಶಿಕ್ಷೆಯಾಗಬೇಕು ಯತೀಂದ್ರ ತಿಳಿಸಿದ್ದಾರೆ. ಬಿಜೆಪಿ ಸರ್ಕಾರದ ಅವಧಿಯಲ್ಲೂ ಸಹ 17 ಶಾಸಕರು, ಸಚಿವರ ಮೇಲೆ ಹನಿಟ್ರ್ಯಾಪ್ ನಡೆದಿತ್ತು ಎನ್ನಲಾಗಿದೆ. ರಾಜಣ್ಣ ಅವರು ಇಂತಹ ಪಕ್ಷದವರೇ ಹನಿಟ್ರ್ಯಾಪ್ ಮಾಡಿದ್ದಾರೆಂದು ಎಲ್ಲಿಯೂ ಹೇಳಿಲ್ಲ. ಅವರು ದೂರು ಕೊಟ್ಟರೆ ತನಿಖೆ ಮಾಡಲಾಗುವುದು. ಇದರ ಹಿಂದೆ ದೊಡ್ಡ ಜಾಲವೇ ಇದ್ದು ತನಿಖೆಯ ಮೂಲಕವೇ ಜಾಲವನ್ನು ಪತ್ತೆ ಹಚ್ಚಬೇಕಿದೆ ಎಂದರು. ತಂತ್ರಜ್ಞಾನವನ್ನು ದುರುಪಯೋಗಪಡಿಸಿಕೊಳ್ಳುವವರು ವಿಡಿಯೋ ಕಾಲ್ ಆನ್ ಮಾಡಿದ ತಕ್ಷಣ ಎಐ ಮೂಲಕ ತಪ್ಪು ವಿಡಿಯೋ ಕಳುಹಿಸಲಾಗುತ್ತದೆ. ನಂತರ ಹನಿಟ್ರ್ಯಾಪ್ ಮಾಡಲಾಗುತ್ತದೆ. ಅಂತವರಿಗೆ ಶಿಕ್ಷೆಯಾಗಬೇಕು. ಹಣ, ಕೆಲಸ ಮಾಡಿಕೊಳ್ಳುವ ಉದ್ದೇಶದಿಂದ ಹನಿಟ್ರ್ಯಾಪ್ ಮಾಡುತ್ತಿದ್ದಾರೆ. ರಾಜಣ್ಣ ಅವರು ಯಾರ ಮೇಲೂ ಆರೋಪ ಮಾಡುತ್ತಿಲ್ಲ. ತನಿಖೆಯಿಂದಷ್ಟೇ ಸತ್ಯಾಸತ್ಯತೆ ಹೊರಬರಬೇಕು. ಆದರೆ ಬಿಜೆಪಿಯವರು ಏಕೆ ಊಹೆ ಮಾಡಿಕೊಳ್ಳಬೇಕು ಎಂದರು. ಹೈಕಮಾಂಡ್‌ಗೆ ನಮ ಪಕ್ಷದ ನಾಯಕರು ಈ ವಿಚಾರವನ್ನು ತಿಳಿಸುತ್ತಾರೆ. ಕೇಂದ್ರ ನಾಯಕರಿಗೆ ನಮ ನಾಯಕರು ದೂರು ಕೊಟ್ಟಿರುವ ಬಗ್ಗೆ ತಿಳಿದಿಲ್ಲ. ರಾಜಣ್ಣ ಅವರು ಸಹ ದೆಹಲಿಗೆ ಹೋಗಿ ದೂರು ಕೊಡಬಹುದು. ಯಾರಾದರೂ ಅವರನ್ನು ಟಾರ್ಗೆಟ್ ಮಾಡಿದರೆ ಅವರ ಮೇಲೆಯೂ ದೂರು ಕೊಡಲಿ ಎಂದರು.

---

## ಕೈ ಆಡಳಿತ ಕಸಕ್ಕೆ ಸಮ: ಛಲವಾದಿ ನಾರಾಯಣಸ್ವಾಮಿ

• **ಉದಯವಾಹಿನಿ, ರಾಮನಗರ**

ರಾಜ್ಯದಲ್ಲಿ ಆಡಳಿತ ಹೆಚ್ಚು ಕಡಿಮೆ ಮಹಾನಗರ ಪಾಲಿಕೆಯಲ್ಲಿ ಗಾರ್ಬೇಜ್ ಪರಿಸ್ಥಿತಿ ಹೇಗಿದೆಯೋ ಕಾಂಗ್ರೆಸ್ ಸರಕಾರದ ಆಡಳಿತವೂ ಗಾರ್ಬೇಜ್‌ಗೆ (ಕಸಕ್ಕೆ) ಸಮನಾಗಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಟೀಕಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಬುಧವಾರ ಮಾತನಾಡಿದ ಅವರು, 45 – 46 ವರ್ಷಗಳ



ರಾಜಕೀಯ ಜೀವನದಲ್ಲಿ ಇಂಥ ಕೆಟ್ಟ ಸರಕಾರವನ್ನು ನಾವೆಂದೂ ಕೂಡ ನೋಡಿರಲು ಸಾಧ್ಯವಿಲ್ಲ. ಆದರಿಂದ ಸಂಪೂರ್ಣ ಅಭಿವೃದ್ಧಿ ಶೂನ್ಯವಾಗಿದೆ. ಕಾನೂನು– ಸುವ್ಯವಸ್ಥೆ ಸಂಪೂರ್ಣ ಕುಸಿದಿದೆ. ಅತ್ಯಂತ ಕೆಟ್ಟ ಆಡಳಿತ ವ್ಯವಸ್ಥೆಯನ್ನು ಮಾನ್ಯ ಮುಖ್ಯ ಮಂತ್ರಿಗಳು ಪರಿಚಯಿಸಿದ್ದಾರೆ ಎಂದು ಆಕ್ಷೇಪಿಸಿದರು. ಅಭಿವೃದ್ಧಿ ಆಗುತ್ತಿಲ್ಲ, ರೈತರ ಸಮಸ್ಯೆಗಳಿಗೆ ಗಮನ ಕೊಡುತ್ತಿಲ್ಲ, ಹಿಂದುಳಿದವರು, ದಲಿತರ ಸಮಸ್ಯೆಗಳಿಗೆ ಪರಿಹಾರ ಕೊಡುವ ಬದಲಾಗಿ ಇವರೆಲ್ಲವನ್ನೂ ಮರೆ ಮಾಚಿದ್ದಾರೆ. ದುಡ್ಡೆಷ್ಟು ಹೊಡೆದಿರಿ? ಆಸ್ತಿ ಎಷ್ಟು ಮಾಡಿದ್ದೀರಿ? ಜನರಿಗೆ ಎಷ್ಟು ತೆರಿಗೆ ಹಾಕಿದ್ದೀರಿ? ಬೆಲೆ ಏರಿಕೆ ಎಷ್ಟು ಮಾಡಿದಿರಿ? ದಲಿತರ ಹಣ ಎಷ್ಟು ಲೂಟಿ ಮಾಡಿದ್ದೀರಿ ಎಷ್ಟು ಜನರ ಹನಿಟ್ರ್ಯಾಪ್ ಮಾಡಿದಿರಿ? ಫೋನ್ ಟ್ಯಾಪಿಂಗ್ ಎಷ್ಟಾಗಿದೆ ಎಂಬ ಚರ್ಚೆ ಆಗುವಂತಾಗಿದೆ ಎಂದು ಟೀಕಿಸಿದರು. ಇದು ಆಡಳಿತವೇ? ಇಂಥ ಕೆಟ್ಟ ಪರಿಸ್ಥಿತಿಯಲ್ಲಿ ಈ ಸರಕಾರ ಇರಲೇಬಾರದಿತ್ತು. ಇಂಥ ಪರಿಸ್ಥಿತಿಗೆ ರಾಜ್ಯವನ್ನು ತಳ್ಳುವ ಬದಲಾಗಿ ರಾಜೀನಾಮೆ ಕೊಟ್ಟು ಆ ಕಡೆ ಹೊರಟು ಹೋಗಬೇಕಿತ್ತು ಎಂದು ತಿಳಿಸಿದರು. ದಲಿತರಿಗೆ ವಂಚನೆ, ಮೋಸ ಮಾಡಿದ ಕಾಂಗ್ರೆಸ್ ಸರಕಾರ ಪರಿಶಿಷ್ಟ ಜಾತಿ, ಪಂಗಡದ ಅಭಿವೃದ್ಧಿಗೆ ಮೀಸಲಾಗಿಟ್ಟ ಎಸ್‌ಇಪಿ, ಟಿಎಸ್‌ಪಿ ಸಂಬಂಧಿಸಿದ 39 ಸಾವಿರ ಕೋಟಿ ಹಣವನ್ನು ನುಂಗಿ ನೀರು ಕುಡಿದದ್ದು ಕಾಂಗ್ರೆಸ್ ಸರಕಾರ, ಮುಖ್ಯಮಂತ್ರಿಗಳು ಎಂದು ಟೀಕಿಸಿದರು. ಹನಿಟ್ರ್ಯಾಪ್‌ನಲ್ಲಿ ಬಿಜೆಪಿಯ ಯಾವ ನಾಯಕರೂ ಇಲ್ಲ. ಇದ್ದಿದ್ದರೆ ಈಗಾಗಲೇ ದೊಡ್ಡ ರಂಪರಾಮಾಯಣ ಆಗುತ್ತಿತ್ತು. ಅದನ್ನು ಕೂಡಲೇ ತನಿಖೆಗೆ ಆದೇಶಿಸುತ್ತಿದ್ದರು. ಇದು ಕಾಂಗ್ರೆಸ್ಸಿನ ಮನೆಯ ಮೇಲೆ ಕಾಂಗ್ರೆಸ್ಸಿನವರೇ ಅತ್ಯಾಚಾರ ಮಾಡಿದಂತಿದೆ ಎಂದು ಟೀಕಿಸಿದರು. ಕಾಂಗ್ರೆಸ್ಸಿನ ನಾಯಕರೇ ತಮ ನಾಯಕರ ಮೇಲೆ ಹನಿಟ್ರ್ಯಾಪ್ ಮಾಡಿಸುವ ಅವಸ್ಥೆಯನ್ನು ನಾವಿವತ್ತು ಕಾಣುತ್ತಿದ್ದೇವೆ. ಇವರಿಗೆ ಮುಜುಗರವೂ ಇಲ್ಲ, ನೋವೂ ಇಲ್ಲ ಎಂದರು.

> **ಇಷ್ಟಾದರೂ ಕೂಡ ಹನಿಟ್ರ್ಯಾಪ್ ಬಗ್ಗೆ ಮುಖ್ಯಮಂತ್ರಿಗಳು ಒಂದು ಮಾತನ್ನೂ ಆಡಿಲ್ಲ; ತನಿಖೆ ಮಾಡಿಸೋಣ ಎಂದದ್ದು ಬಿಟ್ಟರೆ ಬೇರೇನೂ ಹೇಳಿಲ್ಲ. ಅಂದ ಮೇಲೆ ಮುಖ್ಯಮಂತ್ರಿಗಳಿಗೆ ಹನಿಟ್ರ್ಯಾಪ್ ಭಯ ಏನಾದರೂ ಇದೆಯೇ ಎಂಬ ಅನುಮಾನ ಕಾಡುವಂತಾಗಿದೆ ಎಂದು ತಿಳಿಸಿದರು. ನಂದೂ ಎಲ್ಲಾದರೂ ಇದೆಯೇ ಎಂಬ ಭಯ ಅವರಿಗೂ ಇರಬೇಕು ಎಂದು ವಿಶ್ಲೇಷಿಸಿದರು. ಭಯ ಇಲ್ಲ ದಿದ್ದರೆ ನಿಮಗೆ ತನಿಖೆ ಮಾಡಿಸಲು ಏನಾಗಿದೆ?**
>
> – **ಛಲವಾದಿ ನಾರಾಯಣಸ್ವಾಮಿ**, ವಿಧಾನಪರಿಷತ್ ವಿಪಕ್ಷ ನಾಯಕ

## ಯುಗಾದಿ ಜಾತ್ರಾ ಮಹೋತ್ಸವ ಇಂದಿನಿಂದ

• **ಉದಯವಾಹಿನಿ, ಮಹದೇಶ್ವರ ಬೆಟ್ಟ:**

ಪ್ರಸಿದ್ಧ ಧಾರ್ಮಿಕ ಯಾತ್ರಾ ಸ್ಥಳವಾದ ಮಾದೇಶ್ವರ ಸ್ವಾಮಿ ಸನ್ನಿಧಿಯಲ್ಲಿ ಯುಗಾದಿ ಜಾತ್ರಾ ಮಹೋತ್ಸವವು ಮಾ.27ರಿಂದ 30ರ ವರೆಗೆ ನಡೆಯಲಿದೆ. ಮಹೋತ್ಸವದ ಪ್ರಯುಕ್ತ ರಾಜ್ಯದ ನಾನಾ ಭಾಗಗಳಿಂದ, ನೆರೆಯ ತಮಿಳುನಾಡಿನಿಂದ



ಕಾಲ್ನಡಿಗೆಯಲ್ಲಿ ಸಾವಿರಾರು ಭಕ್ತರು ಮಾದಪ್ಪನ ಸನ್ನಿಧಿಗೆ ಬರುತ್ತಿದ್ದಾರೆ. ಬಂದವರಿಗೆ ರಂಗಮಂದಿರದ ಆವರಣ, ಅಕ್ಕಪಕ್ಕದಲ್ಲಿ ಉಳಿಯಲು ವ್ಯವಸ್ಥೆ ಕಲ್ಪಿಸಲಾಗಿದೆ.

ಗುರುವಾರ ಜಾತ್ರೆ ಪ್ರಾರಂಭವಾಗಲಿದ್ದು, ಶುಕ್ರವಾರ ಸ್ವಾಮಿಗೆ ಎಣ್ಣೆ ಮಜ್ಜನ ಸೇವೆ ಜರುಗಲಿದೆ. ಶನಿವಾರ ಯುಗಾದಿ ಅಮಾವಾಸ್ಯೆಯ ಪ್ರಯುಕ್ತ ವಿಶೇಷ ಪೂಜೆ ನೆರವೇರಲಿದೆ. ಭಾನುವಾರ ಚಂದ್ರಮಾನ ಯುಗಾದಿ ಪ್ರಯುಕ್ತವಾಗಿ ಬೆಳಿಗ್ಗೆ 8ರಿಂದ 9 ಗಂಟೆಯವರೆಗೆ ನಡೆಯುವ ಶುಭ ಮುಹೂರ್ತದಲ್ಲಿ ಮಾದೇಶ್ವರ ಸ್ವಾಮಿಯ ಮಹಾ ರಥೋತ್ಸವ ನಡೆಯಲಿದೆ.

**ವಿದ್ಯುತ್ ದೀಪಾಲಂಕಾರ:** ಮಲೆ ಮಹದೇಶ್ವರ ಸ್ವಾಮಿ ದೇವಾಲಯದ ಸುತ್ತಲೂ, ಕೊಳ್ಳೇಗಾಲಕ್ಕೆ ತೆರಳುವ ಚೆಕ್ ಪೋಸ್ಟ್‌ನಿಂದ ಪಾಲರ್‌ಗೆ ತೆರಳುವ ಚೆಕ್‌ಪೋಸ್ಟ್ ವರೆಗೆ, ಆಡಳಿತ ಕಚೇರಿ, ರಂಗಮಂದಿರದ ಆವರಣದ ಮುಂಭಾಗದ ರಸ್ತೆಗಳಲ್ಲಿ ವಿದ್ಯುತ್ ದೀಪಾಲಂಕಾರ ಮಾಡಲಾಗಿದೆ. ಪ್ರಾಧಿಕಾರದ ವತಿಯಿಂದ ಕುಡಿಯುವ ನೀರು, ನೆರಳಿನ ವ್ಯವಸ್ಥೆ, ನಿರಂತರ ಅನ್ನ ದಾಸೋಹ ಸೇರಿ ಎಲ್ಲಾ ಬಗೆಯ ಸೌಕರ್ಯ ಕಲ್ಪಿಸಲಾಗಿದೆ.

## ಪ್ರಾಂತ ರೈತ ಸಂಘ, ಶಾಸಕ ನಡುವೆ ವಾಗ್ವಾದ

• **ಉದಯವಾಹಿನಿ, ಗುಬ್ಬಿ**



ಉದಯವಾಹಿನಿ ಚಿತ್ರ

ಇತ್ತೀಚೆಗೆ ತಾಲ್ಲೂಕು ಆಡಳಿತ ಸೌಧದಲ್ಲಿ ಭೂಮಿ ಮಂಜೂರು ಮಾಡಿಕೊಡುವಂತೆ ಕೋರಿ ರೈತರ ಪರವಾಗಿ ಕಾರ್ಯಕರ್ತರು ಅರ್ಜಿಗಳನ್ನು ತಂದಿದ್ದರು. ತಹಶೀಲ್ದಾರ್ ಆರತಿ ಬಿ. ಅರ್ಜಿಗಳನ್ನು ನಿರಾಕರಿಸುವ ಜೊತೆಗೆ ಪ್ರಾಂತ ರೈತ ಸಂಘವನ್ನು ಹೀಯಾಳಿಸಿದ್ದಾರೆ' ಎಂದು ಆರೋಪಿಸಿ ಪ್ರಾಂತ ರೈತ ಸಂಘದಿಂದ ಮಂಗಳವಾರ ತಾಲ್ಲೂಕು ಆಡಳಿತ ಸೌಧದ ಮುಂದೆ ಪ್ರತಿಭಟನೆ ನಡೆಸಲಾಯಿತು.

ಭೂರಹಿತ ರೈತರ ಪರವಾಗಿ ಭೂಮಿ ಮಂಜೂರು ಮಾಡಿಕೊಡುವಂತೆ ಅರ್ಜಿ ಸಲ್ಲಿಸಲು ಬಂದ ಸಂದರ್ಭದಲ್ಲಿ ಪ್ರಾಂತ ರೈತ ಸಂಘದ ಬಗ್ಗೆ ನಿಂದಿಸುವ ಜೊತೆಗೆ ಸುಳ್ಳು ಆಪಾದನೆ ಮಾಡಿರುವುದು ಖಂಡನೀಯ. ತಹಶೀಲ್ದಾರ್ ತಕ್ಷಣ ಕ್ಷಮೆಯಾಚಿಸಬೇಕು. ಇಲ್ಲವಾದಲ್ಲಿ ಪ್ರತಿಭಟನೆ ತೀವ್ರಗೊಳಿಸುತ್ತೇವೆ ಎಂದು ಎಚ್ಚರಿಸಿದರು.

ಪ್ರಾಂತ ರೈತ ಸಂಘದವರು ಯಾರಿಂದಲೂ ಹಣ ವಸೂಲಿ ಮಾಡಿಲ್ಲ. ರೈತರಿಂದ ಅರ್ಜಿಗಳನ್ನು ಸಂಗ್ರಹಿಸಿ ಕಾರ್ಯಕರ್ತರ ಮೂಲಕ ಆಡಳಿತ ಸೌಧಕ್ಕೆ ತಲುಪಿಸುವ ಕೆಲಸ ಮಾಡಿದ್ದೇವೆ. ಅಧಿಕಾರಿಗಳು ಅರ್ಜಿಗಳನ್ನು ಸ್ವೀಕರಿಸುವ ಬದಲಾಗಿ ರೈತರನ್ನು ಹೆದರಿಸಲು ಮುಂದಾಗಿರುವುದು ದುರಾದೃಷ್ಟಕರ ಎಂದು ಹೇಳಿದರು.

ಶಾಸಕ ಎಸ್.ಆರ್. ಶ್ರೀನಿವಾಸ್ ಸ್ಥಳಕ್ಕೆ ತೆರಳಿ ಪ್ರತಿಭಟನಕಾರರ ಜೊತೆ ವಾಗ್ವಾದ ನಡೆಸಿದರು. ಸರ್ಕಾರದ ನಿಯಮಾನುಸಾರ ಅರ್ಜಿ ಸಲ್ಲಿಸಿದವರಿಗೆ ಮಾತ್ರ ಭೂಮಿ ಮಂಜೂರು ಮಾಡಲು ಅವಕಾಶವಿದೆ.

ಸದ್ಯ ಸರ್ಕಾರದಿಂದ ಅರ್ಜಿ ಸ್ವೀಕರಿಸಲು ಯಾವುದೇ ಸೂಚನೆ ಬಂದಿಲ್ಲದಿದ್ದರೂ ಕೆಲವು ಸಂಘಟನೆಯವರು ಮುಗ್ಧ ರೈತರನ್ನು ಬಳಸಿಕೊಂಡು ಸಾವಿರಾರು ಅರ್ಜಿಗಳನ್ನು ತಾಲ್ಲೂಕು ಕಚೇರಿಗೆ ಸಲ್ಲಿಸಿರುವುದು ಗಮನಕ್ಕೆ ಬಂದಿದೆ. ರೈತರನ್ನು ಪ್ರಚೋದಿಸಿ ಸುಳ್ಳು ಅರ್ಜಿಗಳನ್ನು ಹಾಕಿಸುವವರ ವಿರುದ್ಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ ಕಾನೂನು ಕ್ರಮ ಕೈಗೊಳ್ಳುತ್ತೇವೆ. ರೈತರು ನಿಯಮಾನುಸಾರ ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿದೆ. ಯಾವುದೇ ಮಧ್ಯವರ್ತಿಗಳ ಮಾತಿಗೆ ಮರುಳಾಗದೆ ಎಚ್ಚರಿಕೆಯಿಂದ ಇರಬೇಕು ಎಂದರು. ತಾಲ್ಲೂಕಿನವರೇ ಅಲ್ಲದೆ ಬೇರೆ ತಾಲ್ಲೂಕು, ರಾಜ್ಯದ ವಿವಿಧ ಭಾಗಗಳ ರೈತರನ್ನು ಕರೆತಂದು ಅರ್ಜಿ ಸಲ್ಲಿಸುವ ಯಾವುದೇ ಸಂಘಟನೆಯವರು ರೈತರನ್ನು ದಿಕ್ಕು ತಪ್ಪಿಸಿದರೆ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಸ್ಥಳದಲ್ಲಿದ್ದ ತಹಶೀಲ್ದಾರ್, ಪೊಲೀಸರಿಗೆ ಸೂಚಿಸಿದರು.

---

## ಶಿವಕುಮಾರ್ ಪ್ರತಿಕೃತಿ ಸುಟ್ಟು ಪ್ರತಿಭಟನೆ

• **ಉದಯವಾಹಿನಿ, ತುಮಕೂರು**

ಸಂವಿಧಾನ ಬದಲಿಸುವ ಮಾತುಗಳನ್ನಾಡಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರತಿಕೃತಿಯನ್ನು ದಹಿಸಿ ಬಿಜೆಪಿ ಕಾರ್ಯಕರ್ತರು ನಗರದ ಬಿಜಿಎಸ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ಮುಸ್ಲಿಮರಿಗೆ ಕೊಟ್ಟಿರುವ ಮೀಸಲಾತಿ ಉಳಿಸಿಕೊಳ್ಳುವ ಸಲುವಾಗಿ ಸಂವಿಧಾನ ಬದಲಾವಣೆಗೂ ಸಿದ್ಧ ಎಂದು ಶಿವಕುಮಾರ್ ಹೇಳಿದ್ದಾರೆ ಎನ್ನಲಾಗಿದೆ. ಈ ಹೇಳಿಕೆಯನ್ನು ಖಂಡಿಸಿ ಪ್ರತಿಭಟನೆ ನಡೆಸಿದರು. ಕಾಂಗ್ರೆಸ್ ನಾಯಕರಿಗೆ ತಾಕತ್ತಿದ್ದರೆ ಸಂವಿಧಾನ ಬದಲಾವಣೆಗೆ ಕೈ ಹಾಕಲಿ ಎಂದು ಸವಾಲು ಹಾಕಿದರು. ಶಾಸಕ ಜಿ.ಬಿ.ಜ್ಯೋತಿಗಣೇಶ್, ಸರ್ಕಾರಿ ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ ನೀಡುವ ಮಸೂದೆಗೆ ವಿರೋಧದ ನಡುವೆ ಒಪ್ಪಿಗೆ ನೀಡಲಾಗಿದೆ. ಧರ್ಮದ ಆಧಾರದಲ್ಲಿ ಮೀಸಲಾತಿ ನೀಡಲು ಸಂವಿಧಾನದಲ್ಲಿ ಅವಕಾಶ ಇಲ್ಲವಾಗಿದೆ.



ಉದಯವಾಹಿನಿ ಚಿತ್ರ

ಹಾಗಾಗಿ ಸಂವಿಧಾನ ತಿದ್ದುಪಡಿ ಮಾಡಿ ಮುಸ್ಲಿಮರಿಗೆ ನೀಡಿರುವ ಮೀಸಲಾತಿ ಉಳಿಸಿಕೊಳ್ಳುವುದಾಗಿ ಶಿವಕುಮಾರ್ ಹೇಳಿದ್ದಾರೆ ಎಂದು ಆರೋಪಿಸಿದರು. 'ಅಹಿಂದ' ಜಪಿಸುವ ಕಾಂಗ್ರೆಸ್ ನಾಯಕರು, ಇದೇ ಸಮುದಾಯವನ್ನು ವಂಚಿಸಿ ಮುಸ್ಲಿಮರಿಗೆ ಮೀಸಲಾತಿ ನೀಡಿದ್ದಾರೆ. ದಲಿತರ ಅನ್ನ, ಹಣಕ್ಕೆ ಕನ್ನ ಹಾಕಿದ್ದಾರೆ.

ಕಾಂಗ್ರೆಸ್ ಸರ್ಕಾರ ತೊಲಗುವವರೆಗೂ ಹೋರಾಟ ಮುಂದುವರಿಸಲಾಗುವುದು ಎಂದರು.

ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ವೈ.ಎಚ್.ಹುಚ್ಚಯ್ಯ, ಅಂಬೇಡ್ಕರ್ ರಚಿಸಿರುವ ಸಂವಿಧಾನದಲ್ಲಿ ಧರ್ಮದ ಆಧಾರದಲ್ಲಿ ಮೀಸಲಾತಿ ನೀಡಲು ಅವಕಾಶವಿಲ್ಲ. ತಾಕತ್ತಿದ್ದರೆ ಸಂವಿಧಾನ ಬದಲಾವಣೆ ಮಾಡಲಿ' ಎಂದು ಸವಾಲು ಹಾಕಿದರು.

---

## ಕೆಆರ್‌ಎಸ್‌ನಿಂದ ವ್ಯರ್ಥವಾಗಿ ಹರಿದ ನೀರು: ಆರೋಪ

• **ಉದಯವಾಹಿನಿ, ಶ್ರೀರಂಗಪಟ್ಟಣ**

ತಾಲ್ಲೂಕಿನ ಕೆಆರ್‌ಎಸ್ ಜಲಾಶಯದ ಪ್ಲಸ್ 80 ಅಡಿ ಮಟ್ಟದ 5ನೇ ಗೇಟ್ ಮೂಲಕ ಭಾನುವಾರ ರಾತ್ರಿಯಿಂದ ಸೋಮವಾರ ರಾತ್ರಿವರೆಗೆ ಅನಗತ್ಯವಾಗಿ ನೀರು ಹರಿದು ಹೋಗಿದೆ ಎಂದು ರೈತರು ದೂರಿದ್ದಾರೆ.

ಜಲಾಶಯದ ಒಂದು ಗೇಟ್ ಮೂಲಕ ಎರಡು ಸಾವಿರ ಕ್ಯೂಸೆಕ್ ನೀರು ನದಿಗೆ ಹರಿದಿದೆ. ಜಲಾಶ ಯದ ನೀರಿನ ಮಟ್ಟ (ಗೇಜ್) ನೋಡಲು ಹೋದ ಸಿಬ್ಬಂದಿ ಅದನ್ನು ಗಮನಿಸಿ, ಎಂಜಿನಿಯರ್‌ಗಳಿಗೆ ವಿಷಯ ಮುಟ್ಟಿಸಿದ್ದರು. ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಹೇಶ್, ಮುಖ್ಯ ಎಂಜಿನಿ ಯರ್ ವೆಂಕಟೇಶ್, ಅಧೀಕ್ಷಕ ಎಂಜಿನಿಯರ್ ರಘುರಾಂ ಸೂಚನೆಯಂತೆ, ಗೇಟ್ ಭದ್ರಪಡಿಸಿ ನೀರು ನಿಲ್ಲಿಸಿದ್ದಾರೆ ಎಂದು ನಿಗಮದ ಸಿಬ್ಬಂದಿ ತಿಳಿಸಿದ್ದಾರೆ. ನಿಗಮದ ಸಿಬ್ಬಂದಿಯೇ ಗೇಟ್ ತೆರೆದರೇ ಅಥವಾ ತಾಂತ್ರಿಕ ದೋಷದಿಂದ ಗೇಟ್ ತೆರೆದುಕೊಂಡಿದೆಯೇ ಎಂಬ ಬಗ್ಗೆ ಅಧಿಕಾರಿಗಳು ಸ್ಪಷ್ಟ ಮಾಹಿತಿ ನೀಡಿಲ್ಲ. ನದಿಗೆ ನೀರು ಹರಿದು ವ್ಯರ್ಥವಾದ ಬಗ್ಗೆ ಮಂಗಳವಾರ ಕೆಆರ್‌ಎಸ್‌ನಲ್ಲಿ ನಿಗಮದ ಅಧಿಕಾರಿಗಳು ಮತ್ತು ಸಿಬ್ಬಂದಿಯ ತುರ್ತು ಸಭೆ ನಡೆದಿದೆ. ಆದರೆ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಕುರಿತು ಮಾಹಿತಿ ಪಡೆಯಲು ಅಧಿಕಾರಿಗಳು ಸಂಪರ್ಕಕ್ಕೆ ಸಿಕ್ಕಿಲ್ಲ.

> **ತನಿಖೆ ನಡೆಸಿ ರೈತಸಂಘ**
>
> **'ಸರ್ಕಾರದ ಸೂಚನೆ ಪ್ರಕಾರ ಅಧಿಕಾರಿಗಳು ಕೆಆರ್‌ಎಸ್ ಜಲಾಶಯದಿಂದ ತಮಿಳುನಾಡಿಗೆ ಎರಡು ದಿನ ನಿರಂತರವಾಗಿ ನೀರು ಹರಿಸಿದ್ದಾರೆ. ಗೇಟ್‌ನಲ್ಲಿ ತಾಂತ್ರಿಕ ದೋಷ ಉಂಟಾಗಿ ನದಿಗೆ ನೀರು ಹರಿದು ಹೋಗಿದೆ ಎಂಬ ಮಾತನ್ನು ನಂಬಲು ಸಾಧ್ಯವಿಲ್ಲ. ಬೇಸಿಗೆ ಬೆಳೆ ಮತ್ತು ಜೂನ್‌ವರೆಗೆ ಕುಡಿಯುವ ಉದ್ದೇಶಕ್ಕೆ ನೀರನ್ನು ಕಾದಿಡಬೇಕಾದ ಅನಿವಾರ್ಯತೆ ಇರುವಾಗ ಹೀಗೆ ನೀರು ಹರಿಸಿರುವುದು ರೈತ ವಿರೋಧಿ ಕ್ರಮ. ಈ ಬಗ್ಗೆ ತನಿಖೆ ನಡೆಸಬೇಕು' ಎಂದು ರೈತ ಸಂಘದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಮಂಜೇಶಗೌಡ ಒತ್ತಾಯಿಸಿದ್ದಾರೆ.**



ಉದಯವಾಹಿನಿ ಚಿತ್ರ

## ಮಾನವತಾ ಪ್ರಶಸ್ತಿಗೆ ಪತ್ರಕರ್ತೆ ವಿಜಯಲಕ್ಷ್ಮಿ ಆಯ್ಕೆ

• **ಉದಯವಾಹಿನಿ, ಮಂಡ್ಯ**

ಡಾ.ಬಿ.ಟಿ. ಲಲಿತಾ ನಾಯಕ್ ಎಜುಕೇಷನಲ್ ಅಂಡ್ ಚಾರಿಟಬಲ್ ಟ್ರಸ್ಟ್, ಫೌಂಡೇಷನ್ ಸಹಯೋಗದಲ್ಲಿ ಬಿ.ಟಿ. ಲಲಿತಾ ನಾಯಕ್ ಅವರ 80ನೇ ಹುಟ್ಟುಹಬ್ಬದ ಪ್ರಯುಕ್ತ ಮಾನವತಾ ಪ್ರಶಸ್ತಿ ಪ್ರದಾನ ಹಾಗೂ ಸಾಮೂಹಿಕ ವಿವಾಹ ಸಮಾರಂಭವನ್ನು ಏ.4ರಂದು ಬೆಳಿಗ್ಗೆ 10ಕ್ಕೆ ಲಲಿತಾ ನಾಯಕ್ ಬಡಾವಣೆಯ ಸಮುದಾಯ ಭವನದಲ್ಲಿ ಆಯೋಜಿಸಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷೆ ಉಮಾದೇವಿ ಎಸ್.ಎಲ್. ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಶಾಸಕ ಪಿ. ರವಿಕುಮಾರ್ ಅಧ್ಯಕ್ಷತೆ ವಹಿಸುವರು. ಬಿ.ಟಿ. ಲಲಿತಾ ನಾಯಕ್



ಮಾನವತಾ ಪ್ರಶಸ್ತಿಯನ್ನು ಪತ್ರಕರ್ತೆ ವಿಜಯಲಕ್ಷ್ಮಿ ಶಿಬರೂರ್ ಅವರಿಗೆ ಶಾಸಕ ಪಿ.ಎಂ. ನರೇಂದ್ರಸ್ವಾಮಿ ಪ್ರದಾನ ಮಾಡುವರು ಎಂದು ಹೇಳಿದರು. ಮುಖ್ಯ ಅತಿಥಿಯಾಗಿ ನಗರಸಭೆ ಅಧ್ಯಕ್ಷ ಎಂ.ವಿ.ಪ್ರಕಾಶ್ (ನಾಗೇಶ್) ಉಪಸ್ಥಿತರಿರುವರು. ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಅಧ್ಯಕ್ಷ ಎ.ಆರ್. ಗೋವಿಂದಸ್ವಾಮಿ, ಕರ್ನಾಟಕ ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷ ಎನ್. ಜಯದೇವನಾಯಕ್, ಸಮತಾ ಸೈನಿಕ ದಳದ ಡಾ.ಎಂ.ವೆಂಕಟಸ್ವಾಮಿ, ಡಾ.ಸಿ.ರವೀಂದ್ರನಾಥ್ ವಿಷಯ ಮಂಡನೆ ಮಾಡಲಿದ್ದಾರೆ.

ಗೋಷ್ಠಿಯಲ್ಲಿ ಟ್ರಸ್ಟ್‌ನ ಗೌರವಾಧ್ಯಕ್ಷ ಡಾ.ಬಿ.ಟಿ. ಲಲಿತಾನಾಯಕ್, ಖಜಾಂಚಿ ಓಂಪ್ರಕಾಶ್, ಹನುಮಂತರಾಮ್‌ನಾಯಕ, ಎಸ್.ಎಂ.ಪುಟ್ಟಸ್ವಾಮಿ, ಶೀನಾನಾಯಕ ಇದ್ದರು.

---

### 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸರ್ಕಾರದಿಂದ 30 ಕೋಟಿ ಅನುದಾನ

# ಮಂಡ್ಯ; 3 ತಿಂಗಳಾದರೂ ಸಿದ್ಧವಾಗದ ಲೆಕ್ಕಪತ್ರ

• **ಉದಯವಾಹಿನಿ, ಮಂಡ್ಯ**

ಸಕ್ಕರೆ ನಗರದಲ್ಲಿ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ನಡೆದು (2024ರ ಡಿ.20ರಿಂದ 22ರವರೆಗೆ) ಮೂರು ತಿಂಗಳಾಗಿದ್ದರೂ, ಜಿಲ್ಲಾಡಳಿತದಿಂದ ಖರ್ಚು ವೆಚ್ಚದ ಲೆಕ್ಕಪತ್ರವೇ ಸಿದ್ಧಗೊಂಡಿಲ್ಲ.

ರಾಜ್ಯ ಸರ್ಕಾರ 30 ಕೋಟಿ ಅನುದಾನ ಬಿಡುಗಡೆ ಮಾಡಿತ್ತು. ಜಿಲ್ಲಾ ಸರ್ಕಾರಿ ನೌಕರರು ಒಂದು ದಿನದ ವೇತನವನ್ನು (1.45 ಕೋಟಿ) ದೇಣಿಗೆಯಾಗಿ ನೀಡಿದ್ದರು. ಸಂಘ ಸಂಸ್ಥೆಯವರು, ದಾನಿಗಳು ನೆರವು ನೀಡಿದ್ದರು. ಸಂಗ್ರಹವಾದ ಒಟ್ಟು ಮೊತ್ತ ಮತ್ತು ಖರ್ಚಿನ ಮಾಹಿತಿ ಹೊರಬಿದ್ದಿಲ್ಲ.

**1994ರಲ್ಲಿ ಒಂದು ತಿಂಗಳಲ್ಲೇ ಲೆಕ್ಕ:** ನಗರದಲ್ಲಿ ಸಾಹಿತಿ ಚದುರಂಗ ಅಧ್ಯಕ್ಷತೆಯಲ್ಲಿ 1994ರಲ್ಲಿ ನಡೆದಿದ್ದ 63ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಖರ್ಚು ವೆಚ್ಚಗಳನ್ನು ಅಂದಿನ ಕಸಾಪ ಜಿಲ್ಲಾ ಘಟಕದ ಅಧ್ಯಕ್ಷರಾಗಿದ್ದ ಪ್ರೊ.ಜಿ.ಟಿ. ವೀರಪ್ಪ ಅವರು ತಿಂಗಳಲ್ಲೇ ನೀಡಿದ್ದರು. ಉಳಿದ ಹಣದಲ್ಲಿ ಕಸಾಪ ಭವನವನ್ನೂ ನಿರ್ಮಿಸಿದ್ದರು. ಹಾವೇರಿಯಲ್ಲಿ ನಡೆದ 86ನೇ ಸಮ್ಮೇಳನದ ಖರ್ಚು ವೆಚ್ಚಗಳನ್ನು ತಿಂಗಳಲ್ಲೇ ಪ್ರಕಟಿಸಲಾಗಿತ್ತು. ಮಂಡ್ಯ ಸಮ್ಮೇಳನದ ಲೆಕ್ಕ ಕೊಡಲು ಏಕೆ ತಡವಾಗುತ್ತಿದೆ ಎಂಬುದನ್ನು ಜಿಲ್ಲಾಡಳಿತ ಮತ್ತು ಕಸಾಪ ಸ್ಪಷ್ಟಪಡಿಸಬೇಕು ಎಂದು ಪ್ರಗತಿಪರ ಸಂಘಟನೆಗಳ ಒಕ್ಕೂಟ ಆಗ್ರಹಿಸಿದೆ.

**ಏರುತ್ತಿದೆ ಸಮ್ಮೇಳನದ ಖರ್ಚು:** ಸಮ್ಮೇಳನದ ವೆಚ್ಚ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದೆ. 83ನೇ ಸಮ್ಮೇಳನಕ್ಕೆ 8 ಕೋಟಿ, 84ನೇ ಸಮ್ಮೇಳನಕ್ಕೆ 10 ಕೋಟಿ, 85ನೇ ಸಮ್ಮೇಳನಕ್ಕೆ ಸರ್ಕಾರ 14 ಕೋಟಿ ಅನುದಾನ ನೀಡಿತ್ತು. ಹಾವೇರಿಯಲ್ಲಿ ನಡೆದ 86ನೇ ಸಮ್ಮೇಳನಕ್ಕೆ ಬರೋಬ್ಬರಿ 20 ಕೋಟಿ ಅನುದಾನ ಬಿಡುಗಡೆ ಮಾಡಿ ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ 'ತವರು ಕ್ಷೇತ್ರದ ಪ್ರೀತಿ ಮೆರೆದಿದ್ದರು. 25 ಕೋಟಿ ಖರ್ಚಾಗಿ, ಸಮ್ಮೇಳನದ ಇತಿಹಾಸದಲ್ಲೇ ದಾಖಲೆಯ ವೆಚ್ಚ ಎನಿಸಿತ್ತು. ಮಂಡ್ಯ ಸಮ್ಮೇಳನಕ್ಕೆ ಸರ್ಕಾರವೇ 30 ಕೋಟಿ ಅನುದಾನ ನೀಡಿರುವುದು 'ದಾಖಲೆಯ ಮೊತ್ತ ಎನಿಸಿದೆ.



ಅನುದಾನದ ಮಿತಿಯಲ್ಲಿಯೇ ಯೋಜನೆ ರೂಪಿಸಿ, ಅಂದಾಜು ವೆಚ್ಚ ಮತ್ತು ಸಂಬಂಧಪಟ್ಟ ದಾಖಲೆಗಳನ್ನು ಸಲ್ಲಿಸಬೇಕು' ಎಂದು ಸರ್ಕಾರ ಸೂಚಿಸಿತ್ತು.

**ಲೆಕ್ಕಪತ್ರ ವಿಳಂಬ:** ಅನುಮಾನಕ್ಕೆ ಎಡೆ ಹೈಕೋರ್ಟ್ ಮೊರೆ ಹೋಗಲು ವಕೀಲರ ನಿರ್ಧಾರ ಏರಿಕೆಯಾಗುತ್ತಿದೆ ಸಾಹಿತ್ಯ ಸಮ್ಮೇಳನಗಳ ಖರ್ಚು ಉತ್ತರ ಕೊಡದಿದ್ದರೆ ಲೆಕ್ಕಕೊಡಿ ಅಭಿಯಾನ ಸಮ್ಮೇಳನ ಎಲ್ಲಾ ಕನ್ನಡಿಗರ ತೆರಿಗೆ ಹಣದಿಂದ ನಡೆಯು ವುದರಿಂದ ಕಸಾಪ, ಜಿಲ್ಲಾಡಳಿತ ಉತ್ತರದಾಯಿ ಆಗಿರಬೇಕು.

ವಾರದೊಳಗ ಲೆಕ್ಕವನ್ನು ಜನರ ಮುಂದಿಡದಿದ್ದರೆ ರಾಜ್ಯದಾದ್ಯಂತ ಲೆಕ್ಕಕೊಡಿ ಅಭಿಯಾನ ಆರಂಭಿಸುತ್ತೇವೆ ಎಂದು ಪ್ರಗತಿಪರ ಸಂಘಟನೆಗಳ ಒಕ್ಕೂಟದ ಮುಖಂಡರಾದ ಎಂ.ಬಿ. ನಾಗಣ್ಣಗೌಡ ಪ್ರೊ.ಜಿ.ಟಿ. ವೀರಪ್ಪ ಸಿ.ಕುಮಾರಿ ಅರವಿಂದ ಪ್ರಭು ರಾಜೇಂದ್ರ ಬಾಬು ಎಚ್ಚರಿಕೆ ನೀಡಿದ್ದಾರೆ.

> **ಸರ್ಕಾರದಿಂದ 3 ಕಂತುಗಳಲ್ಲಿ ಅನುದಾನ ಬಿಡುಗಡೆಯಾಗಿದ್ದು ಸಂಬಂಧಪಟ್ಟವರಿಗೆ ಹಣ ಪಾವತಿ ಮಾಡುತ್ತಿದ್ದೇವೆ. 15 ದಿನದೊಳಗೆ ಸಚಿವರಿಂದ ಲೆಕ್ಕಪತ್ರ ಬಿಡುಗಡೆ ಮಾಡಿಸುತ್ತೇವೆ**
>
> –**ಕುಮಾರ**, ಮಂಡ್ಯ ಜಿಲ್ಲಾಧಿಕಾರಿ



> **ಹೈಕೋರ್ಟ್‌ಗೆ ರಿಟ್**
>
> **ಸಮ್ಮೇಳನದ ಲೆಕ್ಕಪತ್ರ ಬಹಿರಂಗಪಡಿಸುವಂತೆ ಜಿಲ್ಲಾಳಿತಕ್ಕೆ ಮೂರು ಬಾರಿ ಕೋರಿದ್ದರೂ ನೀಡದಿರುವುದು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ. ಏಪ್ರಿಲ್ ಮೊದಲ ವಾರದಲ್ಲಿ ಮಾಹಿತಿ ನೀಡದಿದ್ದರೆ ಹೈಕೋರ್ಟ್ ಮತ್ತು ಲೋಕಾಯುಕ್ತ ಮೊರೆ ಹೋಗುತ್ತೇವೆ ಎಂದು ಅಖಿಲ ಭಾರತ ವಕೀಲರ ಒಕ್ಕೂಟದ ಬಿ.ಟಿ. ವಿಶ್ವನಾಥ್, ಜೆ.ರಾಮಯ್ಯ ತಿಳಿಸಿದರು.**

---

## ಮಿನಿ ನ್ಯೂಸ್

### ಗುಡಿಬಂಡೆಯಲ್ಲಿ ಕುಸಿದ ರೇಷ್ಮೆ ಬೆಳೆ

• **ಉದಯವಾಹಿನಿ, ಗುಡಿಬಂಡೆ**

ಜಿಲ್ಲೆಯ ಗಡಿ ಮತ್ತು ಸಣ್ಣ ತಾಲ್ಲೂಕು ಎನಿಸಿರುವ ಗುಡಿಬಂಡೆಯಲ್ಲಿ ದಿನದಿಂದ ದಿನಕ್ಕೆ ರೇಷ್ಮೆ ಬೆಳೆ ಕುಸಿಯುತ್ತಿದೆ. ಈ ಹಿಂದೆ ಎಲ್ಲಾ ನೋಡಿದರೂ ದೊಡ್ಡ ಪ್ರಮಾಣದಲ್ಲಿ ರೇಷ್ಮೆ ಬೆಳೆ ತಾಲ್ಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಕಂಡು ಬರುತ್ತಿತ್ತು. ಆದರೆ ಈಗ ರೇಷ್ಮೆ ಬೆಳೆಯೇ ತಾಲ್ಲೂಕಿನಲ್ಲಿ ನಗಣ್ಯ ಎನ್ನುವಂತೆ ಆಗಿದೆ. ಈಗ ತಾಲ್ಲೂಕಿನಲ್ಲಿ 150 ಹೆಕ್ಟೇರ್‌ನಲ್ಲಿ 47 ರೈತರು ಮಾತ್ರ ರೇಷ್ಮೆ ಬೆಳೆಯುತ್ತಿದ್ದಾರೆ. ಈ ಹಿಂದಿನ ವರ್ಷಗಳಲ್ಲಿ 500 ಹೆಕ್ಟೇರ್‌ನಷ್ಟು ರೇಷ್ಮೆ ಬೆಳೆ ತಾಲ್ಲೂಕಿನಲ್ಲಿ ಇತ್ತು. ಹುಳು ಸಾಗಾಣಿಕೆ, ಹಿಪ್ಪು ನೇರಳೆ ಸೊಪ್ಪು ಬೆಳೆಯುವುದು ಹೀಗೆ ನಾನಾ ಚಟುವಟಿಕೆಗಳನ್ನು ಕಾಣಬಹುದಿತ್ತು. ಆದರೆ ಈಗ ರೇಷ್ಮೆ ಬೆಳೆ ದಿನದಿಂದ ದಿನಕ್ಕೆ ಕುಸಿಯುತ್ತಿದೆ. ದಶಕದ ಹಿಂದೆ ಗುಡಿಬಂಡೆ ತಾಲ್ಲೂಕು ರೇಷ್ಮೆ ಬೆಳೆಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನದಲ್ಲಿ ಇತ್ತು. ಆದರೆ ಕ್ರಮೇಣ ಬೆರಳೆಣಿಕೆಯಷ್ಟು ರೈತರು ಮಾತ್ರ ರೇಷ್ಮೆ ಬೆಳೆಯುತ್ತಿದ್ದಾರೆ.

30 ದಿನದಲ್ಲಿ ರೇಷ್ಮೆ ಬೆಳೆ ಕೈಗೆ ಬರುತ್ತದೆ. ರೇಷ್ಮೆ ಗೂಡು ಕೆ.ಜಿಗೆ 500 ರಿಂದ 550 ಬೆಲೆ ಇದ್ದರೂ ತಾಲ್ಲೂಕಿನ ಬಹುತೇಕ ರೈತರು ತೋಟಗಾರಿಕೆ ಬೆಳೆಗಳಾದ ಟೊಮೆಟೊ, ಆಲೂಗಡ್ಡೆ ದಾಳಿಂಬೆ, ಹೂವಿನ ಕೃಷಿ ಕಡೆ ಹೆಚ್ಚು ಗಮನ ಹರಿಸುತ್ತಿದ್ದಾರೆ. ಈ ಎಲ್ಲಾ ಕಾರಣದಿಂದ ರೇಷ್ಮೆ ಬೆಳೆ ತಾಲ್ಲೂಕಿನಿಂದ ಮರೆಯಾಗುತ್ತಿದೆ. ಬದಲಾದ ವಾತಾವರಣ, ರೋಗ ಮತ್ತು ಕೀಟ ಬಾಧೆಯ ಕಾರಣಗಳಿಂದ ರೈತರು ಪರ್ಯಾಯ ಬೆಳೆ ಕಡೆ ಮುಖ ಮಾಡುತ್ತಿದ್ದಾರೆ. ರೇಷ್ಮೆ ಇಲಾಖೆಯು ಬೆಳೆಗಳಿಗೆ ತಗುಲುವ ರೋಗಗಳ ನಿರ್ವಹಣೆ ಮಾಡುವಲ್ಲಿ ಮತ್ತು ರೈತರಿಗೆ ಸೂಕ್ತ ತಿಳಿವಳಿಕೆ ಮೂಡಿಸುವಲ್ಲಿಯೂ ವಿಫಲವಾದ ಪರಿಣಾಮ ರೇಷ್ಮೆ ಕಣ್ಮರೆ ಆಗುತ್ತಿದೆ ಎನ್ನುವ ಆರೋಪಗಳು ಇವೆ. ವರ್ಷಗಳ ಹಿಂದೆ ರೇಷ್ಮೆ ಬೆಳೆಗಾರರ ಕುಟುಂಬಗಳು ರೇಷ್ಮೆ ಬೆಳೆದು ಜೀವನ ಕಂಡುಕೊಂಡಿದ್ದರು. ಪ್ರಸ್ತುತ ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ಇದ್ದರೂ ಕೂಡ ರೇಷ್ಮೆ ಬೆಳೆಯಲು ಆಗದೆ ರೈತರು ಪರದಾಡುತ್ತಿದ್ದಾರೆ.

### ಏಕಾಶಿಲಾ ಬೆಟ್ಟಕ್ಕೆ ರೋಪ್ ವೇ; 50 ಕೋಟಿ ನಿಗದಿ: ಸಚಿವ ರಾಜಣ್ಣ

• **ಉದಯವಾಹಿನಿ, ಮಧುಗಿರಿ**

ಏಕಾಶಿಲಾ ಬೆಟ್ಟಕ್ಕೆ ರೋಪ್‌ವೇ ಕಾಮಗಾರಿಗೆ ರಾಜ್ಯ ಸರ್ಕಾರ 50 ಕೋಟಿ ನಿಗದಿ ಮಾಡಿದೆ. ಶೀಘ್ರವಾಗಿ ಟೆಂಡರ್ ಪ್ರಕ್ರಿಯೆ ಪ್ರಾರಂಭವಾಗಲಿದೆ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ತಿಳಿಸಿದರು. ಪಟ್ಟಣದ



ಸಿದ್ಧರಕಟ್ಟೆ ಸಮೀಪ ಅಧಿಕಾರಿಗಳ ತಂಡದೊಂದಿಗೆ ಬುಧವಾರ ಸ್ಥಳ ಪರಿಶೀಲಿಸಿ ಮಾತನಾಡಿದರು.

ರೋಪ್‌ವೇ ಯೋಜನೆಗೆ ಹಂತ ಹಂತವಾಗಿ ಸರ್ಕಾರದಿಂದ ಹಣ ಬಿಡುಗಡೆ ಮಾಡಿಸಲಾಗುವುದು. 10 ವರ್ಷಗಳ ಹಿಂದೆಯೇ ಏಕಾಶಿಲಾ ಬೆಟ್ಟಕ್ಕೆ ರೋಪ್ ವೇ ಯೋಜನೆಗೆ ಒಂಬತ್ತು ಎಕರೆ ಜಾಗ ಮೀಸಲಿಡಲಾಗಿತ್ತು ಎಂದರು. ಇತ್ತೀಚೆಗೆ ಬೆಳಗಾವಿಯಲ್ಲಿ ನಡೆದ ಅಧಿವೇಶನದಲ್ಲಿ ರೋಪ್‌ವೇ ಕಾಮಗಾರಿಗಳಿಗಾಗಿ ಪ್ರತ್ಯೇಕ ಪ್ರಾಧಿಕಾರ ಸ್ಥಾಪಿಸಲಾಗಿದೆ. ಆ ಇಲಾಖೆಯ ಮಾನದಂಡಗಳಂತೆ ಕಾಮಗಾರಿಗಳನ್ನು ರಾಜ್ಯದಲ್ಲಿ ನಿರ್ವಹಣೆ ಮಾಡಲಾಗುವುದು ಎಂದರು.

### ಕುರಂಗರಾಜ ತಳ ಸಮುದಾಯಕ್ಕೆ ಮನೋಬಲವನ್ನು ತುಂಬಿದ್ದ ವ್ಯಕ್ತಿ

• **ಉದಯವಾಹಿನಿ, ಕೊರಟಗೆರೆ**

18ನೇ ಶತಮಾನದ ಆದಿ ಭಾಗದಲ್ಲಿ ಕೊರಟಗೆರೆ ಪ್ರಾಂತ್ಯಕ್ಕೆ ದೊರೆಯಾಗಿದ್ದ ಕುರಂಗರಾಜ ದಕ್ಷಿಣ ಭಾರತದ ಮೊದಲ ದಲಿತ ಸಮುದಾಯದ ನಾಯಕ ಎಂದು ಕವಿ ಶಿವಣ್ಣ ತಿಮ್ಲಾಪುರ ಅಭಿಪ್ರಾಯಪಟ್ಟರು. ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ, ಕನ್ನಡ ವಿಭಾಗ ಹಾಗೂ ಸಾಂಸ್ಕೃತಿಕ ಸಮಿತಿ ಸಹಯೋಗದಲ್ಲಿ ನಡೆದ ಚಕೋರ ಉಪನ್ಯಾಸ ಮಾಲಿಕೆಯಲ್ಲಿ ಸ್ಥಳೀಯ ದೊರೆ ಕುರಂಗರಾಜನ ಬಗೆಗಿನ ವಿಶೇಷ ಮಾಹಿತಿ ಹಂಚಿಕೊಂಡರು. ಕುರಂಕೋಟೆಯನ್ನು ನಿರ್ಮಿಸಿದ್ದು, ದೇವಾಲಯಗಳನ್ನು ಕಟ್ಟಿದ್ದು, ಚರ್ಮದ ನಾಣ್ಯಗಳನ್ನು ಬಳಕೆಗೆ ತಂದಿದ್ದು ಸೇರಿದಂತೆ ಅನೇಕ ಸಾಮಾಜಿಕ ಕಾರ್ಯಗಳನ್ನು ನಿರ್ವಹಿಸುವ ಮೂಲಕ ಜನಸಾಮಾನ್ಯರ ದೊರೆಯಾಗಿದ್ದ ಎಂದು ಕುರಂಗರಾಜನ ಪರಿಚಯವನ್ನು ವಿದ್ಯಾರ್ಥಿಗಳಿಗೆ ಮಾಡಿಕೊಟ್ಟರು.

ಕುರಂಗರಾಜನನ್ನು ಕುರಿತು ಕುರಂಗರಾಜ ವೈಭವ ಕಾದಂಬರಿ ರಚಿಸಿ ಅದನ್ನು ನಾಟಕ ರೂಪಕ್ಕೆ ಅಳವಡಿಸಿ ಜನಪ್ರಿಯಗೊಳಿಸಿದ ಸಾಹಿತಿ ಒ.ನಾಗರಾಜ ಅವರು ಮಾತನಾಡಿ, ಕುರಂಗರಾಜ ಇಡೀ ಕೊರಟಗೆರೆಯ ತಳ ಸಮುದಾಯಕ್ಕೆ ಮನೋಬಲವನ್ನು ತುಂಬಿದ್ದ ವ್ಯಕ್ತಿ ಎಂದರು. ಕಾರ್ಯಕ್ರಮದಲ್ಲಿ ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯೆ ಸುಮಾ ಸತೀಶ್, ಸ್ಥಳೀಯ ಇತಿಹಾಸದ ಪ್ರಾಮುಖ್ಯತೆ ಬಗ್ಗೆ ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಪ್ರೊ.ಈರಪ್ಪ ನಾಯಕ ಮಾತನಾಡಿ, ಸ್ಥಳೀಯ ಇತಿಹಾಸದ ಪರಿಚಯ ವಿದ್ಯಾರ್ಥಿಗಳಿಗೆ ಅತ್ಯಗತ್ಯವಾಗಿ ಆಗಬೇಕಿದೆ ಎಂದರು.

### ಮನೆಯ ಬಾಗಿಲು ಮುರಿದು ಚಿನ್ನಾಭರಣ ಕಳವು

• **ಉದಯವಾಹಿನಿ, ಪಾವಗಡ**

ತಾಲ್ಲೂಕಿನ ವೈ.ಎನ್.ಹೊಸಕೋಟೆ ಗ್ರಾಮದ ಸಂತೆ ಊರು ಬಾಗಿಲು ಪ್ರದೇಶದಲ್ಲಿ ಮನೆಯ ಬಾಗಿಲು ಮುರಿದು ಚಿನ್ನಾಭರಣ ದೋಚಿ ಕಳ್ಳರು ಪರಾರಿಯಾಗಿದ್ದಾರೆ. ಗ್ರಾಮದ ಪದ್ಮಾವತಮ್ಮ ಅವರು ಬೆಳಿಗ್ಗೆ ಮನೆಗೆ ಬೀಗ ಹಾಕಿಕೊಂಡು ಬಸ್ ನಿಲ್ದಾಣದ ಕಡೆಗೆ ಹೋಗಿದ್ದಾರೆ. ಇದನ್ನು ಗಮನಿಸಿದ ಕಳ್ಳರು ಚಿಲಕ ಮುರಿದು ಮನೆಯೊಳಗೆ ಪ್ರವೇಶಿಸಿ, ಬೀರುವಿನಲ್ಲಿದ್ದ ಚಿನ್ನದ ನೆಕ್‌ಲೇಸ್, ಮಾಂಗಲ್ಯ ಸರ, ಸರ, ಕಿವಿಯೋಲೆ ಸೇರಿ ಸುಮಾರು 70 ಗ್ರಾಂ ತೂಕದ ಚಿನ್ನದ ಒಡವೆಗಳನ್ನು ದೋಚಿ ಪರಾರಿಯಾಗಿದ್ದಾರೆ.

ಮಧ್ಯಾಹ್ನ 12 ಗಂಟೆ ಸುಮಾರಿಗೆ ಪದ್ಮಾವತಮ್ಮ ಮನೆಗೆ ಹಿಂದಿರುಗಿದಾಗ ಆಭರಣಗಳು ಕಳುವಾಗಿರುವುದು ತಿಳಿದಿದೆ. ವೈ.ಎನ್.ಹೊಸಕೋಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


ಅಂತರಾಳದಿಂದ... EDITORIAL

# ಹಾಗಾದರೆ ಇವರನ್ನೂ ಮರಕ್ಕೆ ಕಟ್ಟಿ ಹಾಕಿ ಥಳಿಸಬೇಕೇ?

ಇತ್ತೀಚೆಗೆ ಉಡುಪಿ ಜಿಲ್ಲೆಯ ಮಲ್ಪೆಯಲ್ಲಿ ಮೀನು ಕದ್ದ ಆರೋಪ ಹೊರಿಸಿ ದಲಿತ ಮಹಿಳಾ ಕಾರ್ಮಿಕಳನ್ನು ಗುಂಪೊಂದು ಮರಕ್ಕೆ ಕಟ್ಟಿ ಹಾಕಿ ಥಳಿಸಿದ್ದು ರಾಜ್ಯಾದ್ಯಂತ ಆಕ್ರೋಶಕ್ಕೆ ಕಾರಣವಾಯಿತು. ಈ ಕೃತ್ಯ ಬುದ್ಧಿವಂತರ ಜಿಲ್ಲೆಯೆಂದು ಗುರುತಿಸಿಕೊಂಡಿರುವ ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯನ್ನು ಮುಜುಗರಕ್ಕೆ ತಳ್ಳಿತ್ತು. ಕೃತ್ಯ ಮಾಧ್ಯಮಗಳ ಮೂಲಕ ಹರಡುತ್ತಿದ್ದಂತೆಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಘಟನೆಯನ್ನು ಖಂಡಿಸಿದ್ದಲ್ಲದೆ, ಆರೋಪಿಗಳ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುವ ಭರವಸೆಯನ್ನು ನೀಡಿದರು. ರಾಜ್ಯ ಮಟ್ಟದಲ್ಲಿ ಸುದ್ದಿಯಾದ ಕಾರಣಕ್ಕೆ ಪೊಲೀಸರು ತಡವಾಗಿಯಾದರೂ ಪ್ರವೇಶಿಸಲೇ ಬೇಕಾಯಿತು. ಕೊನೆಗೂ ಪ್ರಕರಣಕ್ಕೆ ಸಂಬಂಧಿಸಿ ದೂರು ದಾಖಲಿಸಿ, ಕೃತ್ಯದಲ್ಲಿ ಭಾಗಿಯಾದ ಕೆಲವರನ್ನು ಬಂಧಿಸುವಲ್ಲಿ ಯಶಸ್ವಿಯಾದರು. ಈ ಕೃತ್ಯವನ್ನು ಎಸಗಲು ಕಾರಣ ಏನೇ ಇರಲಿ, ಒಂದು ನಾಗರಿಕ ಸಮಾಜದಲ್ಲಿ ಮಹಿಳೆಯೊಬ್ಬಳನ್ನು ಸಾರ್ವಜನಿಕವಾಗಿ ಮರಕ್ಕೆ ಕಟ್ಟಿ ಹಾಕಿ ಥಳಿಸುವುದನ್ನು ಮನುಷ್ಯರೆನಿಸಿಕೊಂಡವರೆಲ್ಲರೂ ಖಂಡಿಸಲೇಬೇಕು. ಅಂತಹದೊಂದು ಕೃತ್ಯ ನಡೆಸಿದವರ ವಿರುದ್ಧ ತಕ್ಷಣ ದೂರು ದಾಖಲಿಸಿ ಅವರು ಬಂಧನವಾಗುವಂತೆ ನೋಡಿಕೊಳ್ಳಬೇಕಾದುದು ಸ್ಥಳೀಯ ಜನಪ್ರತಿನಿಧಿಗಳು ಮತ್ತು ರಾಜಕೀಯ ನಾಯಕರ ಕರ್ತವ್ಯವಾಗಿದೆ.

**ಹಾಲಿ ಶಾಸಕರು, ಮಾಜಿ ಸಚಿವರು ಆರೋಪಿಗಳ ಪರವಾಗಿ ಹೇಳಿಕೆಗಳನ್ನು ನೀಡಿರುವುದಷ್ಟೇ ಅಲ್ಲ ಶಾಸಕರೊಬ್ಬರು ದೂರನ್ನು ಹಿಂಪಡೆಯುವಂತೆ ಸಂತ್ರಸ್ತೆಗೆ ಒತ್ತಡ ಹಾಕಿದ್ದಾರೆ. ಆರೋಪಿಗಳನ್ನು ಬಂಧಿಸಿ, ಮಲ್ಪೆ ಬಂದರಿನಲ್ಲಿ ನಿರಾತಂಕವಾಗಿ ಕೆಲಸ ಮಾಡಲು ಅವಕಾಶ ಮಾಡಿಕೊಡಿ. ನನಗೆ ನ್ಯಾಯ ಕೊಡಿ ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಬೇಕಾಗಿದ್ದ ದಲಿತ ಮಹಿಳೆ ನನಗೆ ಮುಂದೆಯೂ ಮಲ್ಪೆಯ ಬಂದರಿನಲ್ಲಿ ಕೆಲಸ ಮಾಡಬೇಕಾಗಿದೆ. ಆದುದರಿಂದ ನನ್ನ ದೂರನ್ನು ವಾಪಸ್ ಪಡೆಯುತ್ತೇನೆ ಎಂದು ಮನವಿ ಸಲ್ಲಿಸಿದ್ದಾರೆ. ಈ ಮನವಿ ಕೊಡುವ ಸಂದರ್ಭದಲ್ಲಿ ಶಾಸಕರೂ ಉಪಸ್ಥಿತರಿದ್ದರು ಎನ್ನುವುದು ಗಮನಾರ್ಹ. ಇಡೀ ಉಡುಪಿ ಯಾವ ದಿಕ್ಕಿಗೆ ಸಾಗುತ್ತಿದೆ ಎನ್ನುವುದನ್ನು ಇದು ಹೇಳುತ್ತಿದೆ.**

ಆದರೆ ಉಡುಪಿ ಜಿಲ್ಲೆಯ ಸಾಂಸ್ಕೃತಿಕ ಮತ್ತು ಸಾಮಾಜಿಕ ವಾತಾವರಣ ಎಷ್ಟು ಕೆಟ್ಟು ಹೋಗಿದೆಯೆಂದರೆ, ಮಲ್ಪೆಯಲ್ಲಿ ನಡೆದಿರುವ ಕೃತ್ಯ ಆಕಸ್ಮಿಕವಾದುದಲ್ಲ ಎನ್ನುವುದನ್ನು ಅಲ್ಲಿಯ ರಾಜಕೀಯ ನಾಯಕರೇ ತಮ್ಮ ವರ್ತನೆಗಳ ಮೂಲಕ ಸಾಬೀತು ಪಡಿಸಿದ್ದಾರೆ. ಹಲ್ಲೆ ಕೃತ್ಯವನ್ನು ಸಮರ್ಥಿಸಿ ಆರೋಪಿಗಳ ಪರವಾಗಿ ಬೀದಿಗಿಳಿದಿರುವ ರಾಜಕೀಯ ನಾಯಕರ ವರ್ತನೆ ಇಡೀ ಉಡುಪಿಯೇ ನಾಚಿ ತಲೆತಗ್ಗಿಸುವಂತಿದೆ.ಸಂತ್ರಸ್ತೆಯ ಪರವಾಗಿ ಮಾತನಾಡಿ ಆಕೆಗೆ ನ್ಯಾಯ ನೀಡಬೇಕಾಗಿದ್ದ ಉಡುಪಿ ಜಿಲ್ಲೆಯ ಶಾಸಕರು, ಬಿಜೆಪಿ ಮುಖಂಡರು ಆಕೆಗೆ ಹಲ್ಲೆ ನಡೆಸಿರುವ ಆರೋಪಿಗಳ ಪರವಾಗಿ ಬೀದಿಗಿಳಿದಿರುವುದು ಮಾತ್ರವಲ್ಲ, ನಡೆದ ಹಲ್ಲೆಯನ್ನು ಉಡುಪಿ ಜಿಲ್ಲೆಯ 'ಸಂಸ್ಕೃತಿ ಮತ್ತು ಸೌಹಾರ್ದದ ಪ್ರತಿಬಿಂಬ ಎಂದು ನಿರೂಪಿಸುವುದಕ್ಕೆ ಹೊರಟಿದ್ದಾರೆ. ಮಾಜಿ ಸಚಿವ, ಮಾಜಿ ಶಾಸಕರೆಂದು ಗುರುತಿಸಿಕೊಂಡಿರುವ ಪ್ರಮೋದ್ ಮಧ್ವರಾಜ್ ಎಂಬವರು, ಈ ಕೃತ್ಯ ಎಸಗಿದ ಆರೋಪಿಗಳನ್ನು ಬೆಂಬಲಿಸಿ ಸಾರ್ವಜನಿಕ ವೇದಿಕೆಯಲ್ಲಿ ಮಾತನಾಡಿರುವುದಲ್ಲದೆ, ಅವರ ವಿರುದ್ಧ ದೂರು ದಾಖಲಿಸಿದ ಪೊಲೀಸ್ ಇಲಾಖೆಯನ್ನು ನಿಂದಿಸಿದ್ದಾರೆ. ರಾಜ್ಯ ಸರಕಾರದ ವಿರುದ್ಧವೂ ಪ್ರಚೋದನಕಾರಿಯಾಗಿ ಮಾತನಾಡಿದ್ದಾರೆ. ಇವರ ಪ್ರಕಾರ, ಮರಕ್ಕೆ ಕಟ್ಟಿ ಹಾಕಿ ಬರೇ ಎರಡು ಏಟನ್ನು 'ಸೌಹಾರ್ದಯುತವಾಗಿ ನೀಡಿದ್ದಂತೆ. ಆ ಬಳಿಕ ಸೌಹಾರ್ದವಾಗಿ ಪ್ರಕರಣ ಇತ್ಯರ್ಥವಾಗಿತ್ತಂತೆ. ಆದುದರಿಂದ, ಕೃತ್ಯ ಎಸಗಿದ ಆರೋಪಿಗಳು ಯಾವ ಕಾರಣಕ್ಕೂ ಶಿಕ್ಷಾರ್ಹರಲ್ಲವಂತೆ. ಕೃತ್ಯವನ್ನು ಎಸಗಿದ ಆರೋಪಿಗಳನ್ನು ಬಂಧಿಸುವ ಮೂಲಕ ಪೊಲೀಸರು ಉಡುಪಿಯ ಸೌಹಾರ್ದವನ್ನು ಕೆಡಿಸಲು ಮುಂದಾಗಿದ್ದಾರಂತೆ. ಯಾವುದೇ ಮೋಸ, ಹಲ್ಲೆ, ಥಳಿತಗಳು ನಡೆದಾಗ ಕಾನೂನನ್ನು ಕೈಗೆತ್ತಿಕೊಳ್ಳದೇ ಪೊಲೀಸರಿಗೆ ದೂರು ನೀಡಿ ಎನ್ನುವ ಸಲಹೆಯನ್ನು ರಾಜಕೀಯ ನಾಯಕರು ಜನರಿಗೆ ನೀಡಬೇಕು. ಆದರೆ ಇಲ್ಲಿ ಅದಕ್ಕೆ ವಿರುದ್ಧವಾದ ಸಲಹೆಗಳನ್ನು ಮಾಜಿ ಸಚಿವರು ಜನರಿಗೆ ನೀಡಿದ್ದಾರೆ. ನಿಮ್ಮ ಮೇಲೆ ಹಲ್ಲೆ ನಡೆದರೆ ಅದರ ವಿರುದ್ಧ ನೀವು ಪೊಲೀಸರಿಗೆ ದೂರು ನೀಡಬಾರದು. ನೀಡಿದರೆ ಸಮಾಜದ ಸೌಹಾರ್ದ ಕೆಡುತ್ತದೆ ಎಂದು ತಮ್ಮ ಭಾಷಣದಲ್ಲಿ ಸಂತ್ರಸ್ತರಿಗೆ ಬೆದರಿಕೆ ಹಾಕಿದ್ದಾರೆ. ಮರಕ್ಕೆ ಕಟ್ಟಿ ಹಾಕಿ ಥಳಿಸಿದ ಕೃತ್ಯಕ್ಕಿಂತಲೂ ಹೀನಾಯವಾಗಿದೆ ಈ ಮಾಜಿ ಸಚಿವರ ಮಾತುಗಳು, ಸಾರ್ವಜನಿಕ ಸಭೆಯಲ್ಲಿ ಅವರು ಈ ದೇಶದ ಸಂವಿಧಾನವನ್ನೇ ಮರಕ್ಕೆ ಕಟ್ಟಿ ಹಾಕಿ ಥಳಿಸುವುದಕ್ಕೆ ಪರೋಕ್ಷವಾಗಿ ಕರೆಕೊಟ್ಟಂತಾಗಿದೆ. ಕಾನೂನು ವ್ಯವಸ್ಥೆಗೆ ಸವಾಲು ಹಾಕುವಂತಹ ಮಾತುಗಳಿಗಾಗಿ ತಕ್ಷಣ ಈ ಮಾಜಿ ಸಚಿವರನ್ನು ಬಂಧಿಸಬೇಕಾಗಿದೆ. ಮಹಿಳಾ ಕಾರ್ಮಿಕಳೊಬ್ಬರು ಮೀನು ಕದ್ದದ್ದು ಮರಕ್ಕೆ ಕಟ್ಟಿ ಥಳಿಸುವುದಕ್ಕೆ ಅರ್ಹವಾದ ಗಂಭೀರ ತಪ್ಪು ಮತ್ತು ದೂರು ದಾಖಲಿಸಿ ಆರೋಪಿಗಳನ್ನು ಪೊಲೀಸರು ಬಂಧಿಸುವುದರಿಂದ ಸಮಾಜದ ಸೌಹಾರ್ದಕ್ಕೆ ಧಕ್ಕೆಯಾಗುತ್ತದೆ ಎಂದು ಮಾಜಿ ಸಚಿವ, ಹಾಲಿ ಶಾಸಕರು ಭಾವಿಸುತ್ತಾರಾದರೆ, ಈ ಅರಣ್ಯದ ಕಾನೂನು ಆ ದಲಿತ ಮಹಿಳೆಗಷ್ಟೇ ಸೀಮಿತವಾಗುತ್ತದೆಯೇ ಅಥವಾ ಉಳಿದವರಿಗೂ ಅನ್ವಯವಾಗುತ್ತದೆಯೇ ಎಂದು ಜನರು ಕೇಳುತ್ತಿದ್ದಾರೆ. ಆ ದಲಿತ ಕಾರ್ಮಿಕ ಮಹಿಳೆ ಬರೇ ಮೀನು ಕದ್ದಿರುವುದು. ಆದರೆ ಉಡುಪಿಯೂ ಸೇರಿದಂತೆ ರಾಜ್ಯಾದ್ಯಂತ ಹಲವು ರಾಜಕಾರಣಿಗಳು ಹಲವು ಅಕ್ರಮ, ಭ್ರಷ್ಟಾಚಾರ ಪ್ರಕರಣಗಳಲ್ಲಿ ಸಿಲುಕಿಕೊಂಡಿದ್ದು, ಅವರ ವಿರುದ್ಧ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಹಾಗಾದರೆ, ಈ ಕಳ್ಳರನ್ನು ಏನು ಮಾಡಬೇಕು ಇವರನ್ನೂ ಮಲ್ಪೆಯಲ್ಲಿ ಮಾಡಿದಂತೆ ಜನರು ಮರಕ್ಕೆ ಕಟ್ಟಿ ಥಳಿಸಿದರೆ ಅದನ್ನು ಸಾರ್ವಜನಿಕ ವೇದಿಕೆಗಳಲ್ಲಿ ನಿಂತು ಮಾಜಿ ಸಚಿವರು ಸಮರ್ಥಿಸಿಕೊಳ್ಳುತ್ತಾರೆಯೆ? ಪರಶುರಾಮ ಪ್ರತಿಮೆಯಲ್ಲೇ ಒಬ್ಬ ಪ್ರಮುಖ ರಾಜಕೀಯ ನಾಯಕ ದುಡ್ಡು ಕದ್ದಿದ್ದಾನೆ ಎಂದು ಜನರು ಆರೋಪಿಸುತ್ತಿದ್ದಾರೆ. ಹಾಗಾದರೆ ಉಡುಪಿಯ ಜನರೇ ಆ ನಾಯಕನನ್ನು ಹಿಡಿದು ಮರಕ್ಕೆ ಕಟ್ಟಿ ಹಾಕಿ ಥಳಿಸಿ ಶಿಕ್ಷಿಸಿ ಸಮಾಜದ ಸೌಹಾರ್ದ ಕಾಪಾಡಬೇಕು ಎಂದು ಉಡುಪಿಯ ಸೌಹಾರ್ದಪ್ರಿಯ ಮಾಜಿ ಸಚಿವರು ಬಯಸಿದ್ದಾರೆಯೆ? ಉಡುಪಿ ಜಿಲ್ಲೆಯ ಹಲವು ಮಾಜಿ ಮತ್ತು ಹಾಲಿ ಜನಪ್ರತಿನಿಧಿಗಳ ಮೇಲೆ ಕೋಟ್ಯಂತರ ರೂಪಾಯಿ ಭ್ರಷ್ಟಾಚಾರ ನಡೆಸಿದ ಆರೋಪಗಳಿವೆ.



## ರಾಮಾಯಣ

**ಸೀತಾದೇವಿಯು ತಾನು ವನಕ್ಕೆ ಬರಲು ಕಾರಣಗಳನ್ನು ಹೇಳಿದ್ದು**

• ಹಿಂದಿನ ಸಂಚಿಕೆಯಿಂದ 78 **ನೆಯ ಅಧ್ಯಾಯ**

ಲೋಕದಲ್ಲಿ ಪತಿಹೀನೆಯಾದ ಉತ್ತಮಸ್ತ್ರೀಯು ಜೀವಿಸಳು. ಇನ್ನು ನಿನ್ನ ಚಿತ್ರಕ್ಕೆ ಸರಿಬಂದಹಾಗೆ ಮಾಡು ಇದಲ್ಲದೆ ಮತ್ತೊಂದು ರಹಸ್ಯವಾದ ವೃತ್ತಾಂತವುಂಟು. ನಾನು ನನ್ನ ತಂದೆಯ ಮನೆಯಲ್ಲಿರುವಾಗ ಸಾಮುದ್ರಿಕಲಕ್ಷಣವನ್ನು ಬಲ್ಲ ಬ್ರಾಹ್ಮಣರು ನನ್ನ ಕೈಯನ್ನು ನೋಡಿ ವನವಾಸಮಾಡುವ ಫಲವಿದೆಯೆಂದು ಹೇಳಿದರು. ಅದನ್ನು ನಾನು ನೆನೆದುಕೊಂಡು ವನವಾಸವನ್ನು ಮಾಡಬೇಕೆಂದು ಉತ್ಸಾಹದಿಂದ ಇದ್ದೇನೆ. ಯಾರನ್ನೂ ದೈವಕಲ್ಪನೆಯು ಬಿಟ್ಟಿದ್ದಲ್ಲ. ಆದ್ದರಿಂದ ನಾನು ನಿನ್ನೊಡನೆ ವನಕ್ಕೆ ಬರುತ್ತೇನೆ. ನನಗೆ ಅಪ್ಪಣೆಯನ್ನು ಕೊಡು. ಪೂರ್ವದಲ್ಲಿ ಸಾಮುದ್ರಿಕ ಲಕ್ಷಣಗಳನ್ನು ಬಲ್ಲ ಬ್ರಾಹ್ಮಣರು ಹೇಳಿದ ವನವಾಸಸಮಯವು ಬಂದಿತು. ಅವರ ಮಾತು ಸತ್ಯವಾಗಲಿ ನೀನು ಹೇಳಿದ ದುಃಖವು ಪೌರುಷಪರಾಕ್ರಮಗಳಿಲ್ಲದವರಿಗೆ ಆಗುವುದಲ್ಲದೆ ನಿನ್ನಂಥ ಮಹಾಮಹಿಮನಿಗೆ ಉಂಟಾಗಲಾರದು. ವಿವಾಹವಾದ ಬಳಿಕ ನನ್ನ ತಾಯಿ ನನ್ನನ್ನು ಕುರಿತು ಮಗಳೇ, ಇಕ್ಷ್ವಾಕುವಂಶದ ರಾಜರು ವಯಸ್ಸು ಕಳೆದಮೇಲೆ ವಾನಪ್ರಸ್ಥಾಶ್ರಮಕ್ಕೆ ಹೋಗುವರು. ನಿನ್ನ ಪತಿಯಾದ ಶ್ರೀರಾಮನು ಇಕ್ಷ್ವಾಕುವಂಶದಲ್ಲಿ ಜನಿಸಿದವನಾದ್ದರಿಂದ ಆತನೂ ವನಕ್ಕೆ ಹೋಗು ವನು. ನಿನ್ನನ್ನು ಬಿಟ್ಟು ಹೋಗದಹಾಗೆ ನಂಬಿಕೆಯನ್ನು ತೆಗೆದುಕೊ ಎಂದು ಹೇಳಿದಳು. ನಾನು ನನ್ನ ತಾಯಿಯ ಸಮ್ಮುಖದಲ್ಲಿಯೇ ನಿನ್ನನ್ನು ಬಹಳವಾಗಿ ಬೇಡಿಕೊಂಡದ್ದಕ್ಕೆ ನೀನು ಹಾಗೆಯೇ ಆಗಲೆಂದು ನನಗೆ ನಂಬಿಕೆಯನ್ನು ಕೊಟ್ಟೆ. ಆ ಸಮಯವು ನನಗೆ ಈಗಲೇ ಪ್ರಾಪ್ತವಾಯಿತು. ಆದಕಾರಣ ನನ್ನನ್ನು ಕರೆದುಕೊಂಡು ವನವನ್ನೈದು ನನಗೆ ವನವಾಸದಲ್ಲಿ ಬಹಳ ಇಚ್ಛೆಯಿದೆ. ಅಲ್ಲಿ ನಿನ್ನ ಊಳಿಗದವಳಾಗಿರುವೆನು. ನನಗೆ ನೀನೇ ಗುರು. ನೀನೇ ರಕ್ಷಕ, ನೀನೇ ಇಷ್ಟದೈವ. ಇದಕ್ಕೆ ಸಂಶಯವಿಲ್ಲ. ಮಂಗಳಸ್ವರೂಪನಾದ ಪ್ರಾಣಕಾಂತನೆ, ನಾನು ಈ ಶರೀರ ವನ್ನು ಬಿಟ್ಟು ಇನ್ನೊಂದು ದೇಹವನ್ನು ತಾಳಿದರೂ ನಿನ್ನನ್ನೇ ಭಜಿಸುವೆನು. ಲೋಕದಲ್ಲಿ ವೇದಾರ್ಥ ರಹಸ್ಯವನ್ನು ಬಲ್ಲ ಬ್ರಾಹ್ಮಣೋತ್ತಮರು, ಲೋಕದಲ್ಲಿ ತಾಯಿತಂದೆಗಳು ತಮ್ಮ ಕನ್ಯೆಕೆಯನ್ನುಮಹಾತ್ಮನಾದ ಪುರುಷನಿಗೆ ತಮ್ಮ ಜಾತಿಧರ್ಮದಿಂದ ಧಾರಾಪೂರ್ವಕವಾಗಿ ಕೊಟ್ಟರೆ ಆ ಸ್ತ್ರೀಯು ಜನ್ಮಾಂತರದಲ್ಲಿಯೂ ಆತನಿಗೆ ಪತ್ನಿಯಾಗುವಳೆಂದು ಶ್ರುತ್ಯರ್ಥಾನುಸಾರವಾಗಿ ನುಡಿಯುವರು. ಆದಕಾರಣ, ಶ್ರೀರಾಮ, ಸದಾಚಾರವುಳ್ಳವಳಾಗಿ ಪತಿವ್ರತೆಯಾಗಿ ನಿನ್ನ ಪತ್ನಿಯಾದ ನನ್ನನ್ನು ಯಾವಕಾರಣ ವನಕ್ಕೆ ಕರೆದುಕೊಂಡುಹೋಗುವುದಿಲ್ಲವೆಂದು ನುಡಿಯುತ್ತೀಯೆ ಅದನ್ನು ಬಿಟ್ಟು ನಿನ್ನಲ್ಲಿ ಭಕ್ತಿಯುಳ್ಳವಳೂ ಅನಾಥೆಯ ಪತಿವ್ರತೆಯೂ ನಿನ್ನ ಸುಖದುಃಖಗಳಿಗೆ ಒಳಗಾದವಳೂ ಆದ ನನ್ನನ್ನು ನಿನ್ನ ಸಂಗಡ ಕರೆದುಕೊಂಡುಹೋಗಿ ಅಲ್ಲಿ ಉಂಟಾಗುವ ಸುಖದುಃಖಗಳನ್ನು ನನ್ನ ಜೊತೆಯಲ್ಲಿಯೇ ಅನುಭವಿಸು.

**ಮುಂದುವರಿಯುವುದು...**

# ಶ್ರೀ ರಾಮ ಮಂದಿರದಲ್ಲಿ ಮಾರ್ಚ್ 30 ರಿಂದ ರಾಮನವಮಿ ಉತ್ಸವ

• **ಉದಯವಾಹಿನಿ, ಬೆಂಗಳೂರು**

ಮಲ್ಲೇಶ್ವರದ ಈಸ್ಟ್ ಪಾರ್ಕ್ ರಸ್ತೆಯಲ್ಲಿರುವ ಶ್ರೀ ರಾಮ ಮಂದಿರದಲ್ಲಿ ಮಾರ್ಚ್ 30 ರಿಂದ ಏಪ್ರಿಲ್ 13ರ ವರೆಗೆ ಶ್ರೀರಾಮನವಮಿ ಉತ್ಸವವನ್ನು ಏರ್ಪಡಿಸಿದ್ದು ಅವುಗಳ ವಿವರಗಳು ಈ ರೀತಿ ಇವೆ :




**ಪೂಜಾ ಕೈಂಕರ್ಯಗಳು :** ಮಾರ್ಚ್ 30, ಬೆಳಗ್ಗೆ 7 ರಿಂದ 12ರ ವರೆಗೆ ಸೂರ್ಯ ನಮಸ್ಕಾರ, ರಾಮಾಯಣ ಪಾರಾಯಣ, ಶ್ರೀ ರಾಮ ದೇವರಿಗೆ ಪೂಜೆ, ನಂತರ ತೀರ್ಥ ಪ್ರಸಾದ ವಿನಿಯೋಗ, ಸಂಜೆ 5-30ಕ್ಕೆ ಶ್ರೀ ವಿನಯ್ ಶರ್ಮಾ ಅವರಿಂದ ವಿಶ್ವಾವಸು ನಾಮ ಸಂವತ್ಸರದ ಪಂಚಾಗ ಶ್ರವಣ, ಕಾರ್ಯಕ್ರಮದ ಉದ್ಘಾಟನೆ : ಮಲ್ಲೇಶ್ವರಂ ಶಾಸಕರಾದ ಡಾ|| ಸಿ.ಎನ್. ಅಶ್ವತ್ ನಾರಾಯಣ. ಏಪ್ರಿಲ್ 6 ರಂದು ಶ್ರೀರಾಮ ನವಮಿ ಪ್ರಯುಕ್ತ ಪಂಚಾಮೃತ ಅಭಿಷೇಕ, ವಿಶೇಷ ಅಲಂಕಾರ, ತೊಟ್ಟಿಲು ಸೇವೆ, ಪಾನಕ ಸೇವೆ, ಏಪ್ರಿಲ್ 13 ರಂದು ಬೆಳಗ್ಗೆ 10 ರಿಂದ 1ರ ವರೆಗೆ ಶ್ರೀರಾಮ ಪಟ್ಟಾಭಿಷೇಕ, ಮಹಾಮಂಗಳಾರತಿ, ಅನ್ನ ಸಂತರ್ಪಣೆ, ಸಂಜೆ 7-00ಕ್ಕೆ ಪ್ರಾಕಾರೋತ್ಸವ.

**ಸಾಂಸ್ಕೃತಿಕ ಕಾರ್ಯಕ್ರಮಗಳು :** (ಪ್ರತಿದಿನ ಸಂಜೆ 6-30ಕ್ಕೆ). ಮಾರ್ಚ್ 30-ಕು|| ರಚನಾ ಶರ್ಮಾ ಮತ್ತು ಸಂಗಡಿಗರಿಂದ ಗಾಯನ, ಮಾರ್ಚ್ 31-ಎಂ.ಎಸ್. ಗೋವಿಂದಸ್ವಾಮಿ ಮತ್ತು ಎಂ.ಎಸ್.ಜಿ. ಉಮಾ ಶಂಕರ್ ಇವರಿಂದ ದ್ವಂದ್ವ ಪಿಟೀಲು ವಾದನ, ಏಪ್ರಿಲ್ 1-ಸಿ. ಅಶ್ವಿನಿ ಮತ್ತು ಎಂ.ಎಸ್.ಜಿ. ಸರ್ವಮಂಗಳ ಇವರಿಂದ ಯುಗಳ ಗಾಯನ, ಏಪ್ರಿಲ್ 2-ಕಲಾಕ್ಷಿತಿ ಸ್ಕೂಲ್ ಆಫ್ ಫೈನ್ ಆರ್ಟ್ಸ ತಂಡದವರಿಂದ ಭರತನಾಟ್ಯ, ಏಪ್ರಿಲ್ 3-ರೂಪಾ ಗಿರೀಶ್ ಅವರ ನಿರ್ದೇಶನದಲ್ಲಿ ನೃತ್ಯ ಲಹರಿ ಕಲಾಕೇಂದ್ರದ ವಿದ್ಯಾರ್ಥಿಗಳಿಂದ ಭರತನಾಟ್ಯ, ಏಪ್ರಿಲ್ 4-ಮಧುರ ಮತ್ತು ಸಂಗಡಿಗರಿಂದ ಗಾಯನ, ಏಪ್ರಿಲ್ 5-ಸನಕ ಕಲಾ ಶಾಲೆ ವಿದ್ಯಾರ್ಥಿಗಳಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ, ಏಪ್ರಿಲ್ 6-ಶ್ರೀಮತಿ ವತ್ಸಲಾ ರಾವ್ ಅವರ ಸ್ತುತಿ ವಾಹಿನಿ ತಂಡದವರಿಂದ ಭಕ್ತಿ ಸಂಗೀತ, ಏಪ್ರಿಲ್ 7-ಎಸ್. ಶಶಿಧರ್, ಜಯಶ್ರೀ ಬಾಲಾಜಿ, ಆದಿತ್ಯ ಬಾಲಾಜಿ ಇವರಿಂದ ಪಿಟೀಲು ತ್ರಯ, ಏಪ್ರಿಲ್ 8-ಬಿ.ಎಸ್. ಆನಂದ್ ಮತ್ತು ಸಂಗಡಿಗರಿಂದ ಗಾಯನ, ಏಪ್ರಿಲ್ 9-ಕು|| ವಾಣಿಶ್ರೀ ರಾಮಕೃಷ್ಣ, ಶ್ರೀಮತಿ ಮೈತ್ರಿ ಮತ್ತು ಸಂಗಡಿಗರಿಂದ ಹರಿನಾಮ ಸಂಕೀರ್ತನೆ, ಏಪ್ರಿಲ್ 10-ಪಟ್ಟಾಭಿರಾಮ ಪಂಡಿತ್ ಮತ್ತು ಸಂಗಡಿಗರಿಂದ ಗಾಯನ, ಏಪ್ರಿಲ್ 11-ಸಂಧ್ಯಾ ಶ್ರೀನಾಥ್, ಸುಮಲತಾ ಮಂಜುನಾಥ್ ಸಂಗಡಿಗರಿಂದ ಹರಿನಾಮ ಸಂಕೀರ್ತನೆ, ಏಪ್ರಿಲ್ 12-ರುದ್ರಪಟ್ಟಣಂ ಸಹೋದರರಾದ ಆರ್.ಎನ್. ತ್ಯಾಗರಾಜನ್, ಆರ್.ಎನ್. ತಾರಾನಾಥನ್ ಮತ್ತು ಸಂಗಡಿಗರಿಂದ ಯುಗಳ ಗಾಯನ. ಈ ಮೇಲಿನ ಎಲ್ಲಾ ಕಾರ್ಯಕ್ರಮಗಳಲ್ಲೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶ್ರೀರಾಮ ಕೃಪೆಗೆ ಪಾತ್ರರಾಗಬೇಕೆಂದು ಗೌರವ ಕಾರ್ಯದರ್ಶಿಗಳಾದ **ಸಿ. ಚಂದ್ರಶೇಖರ್ ವಿನಂತಿಸಿದ್ದಾರೆ. ಸ್ಥಳ :** ಶ್ರೀ ರಾಮ ಮಂದಿರ, ಈಸ್ಟ್ ಪಾರ್ಕ್ ರಸ್ತೆ, ಅಂಚೆ ಕಚೇರಿ ಹತ್ತಿರ, ಮಲ್ಲೇಶ್ವರಂ, ಬೆಂಗಳೂರು-560003

**ವಿಶ್ವಾವಸು ನಾಮ ಸಂವತ್ಸರದ ಪಂಚಾಗ ಶ್ರವಣ**

# ಬೆಳಗ್ಗೆ ಎದ್ದ ಕೂಡಲೇ ತಿಂದರೆ ಸಿಗುವ ಆರೋಗ್ಯ





ಬೆಳಗ್ಗೆ ಎದ್ದು ಖಾಲಿ ಹೊಟ್ಟೆಗೆ, ವೈದ್ಯರು ಸೂಚಿಸಿರುವ ಕೆಲವೊಂದು ಆರೋಗ್ಯಕರ ಆಹಾರಗಳನ್ನು ಸೇವನೆ ಮಾಡುತ್ತಾ ಬಂದರೆ, ಅದರ ಆರೋಗ್ಯಕರ ಗುಣಲಕ್ಷಣಗಳು ನಮ್ಮ ದೇಹದ ಮೇಲೆ ಸಾಕಷ್ಟು ಪ್ರಭಾವವನ್ನು ಹೊಂದಿರುತ್ತವೆ. ಅದರಂತೆ ಇಡೀ ರಾತ್ರಿ ನೆನೆಹಾಕಿದ ಡ್ರೈ ಫ್ರೂಟ್ಸ್ ಗಳನ್ನು ಬೆಳಗ್ಗೆ ಎದ್ದು ಖಾಲಿ ಹೊಟ್ಟೆಯಲ್ಲಿ ಸೇವನೆ ಮಾಡಿದರೆ, ಸಾಕಷ್ಟು ಕಾಯಿಲೆಗಳನ್ನು ನೀವು ದೂರ ಇರಿಸಬಹುದು. ವಿಶೇಷವಾಗಿ ಖಾಲಿ ಹೊಟ್ಟೆಗೆ ನೆನೆಸಿಟ್ಟ ಒಣ ಖರ್ಜೂರ ಬಾದಾಮಿ ಬೀಜಗಳನ್ನು ಸೇವಿಸುವುದರಿಂದ ಏನೆಲ್ಲಾ ಆರೋಗ್ಯ ಪ್ರಯೋಜನಗಳು ಸಿಗುತ್ತದೆ ಎನ್ನುವುದನ್ನು ನೋಡುತ್ತಾ ಹೋಗೋಣ?

ಒಣ ಬೀಜಗಳು ಹಾಗೂ ಒಣ ಹಣ್ಣುಗಳಲ್ಲಿ ಹಲವಾರು ಬಗೆಯ ಪೋಷಕಾಂಶಗಳು ಇವೆ ಎನ್ನುವುದು ನಮಗೆ ತಿಳಿದೇ ಇದೆ. ಇವುಗಳನ್ನು ನಿತ್ಯವೂ ಸೇವನೆ ಮಾಡಿದರೆ ಆಗ ಇದರಿಂದ ದೇಹಕ್ಕೆ ಹೆಚ್ಚಿನ ಲಾಭ ಸಿಗುವುದು. ಹೀಗಾಗಿ ದೈನಂದಿನ ಆಹಾರಪದ್ಧತಿಯಲ್ಲಿ ದಿನನಿತ್ಯವೂ ಮೂರು ಖರ್ಜೂರ, ಐದು ಬಾದಾಮಿ ಬೀಜಗಳನ್ನು ಸೇರ್ಪಡೆ ಮಾಡಿಕೊಂಡರೆ ಬಹಳ ಒಳ್ಳೆಯದು. ಪ್ರಮುಖವಾಗಿ ಇಂತಹ ಒಣಬೀಜಗಳಲ್ಲಿ ಹಲವಾರು ಬಗೆಯ ವಿಟಮಿನ್ಸ್, ಖನಿಜಾಂಶ ಮತ್ತು ಆ್ಯಂಟಿಆಕ್ಸಿಡೆಂಟ್ ಸಮೃದ್ಧವಾಗಿದೆ. ಶತಮಾನಗಳಿಂದ ಈ ಆಹಾರವು ತನ್ನದೇ ಆಗಿರುವ ಸ್ಥಾನ ಪಡೆದುಕೊಂಡಿದೆ. ಮೆದುಳನ್ನು ತೀಕ್ಷ್ಣಗೊಳಿಸಲು, ಹೃದಯವನ್ನು ಬಲಪಡಿಸಲು ಅಥವಾ ಆರೋಗ್ಯಕಾರಿ ತೂಕ ಕಾಪಾಡಲು ಇದು ಬೇಕೇಬೇಕು. ಪ್ರತಿನಿತ್ಯವೂ ಇದನ್ನು ಸೇವನೆ ಮಾಡಿದರೆ, ಆಗ ಇದರಿಂದ ಯಾವೆಲ್ಲಾ ಲಾಭಗಳು ಸಿಗುವುದು ಎಂದು ತಿಳಿಯಿರಿ....

**ದಿನದ ಆರಂಭ ಧನಾತ್ಮಕ ಮತ್ತು ಶಕ್ತಿಯುತವಾಗಿಸುವುದು:** ಪ್ರತಿಯೊಬ್ಬರಿಗೂ ಬೆಳಗ್ಗೆ ಎದ್ದ ಕೂಡಲೇ ಶಕ್ತಿ ಬೇಕಾಗುತ್ತದೆ. ನಿದ್ರೆಯಿಂದ ಎದ್ದಾಗ ದೇಹವು ತುಂಬಾ ಜಡ ಸ್ವಭಾವದಲ್ಲಿರುವುದು. ಹೀಗಾಗಿ ಒಂದೆರಡು ನೆನೆಸಿಟ್ಟ ಖರ್ಜೂರ ಸೇವನೆ ಮಾಡಿದರೆ ಆಗ ಇದರಲ್ಲಿನ ಗ್ಲುಕೋಸ್ ಮತ್ತು ಫ್ರಾಕ್ಟೋಸ್ ಅಂಶವು ತಕ್ಷಣವೇ ಶಕ್ತಿ ಒದಗಿಸುವುದು. ಅಷ್ಟೇ ಅಲ್ಲದೆ, ನಾಲ್ಕೈದು ಬಾದಾಮಿ ಬೀಜಗಳನ್ನು ಸೇವನೆ ಮಾಡುವುದರಿಂದ, ದಿನವಿಡಿ ಶಕ್ತಿಯಿಂದ ಇರಲು ಈ ಒಣ ಬೀಜಗಳಲ್ಲಿರುವ ಆರೋಗ್ಯಕಾರಿ ಕೊಬ್ಬು ಪ್ರೋಟೀನ್ ನೆರವಾಗುವುದು. ಹೀಗಾಗಿ ಸಂಜೆಯಾಗುತ್ತಲೇ ಶಕ್ತಿ ಕುಂದುವುದನ್ನು ತಪ್ಪಿಸಬಹುದು.



**ಬಾದಾಮಿ ಮೆದುಳಿನ ಶಕ್ತಿ ವೃದ್ಧಿಸುವುದು:** ದಿನವಿಡಿ ಬುದ್ಧಿಯ ಆಲಸ್ಯವನ್ನು ಎದುರಿಸುತ್ತಿರುವವರು, ನೆನೆಸಿಟ್ಟ ಬಾದಾಮಿಯನ್ನು ಬೆಳಗ್ಗೆ ಸೇವಿಸಬೇಕು. ಇದರಲ್ಲಿ ಇರುವ ವಿಟಮಿನ್ ಇ ಮತ್ತು ಒಮೇಗಾ-3 ಕೊಬ್ಬಿನಾಮ್ಲವು ಮೆದುಳಿನ ಅಂಗಾಂಶಗಳನ್ನು ರಕ್ಷಣೆ ಮಾಡಿ, ನೆನಪಿನ ಶಕ್ತಿ ವೃದ್ಧಿಸುವುದು. ಖರ್ಜೂರದಲ್ಲಿ ಫ್ಲಾವನಾಯ್ಡ್ ಎನ್ನುವ ಉರಿಯೂತ ಶಮನಕಾರಿ ಗುಣವಿದ್ದು, ಇದು ಮೆದುಳಿನ ಉರಿಯೂತ ಕಡಿಮೆ ಮಾಡಿ, ನೆನಪಿನ ಶಕ್ತಿ ವೃದ್ಧಿಸುವುದು.

**ಹೃದಯ ಬಲಪಡಿಸಿ, ಕೆಟ್ಟ ಕೊಲೆಸ್ಟ್ರಾಲ್ ತಗ್ಗಿಸುವುದು** :ಬಾದಾಮಿಯಲ್ಲಿ ಏಕಪರ್ಯಾಪ್ತ ಕೊಬ್ಬಿನಾಂಶವಿದ್ದು, ಇದು ಕೆಟ್ಟ ಕೊಲೆಸ್ಟ್ರಾಲ್ ಮಟ್ಟ ತಗ್ಗಿಸಲು ಸಹಕಾರಿ ಆಗಿದೆ. ಹೀಗಾಗಿ ಬೆಳಗ್ಗೆ ಬಾದಾಮಿ ಸೇವನೆ ಮಾಡಿದರೆ, ಆಗ ಹೃದಯದ ಆರೋಗ್ಯ ಕೂಡ ಉತ್ತಮವಾಗಿರುವುದು. ಖರ್ಜೂರದಲ್ಲಿ ಪೊಟಾಶಿಯಂ ಮತ್ತು ಮೆಗ್ನಿಶಿಯಂ ಅಂಶಿದ್ದು, ಇದು ರಕ್ತದೊತ್ತಡ ನಿಯಂತ್ರಣಕ್ಕೆ ಸಹಕಾರಿ. ಇವೆರಡನ್ನು ಜತೆಯಾಗಿ ಸೇವಿಸಿದರೆ, ಆಗ ಇದರಿಂದ ಹೃದಯದ ಆರೋಗ್ಯ ಕಾಪಾಡಬಹುದು.

**ಹೊಟ್ಟೆಯ ಆರೋಗ್ಯ ಸುಧಾರಣೆ:** ಹೊಟ್ಟೆ ಉಬ್ಬರ ಅಥವಾ ಅಸಾಮಾನ್ಯ ಜೀರ್ಣಕ್ರಿಯೆ ಸಮಸ್ಯೆಯನ್ನು ಎದುರಿಸುತ್ತಿದ್ದರೆ, ಆಗ ಬೆಳಗ್ಗೆ ಮೂರು ಖರ್ಜೂರ ಮತ್ತು ಐದು ಬಾದಾಮಿ ತಿಂದರೆ ಒಳ್ಳೆಯ ಲಾಭ ಸಿಗುವುದು.

ಖರ್ಜೂರದಲ್ಲಿ ಒಳ್ಳೆಯ ನಾರಿನಾಂಶ ವಿದ್ದು, ಇದು ಕರುಳಿನ ಕ್ರಿಯೆ ಸರಾಗವಾಗಿಸಿ, ಮಲಬದ್ಧತೆ ತಡೆಯುವುದು. ಬಾದಾಮಿಯಲ್ಲಿರುವ ಆರೋಗ್ಯಕಾರಿ ಪ್ರೋಬಯೋಟಿಕ್ ಅಂಶವು ಹೊಟ್ಟೆಯ ಒಳ್ಳೆಯ ಬ್ಯಾಕ್ಟೀರಿಯಾಕ್ಕೆ ಪೋಷಣೆ ನೀಡುವುದು.

ಇದರಿಂದ ಜೀರ್ಣಕ್ರಿಯೆ ಉತ್ತಮವಾಗಿ, ಪೋಷಕಾಂಶಗಳು ಸರಿಯಾಗಿ ಹೀರಲ್ಪಡುವುದು. **ಆರೋಗ್ಯಕಾರಿ ತೂಕ ಕಾಪಾಡಲು:** ನಾರಿನಾಂಶವನ್ನು ಹೊಂದಿರುವ ಖರ್ಜೂರವು ದೀರ್ಘಕಾಲ ಹೊಟ್ಟೆ ತುಂಬಿದಂತೆ ಮಾಡಿ, ಪದೇ ಪದೇ ಹಸಿವಾಗುವುದನ್ನು ತಪ್ಪಿಸುವುದು. ಅದೇ ಬಾದಾಮಿಯಲ್ಲಿನ ಆರೋಗ್ಯಕಾರಿ ಕೊಬ್ಬು ಮತ್ತು ಪ್ರೋಟೀನ್ ಬಯಕೆ ಕಡಿಮೆ ಮಾಡುವುದು. ಈ ಎರಡು ಅತಿಯಾಗಿ ತಿನ್ನುವುದನ್ನು ತಡೆದು, ತೂಕ ಇಳಿಸಲು ಸಹಕಾರಿ ಆಗಿರುವುದು.

# ರಾಜಾನುಕುಂಟೆಯಲ್ಲಿ ರಣರಾಗಿಣಿ ಶಾಖೆಯ ಉದ್ಘಾಟನೆ

• **ಉದಯವಾಹಿನಿ, ದೊಡ್ಡಬಳ್ಳಾಪುರ**

ಭಾರತದಲ್ಲಿ ಮಹಿಳೆಯರನ್ನು ಒಂದಿಲ್ಲೊಂದು ಮಾಧ್ಯಮದಿಂದ ಶೋಷಿಸಲಾಗುತ್ತಿದೆ. ಲವ್ ಜಿಹಾದ್ ನ ಮಾಧ್ಯಮದಿಂದ ಮುಗ್ಧ ಹೆಣ್ಣುಮಕ್ಕಳನ್ನು ವಂಚಿಸಿ ಅನ್ಯ ಧರ್ಮಕ್ಕೆ ಮತಾಂತರ, ನೌಕರಿಯ ನೆಪದಲ್ಲಿ ಮತಾಂತರವಾಗಲು ಕಿರುಕುಳ ಮತ್ತು ಸ್ತ್ರೀಯರ ಅತ್ಯಾಚಾರದ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಮಹಿಳೆಯರಲ್ಲಿ ಶೌರ್ಯ ಜಾಗೃತಿಗೊಳಿಸಿ, ತಮ್ಮ ರಕ್ಷಣೆಯನ್ನು ಮಾಡಿಕೊಳ್ಳಲು ಮತ್ತು ಮಹಿಳೆಯರನ್ನು ಸಂಘಟಿಸಲು ಇಂದು ದೊಡ್ಡಬಳ್ಳಾಪುರದ ರಾಜಾನುಕುಂಟೆಯಲ್ಲಿ ಹಿಂದೂ ಜನಜಾಗೃತಿ ಸಮಿತಿಯ ಮಹಿಳಾ ರಣರಾಗಿಣಿ ಶಾಖೆಯನ್ನು ಉದ್ಘಾಟಿಸಲಾಯಿತು. ಇದರಲ್ಲಿ ರಣರಾಗಿಣಿ ಶಾಖೆಯ ರಾಜ್ಯ ಸಮನ್ವಯಕರಾದ ಸೌ. ಭವ್ಯ ಗೌಡ ಇವರು ಉದ್ಘಾಟಿಸಿದರು, ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್‌ನ ಅಧ್ಯಕ್ಷರಾದ




ಉದಯವಾಹಿನಿ ಚಿತ್ರ

ಶ್ರೀ. ಆನಂದಪ್ಪ ಮತ್ತು ಸ್ಥಳೀಯ ಹಲವು ಸ್ತ್ರೀಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಗ್ರಾಮ ಪಂಚಾಯತ್ ನ ಅಧ್ಯಕ್ಷರಾದ ಶ್ರೀ. ಆನಂದಪ್ಪ ಇವರು ಮಾತನಾಡಿ ದೇಶದ ಎಲ್ಲಾ ಕಡೆಯಿಂದಲೂ ಮಹಿಳೆಯರು ಜಾಗೃತರಾಗಬೇಕಾಗಿದೆ, ಸ್ವಸಂರಕ್ಷಣೆಗೆ ತಯಾರಾಗಬೇಕು, ನಮ್ಮ ಮನೆ, ಸಂಸಾರವನ್ನು ರಕ್ಷಣೆ ಮಾಡುವುದರ ಜೊತೆಗೆ ನಮ್ಮ ಸಮಾಜವನ್ನು ರಕ್ಷಣೆ ಮಾಡಬೇಕು. ಹೆಣ್ಣು ಮಕ್ಕಳು ಸದೃಢವಾದರೆ ಭಾರತ ಖಂಡಿತ ರಾಮರಾಜ್ಯವಾಗುತ್ತದೆ ಎಂದರು.

# ಅಲೋವೆರಾ ಹಚ್ಚುತ್ತಿದ್ದೀರಾ? ಹಾಗಾದ್ರೆ ಈ ಬಗ್ಗೆ ಗಮನವಿರಲಿ!

ಅಲೋವೆರಾ ಚರ್ಮ ಮತ್ತು ಕೂದಲಿನ ಆರೈಕೆಗೆ ಪರಿಣಾಮಕಾರಿ ಎಂಬುದು ನಿಮಗೆ ತಿಳಿದಿರಬಹುದು. ಅಲೋವೆರಾ ವಿವಿಧ ಚರ್ಮದ ಸಮಸ್ಯೆಗಳಿಗೆ ಅದ್ಭುತ ನೈಸರ್ಗಿಕ ಪರಿಹಾರವಾಗಿದೆ. ಹಾಗೆಯೇ ಅಲೋವೆರಾ ಕೂದಲಿನ ಬೆಳವಣಿಗೆಯನ್ನು ಉತ್ತೇಜಿಸುವ, ತಲೆಹೊಟ್ಟನ್ನು ಕಡಿಮೆ ಮಾಡುವ ಮತ್ತು ನೆತ್ತಿಯ ಆರೋಗ್ಯವನ್ನು ಕಾಪಾಡುವ ಸಾಮರ್ಥ್ಯ ಹೊಂದಿದೆ. ಆದರೆ ಅಲೋವೆರಾವನ್ನು ನಿಮ್ಮ ತ್ವಚೆಗೆ ಹಚ್ಚುವ ಮುನ್ನ ಕೆಲವು ವಿಷಯಗಳನ್ನು ನೀವು ತಿಳಿದುಕೊಳ್ಳಬೇಕು. ಅಲೋವೆರಾ ವಿಟಮಿನ್ ಗಳು (ಎ, ಸಿ, ಇ ಮತ್ತು ಬಿ 12), ಖನಿಜಗಳು (ಫೋಲಿಕ್ ಆಮ್ಲ ಸೇರಿದಂತೆ), ಕಿಣ್ವಗಳು ಮತ್ತು ಅಮೈನೋ ಆಮ್ಲಗಳನ್ನು ಹೊಂದಿದೆ. ಈ ಪೋಷಕಾಂಶಗಳು ಆರೋಗ್ಯಕರ ತ್ವಚೆಗೆ ಮತ್ತು ಕೂದಲಿಗೆ ಅತ್ಯಗತ್ಯ. ಅಲೋವೆರಾದ ಹಿತವಾದ, ಹೈಡ್ರೇಟಿಂಗ್ ಮತ್ತು ಗುಣಪಡಿಸುವ ಗುಣಲಕ್ಷಣಗಳಿಗೆ ಹೆಚ್ಚಿನವರು ಇದನ್ನು ತಮ್ಮ ಸೌಂದರ್ಯವರ್ಧಕ ಉತ್ಪನ್ನವಾಗಿ ಬಳಸುತ್ತಾರೆ. ಬಿಸಿಲಿನ ಪರಿಹಾರದಿಂದ ಹಿಡಿದು ಮೊಡವೆ ಚಿಕಿತ್ಸೆಯವರೆಗೆ, ಈ ನೈಸರ್ಗಿಕ ಅದ್ಭುತವು ಶತಮಾನಗಳಿಂದ ಚರ್ಮದ ಆರೈಕೆಯಲ್ಲಿ ಪ್ರಧಾನವಾಗಿದೆ. ಆದರೂ ನಿಮ್ಮ ಚರ್ಮಕ್ಕೆ ಅಲೋವೆರಾವನ್ನು ಹಚ್ಚುವ ಮೊದಲು ಸುರಕ್ಷತೆ ಮತ್ತು ಪರಿಣಾಮಕಾರಿತ್ವವನ್ನು ನೀವು ತಿಳಿದುಕೊಳ್ಳಬೇಕು. ನೋಯ್ಡಾದ ಶಾರದಾ ಆಸ್ಪತ್ರೆಯ ಚರ್ಮರೋಗ ವಿಭಾಗದ ತಜ್ಞ ಡಾ.ಸಂಜೀವ್ ಗುಲಾಟಿ ಅಲೋವೆರಾವನ್ನು ಹಚ್ಚುವ ಮೊದಲು ಗಮನಿಸಬೇಕಾದ ಏಳು ವಿಷಯಗಳನ್ನು ಇಲ್ಲಿ ಹಂಚಿಕೊಂಡಿದ್ದಾರೆ.



**ಶುದ್ಧ ಅಲೋವೆರಾ ಆಯ್ದುಕೊಳ್ಳಿ:** ಸೌಂದರ್ಯವರ್ಧಕವಾಗಿ ಸಿಗುವ ಕಾಸ್ಮೆಟಿಕ್ ಜೆಲ್‌ಗಳು, ಫೇಸ್ ವಾಶ್‌ಗಳು ಅಲೋವೆರಾವನ್ನು ಹೊಂದಿದ್ದರೂ ಇತರ ಮಿಶ್ರಣಗಳು, ಸಂರಕ್ಷಕಗಳು ಮತ್ತು ಕೃತಕ ಸುಗಂಧ ದ್ರವ್ಯಗಳನ್ನು ಹೊಂದಿರುತ್ತವೆ, ಅದು ಸೂಕ್ಷ್ಮ ಚರ್ಮವನ್ನು ಕಿರಿಕಿರಿಗೊಳಿಸಬಹುದು.

ಸಾಧ್ಯವಾದರೆ, ಸಸ್ಯದಿಂದ ತಾಜಾ ಅಲೋವೆರಾವನ್ನು ಆರಿಸಿ ಅಥವಾ ಶುದ್ಧತೆಯನ್ನು ಖಚಿತಪಡಿಸಿಕೊಳ್ಳಲು ಪದಾರ್ಥದ ಲೇಬಲ್‌ಗಳನ್ನು ಪರಿಶೀಲಿಸಿ. ಕಡಿಮೆ ಸೇರ್ಪಡೆಗಳಿರುವುದನ್ನು ಆಯ್ದುಕೊಳ್ಳಿ.

**ಮಾಲಿನ್ಯಕಾರಕಗಳನ್ನು ಪರಿಶೀಲಿಸಿ:** ನೀವು ಸಸ್ಯದಿಂದ ತಾಜಾ ಅಲೋವೆರಾ ಜೆಲ್ ಅನ್ನು ಬಳಸುತ್ತಿದ್ದರೆ, ಜೆಲ್ ಅನ್ನು ಹೊರತೆಗೆಯುವ ಮೊದಲು ಎಲೆಯನ್ನು ಚೆನ್ನಾಗಿ ತೊಳೆಯಬೇಕು. ಅಲೋವೆರಾ ಎಲೆಗಳು ಕೊಳೆ, ಬ್ಯಾಕ್ಟೀರಿಯಾ ಅಥವಾ ಲ್ಯಾಟೆಕ್ಸ್ ಶೇಷವನ್ನು (ಚರ್ಮ ಮತ್ತು ಜೆಲ್ ನಡುವಿನ ಹಳದಿ ರಸ) ಸಾಗಿಸಬಹುದು, ಇದು ಕಿರಿಕಿರಿ ಉಂಟುಮಾಡಬಹುದು. ಹೊರತೆಗೆದ ಜೆಲ್ ಅನ್ನು ನಿಮ್ಮ ಚರ್ಮಕ್ಕೆ ಹಚ್ಚುವ ಮೊದಲು ತೊಳೆಯಿರಿ.

**ಬಳಸುವ ಉತ್ತಮ ವಿಧಾನಗಳನ್ನು ತಿಳಿದುಕೊಳ್ಳಿ:** ಅಲೋವೆರಾವನ್ನು ಮಾಯಿಶ್ಚರೈಸರ್, ಫೇಸ್ ಮಾಸ್ಕ್ ಅಥವಾ ಕಲೆಗಳನ್ನು ತೆಗೆಯುವ ಚಿಕಿತ್ಸೆಯಲ್ಲಿ ಬಳಸಬಹುದು. ಉತ್ತಮ ಫಲಿತಾಂಶಕ್ಕೆ ಇತರ ಚರ್ಮ ಸ್ನೇಹಿ ಪದಾರ್ಥಗಳೊಂದಿಗೆ ಮಿಶ್ರಣ ಮಾಡಿ ಬಳಸುವುದು ಉತ್ತಮ. ಉದಾಹರಣೆಗೆ, ಅಲೋವೆರಾವನ್ನು ಜೇನುತುಪ್ಪದೊಂದಿಗೆ ಮಿಶ್ರಣ ಮಾಡಿದರೆ, ಜಲಸಂಚಯನವನ್ನು ಹೆಚ್ಚಿಸುತ್ತದೆ, ಟೀ ಟ್ರೀ ಎಣ್ಣೆಯೊಂದಿಗೆ ಬೆರೆಸುವುದರಿಂದ ಮೊಡವೆಗಳನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ.

**ನಿಮ್ಮ ಚರ್ಮದ ಪ್ರಕಾರವನ್ನು ತಿಳಿದುಕೊಳ್ಳಿ:** ಅಲೋವೆರಾ ಸಾಮಾನ್ಯವಾಗಿ ಹೆಚ್ಚಿನ ಚರ್ಮದ ಪ್ರಕಾರಗಳಿಗೆ ಸುರಕ್ಷಿತವಾಗಿದೆ, ಆದರೆ ಇದು ಎಲ್ಲರಿಗೂ ಸೂಕ್ತವಲ್ಲ. ನೀವು ಒಣ ಚರ್ಮವನ್ನು ಹೊಂದಿದ್ದರೆ, ಮಾಯಿಶ್ಚರೈಸರ್ ನೊಂದಿಗೆ ಅಲೋವೆರಾ ಬಳಸಬಹುದು. ಅಲೋವೆರಾದ ಆಸ್ಟ್ರಿಜೆಂಟ್ ಗುಣಲಕ್ಷಣಗಳು ಅತಿಯಾದ ಶುಷ್ಕತೆಗೆ ಕಾರಣವಾಗಬಹುದು. ನೀವು ಎಣ್ಣೆಯುಕ್ತ ಅಥವಾ ಮೊಡವೆ ಪೀಡಿತ ಚರ್ಮವನ್ನು ಹೊಂದಿದ್ದರೆ, ಅಲೋವೆರಾ ಅದರ ಉರಿಯೂತ ನಿವಾರಕ ಮತ್ತು ಬ್ಯಾಕ್ಟೀರಿಯಾ ವಿರೋಧಿ ಗುಣಲಕ್ಷಣಗಳಿಂದಾಗಿ ಪ್ರಯೋಜನಕಾರಿಯಾಗಿದೆ.

**ಅಲರ್ಜಿಯನ್ನು ಪರೀಕ್ಷಿಸಿ:** ಅಲೋವೆರಾ ಬಳಸುವ ಮೊದಲು, ಪ್ಯಾಚ್ ಟೆಸ್ಟ್ ಮಾಡಿ. ನಿಮ್ಮ ಅಂಗೈ ಮೇಲೆ ಅಥವಾ ನಿಮ್ಮ ಕಿವಿಯ ಹಿಂದೆ ಸ್ವಲ್ಪ ಪ್ರಮಾಣದ ಅಲೋವೆರಾ ಜೆಲ್ ಅನ್ನು ಹಚ್ಚಿ ಮತ್ತು 24 ಗಂಟೆಗಳ ಕಾಲ ಕಾಯಿರಿ. ನೀವು ಕೆಂಪಾಗುವಿಕೆ, ತುರಿಕೆ ಅಥವಾ ಕಿರಿಕಿರಿಯನ್ನು ಅನುಭವಿಸಿದರೆ, ಅದನ್ನು ನಿಮ್ಮ ಮುಖ ಅಥವಾ ದೇಹದ ಮೇಲೆ ಬಳಸಬೇಡಿ. ಕೆಲವರು ಅಲೋವೆರಾಗೆ ಅಲರ್ಜಿಯ ಪ್ರತಿಕ್ರಿಯೆಯನ್ನು ಹೊಂದಿರಬಹುದು.



# ಸಕ್ಕರೆಕಾಯಿಲೆ ಇರುವವರು ಶುಗರ್ ಕಂಟ್ರೋಲ್ ಮಾಡಿಲ್ಲಂದ್ರೆ, ಕಣ್ಣಿಗೆ ಸಂಬಂಧಿಸಿದ ಈ ಎಲ್ಲಾ ಸಮಸ್ಯೆ ಕಾಡುತ್ತೆ ಎಚ್ಚರ!

ಮಧುಮೇಹದಿಂದಾಗುವ ಕಣ್ಣಿನ ಸಮಸ್ಯೆಗಳು ಹಲವಾರು. ಹಾಗಾಗಿ ಮಧುಮೇಹದಿಂದ ಕಣ್ಣಿನ ಹಾನಿಯನ್ನು ತಡೆಯಲು ನೀವು ಏನು ಮಾಡಬೇಕು ಎನ್ನುವುದನ್ನು ನಾವಿಲ್ಲಿ ತಿಳಿಯೋಣ. ಮಧುಮೇಹವು ನಿಮ್ಮ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಮಾತ್ರ ಪರಿಣಾಮ ಬೀರುವುದಿಲ್ಲ. ಇದು ಕಣ್ಣುಗಳು ಸೇರಿದಂತೆ ದೇಹದ ಹಲವು ಅಂಗಗಳ ಮೇಲೆ ಪರಿಣಾಮ ಬೀರಬಹುದು. ಮಧುಮೇಹಿಗಳಲ್ಲಿ ದೃಷ್ಟಿ ದೋಷದ ಸಮಸ್ಯೆಯನ್ನು ನೀವು ಗಮನಿಸಿರುವಿರಿ. ಅತಿಯಾದ ಮಧುಮೇಹವು ದೇಹದ ಒಂದೊಂದೇ ಅಂಗವನ್ನು ಹಾನಿಗೊಳಿಸುತ್ತಾ ಹೋಗುತ್ತದೆ. ಹಾಗಾಗಿ ಅಂಗಗಳು ಹಾನಿಯಾಗುವ ಮೊದಲೇ ಶುಗರ್ ಲೆವೆಲ್ ಕಂಟ್ರೋಲ್‌ಗೆ ತರುವುದು ಬಹಳ ಮುಖ್ಯ.

**ಮಧುಮೇಹದಿಂದ ಉಂಟಾಗುವ ಸಮಸ್ಯೆಗಳು:** ಮಧುಮೇಹವು ದೇಹದಲ್ಲಿ ಸಕ್ಕರೆ ಮಟ್ಟವನ್ನು ಹೆಚಿಸುವುದು ಮಾತ್ರವಲ್ಲದೆ ಅನೇಕ ಆರೋಗ್ಯ ಸಮಸ್ಯೆಗಳನ್ನು ಉಂಟುಮಾಡುತ್ತದೆ. ಇದರಿಂದಾಗಿ ಅತಿಯಾದ ಹಸಿವು ಮತ್ತು ಬಾಯಾರಿಕೆ, ಪದೇ ಪದೇ ಮೂತ್ರ ವಿಸರ್ಜನೆ, ಆಯಾಸ ಮತ್ತು ಮನಸ್ಥಿತಿಯಲ್ಲಿ ಬದಲಾವಣೆಗಳು ಉಂಟಾಗುತ್ತವೆ. ಇತರ ಗಂಭೀರ ಪ್ರಕರಣಗಳಲ್ಲಿ, ರಕ್ತದಲ್ಲಿನ ಸಕ್ಕರೆ ಮಟ್ಟ ಹೆಚ್ಚಾಗುವುದರಿಂದ ಗಂಭೀರ ಹೃದಯ ಕಾಯಿಲೆ, ಮೂತ್ರಪಿಂಡ ವೈಫಲ್ಯ ಮತ್ತು ರಕ್ತನಾಳಗಳಲ್ಲಿನ ರಕ್ತ ಪರಿಚಲನೆಗೆ ಹಾನಿಯಾಗಬಹುದು. ಕೆಲವು ಜನರಲ್ಲಿ, ಮಧುಮೇಹದ ಹೆಚ್ಚಳವು ಕಣ್ಣುಗಳ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಇದರಲ್ಲಿ ದೃಷ್ಟಿ ಕಡಿಮೆಯಾಗುವಂತಹ ಸಮಸ್ಯೆಗಳು ಸೇರಿವೆ.



**ಮಧುಮೇಹದಿಂದಾಗುವ ಗಂಭೀರ ಕಣ್ಣಿನ ಕಾಯಿಲೆಗಳು:** ಮಧುಮೇಹದಿಂದಾಗಿ ರೆಟಿನಾದಲ್ಲಿನ ಸಣ್ಣ ರಕ್ತನಾಳಗಳು ಹಾನಿಗೊಳಗಾಗಲು ಪ್ರಾರಂಭಿಸುತ್ತವೆ. ಇದು ಕಣ್ಣುಗಳ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಇದರಿಂದಾಗಿ ಡಯಾಬಿಟಿಕ್ ರೆಟಿನೋಪತಿ ಎಂಬ ಸಮಸ್ಯೆ ಪ್ರಾರಂಭವಾಗುತ್ತದೆ.

ಕಾಲಾನಂತರದಲ್ಲಿ, ಅಧಿಕ ರಕ್ತದ ಸಕ್ಕರೆ ಮಟ್ಟವು ಕಣ್ಣಿನ ನರಗಳನ್ನು ದುರ್ಬಲಗೊಳಿಸುತ್ತದೆ. ಸೋರಿಕೆಗಳು ಅಥವಾ ರಕ್ತಸ್ರಾವ ಸಂಭವಿಸಬಹುದು, ಇದು ರೆಟಿನಾಗೆ ಆಮ್ಲಜನಕದ ಪೂರೈಕೆಯನ್ನು ಕಡಿಮೆಮಾಡುತ್ತದೆ. ಇದು ಇತರ ಕಣ್ಣಿನ ಸಮಸ್ಯೆಗಳಿಗೂ ಕಾರಣವಾಗಬಹುದು.

**ಇತರ ಕಣ್ಣಿನ ಸಮಸ್ಯೆಗಳು:** ಡಯಾಬಿಟಿಕ್ ಮ್ಯಾಕ್ಯುಲರ್ ಎಡಿಮಾ: ರೆಟಿನಾದ ಮಧ್ಯ ಭಾಗದಲ್ಲಿ (ಮ್ಯಾಕುಲಾ) ಊತ. ದೃಷ್ಟಿ ಮಂದವಾಗಲು ಕಾರಣವಾಗುತ್ತದೆ.

**ಕಣ್ಣಿನ ಪೊರೆಗಳು:** ಮಧುಮೇಹವು ಕಣ್ಣಿನ ಪೊರೆಯ ಅಪಾಯವನ್ನು ಹೆಚ್ಚಿಸುತ್ತದೆ, ಇದು ಕಣ್ಣಿನ ಮಸೂರವನ್ನು ಮಂಜಾಗಿಸುತ್ತದೆ ಮತ್ತು ದೃಷ್ಟಿಯನ್ನು ದುರ್ಬಲಗೊಳಿಸುತ್ತದೆ.

**ಗ್ಲುಕೋಮಾ:** ಮಧುಮೇಹ ರೋಗಿಗಳು ಗ್ಲುಕೋಮಾದ ಬಗ್ಗೆ ದೂರು ನೀಡಲು ಪ್ರಾರಂಭಿಸುತ್ತಾರೆ. ಇದು ಆಪ್ಟಿಕ್ ನರಗಳಿಗೆ ಹಾನಿ ಮಾಡುತ್ತದೆ ಮತ್ತು ಶಾಶ್ವತ ದೃಷ್ಟಿ ನಷ್ಟಕ್ಕೆ ಕಾರಣವಾಗಬಹುದು.

**ಮಧುಮೇಹಿಗಳು ಎಷ್ಟು ಬಾರಿ ಕಣ್ಣುಗಳನ್ನು ಪರೀಕ್ಷಿಸಿಕೊಳ್ಳಬೇಕು: ಟೈಪ್ 1 ಮಧುಮೇಹ:** ರೋಗನಿರ್ಣಯದ 5 ವರ್ಷಗಳ ಒಳಗೆ ಮತ್ತು ನಂತರ ವಾರ್ಷಿಕವಾಗಿ ಸಮಗ್ರ ಕಣ್ಣಿನ ಪರೀಕ್ಷೆ ಮಾಡಿಸಿಕೊಳ್ಳಬೇಕು .

**ಟೈಪ್ 2 ಮಧುಮೇಹ:** ಚಿಕಿತ್ಸೆಯ ಸಮಯದಲ್ಲಿ ನಿಯಮಿತ ಕಣ್ಣಿನ ತಪಾಸಣೆ ಮತ್ತು ನಂತರ ಕನಿಷ್ಠ ವರ್ಷಕ್ಕೊಮ್ಮೆ ತಪಾಸಣೆ ಮಾಡಿಸಬೇಕು .

**ಮಧುಮೇಹ ಇರುವ ಗರ್ಭಿಣಿಯರು:** ಹೆರಿಗೆಯ ಮೊದಲು, ಸಮಯದಲ್ಲಿ , ನಂತರ ಕಣ್ಣಿನ ಪರೀಕ್ಷೆಗಳನ್ನು ಮಾಡಿಕೊಳ್ಳಬೇಕು. ಏಕೆಂದರೆ ಗರ್ಭಾವಸ್ಥೆಯಲ್ಲಿ ಡಯಾಬಿಟಿಕ್ ರೆಟಿನೋಪತಿ ಇನ್ನಷ್ಟು ಹದಗೆಡಬಹುದು.ರಾಷ್ಟ್ರೀಯ ಕಣ್ಣಿನ ಸಂಸ್ಥೆ ಪ್ರಕಾರ, ಮಧುಮೇಹ ರೆಟಿನೋಪತಿ ಇರುವ ಕೆಲವು ಜನರಿಗೆ ಪ್ರತಿ 2 ರಿಂದ 4 ತಿಂಗಳಿಗೊಮ್ಮೆ ಸಮಗ್ರ ಕಣ್ಣಿನ ಪರೀಕ್ಷೆ ಮಾಡಿಸುವುದು ಮುಖ್ಯ.

**ಮಧುಮೇಹ ಕಣ್ಣಿಗೆ ಹಾನಿಯಾಗಲಾರಂಭಿಸಿದಾಗ ಕಾಣಿಸಿಕೊಳ್ಳುವ ಲಕ್ಷಣಗಳು**

- ಕಣ್ಣುಗಳಲ್ಲಿ ನೋವು ಅಥವಾ ಒತ್ತಡ
- ಮಸುಕಾದ ಅಥವಾ ಅಸ್ಥಿರ ದೃಷ್ಟಿ
- ಬೆಳಕಿಗೆ ಹೆಚ್ಚಿದ ಸಂವೇದನೆ
- ರಾತ್ರಿಯಲ್ಲಿ ನೋಡಲು ಕಷ್ಟವಾಗುವುದು
- ದೃಷ್ಟಿ ಕ್ಷೇತ್ರದಲ್ಲಿ ಕಪ್ಪು ಕಲೆಗಳು ಅಥವಾ ತೇಲುವಿಕೆಗಳು
- ಪ್ರಿಸ್ಕ್ರಿಪ್ಷನ್ ಕನ್ನಡಕ ಅಥವಾ ಕಾಂಟ್ಯಾಕ್ಟ್ ಲೆನ್ಸ್‌ಗಳಲ್ಲಿ ಆಗಾಗ್ಗೆ ಬದಲಾವಣೆಗಳು
- ಬಣ್ಣಗಳು ಮಸುಕಾಗುವುದು

# ಮರ ಕಡಿಯುವುದು ಮನುಷ್ಯರನ್ನು ಕೊಲ್ಲುವುದಕ್ಕಿಂತ ಕೆಟ್ಟದ್ದು



1 ಲಕ್ಷ ರೂ.ಗಳ ದಂಡ

**ನವದೆಹಲಿ:** ಹೆಚ್ಚಿನ ಸಂಖ್ಯೆಯ ಮರಗಳನ್ನು ಕಡಿಯುವುದು ಮನುಷ್ಯರನ್ನು ಕೊಲ್ಲುವುದಕ್ಕಿಂತ ಕೆಟ್ಟದು ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಮಾತ್ರವಲ್ಲ, ಅಕ್ರಮವಾಗಿ ಕತ್ತರಿಸಿದ ಪ್ರತಿ ಮರಕ್ಕೆ ಒಬ್ಬ ವ್ಯಕ್ತಿಗೆ 1 ಲಕ್ಷ ರೂ.ಗಳ ದಂಡ ವಿಧಿಸಿದೆ.

ಸಂರಕ್ಷಿತ ತಾಜ್ ಟ್ರೆಪೀಜಿಯಂ ವಲಯದಲ್ಲಿ 454 ಮರಗಳನ್ನು ಕಡಿದು ಹಾಕಿದ ವ್ಯಕ್ತಿಯ ಮನವಿಯನ್ನು ತಿರಸ್ಕರಿಸಿದ ನ್ಯಾಯಮೂರ್ತಿಗಳಾದ ಅಭಯ್ ಎಸ್ ಓಕಾ ಮತ್ತು ಉಜ್ಜಲ್ ಭುಯಾನ್ ಅವರ ನ್ಯಾಯಪೀಠ ಈ ಅಭಿಪ್ರಾಯ ವ್ಯಕ್ತಪಡಿಸಿದೆ.

ಪರಿಸರ ವಿಷಯದಲ್ಲಿ ಯಾವುದೇ ಕರುಣೆ ಇರಬಾರದು. ಹೆಚ್ಚಿನ ಸಂಖ್ಯೆಯ ಮರಗಳನ್ನು ಕಡಿಯುವುದು ಮನುಷ್ಯನನ್ನು ಕೊಲ್ಲುವುದಕ್ಕಿಂತ ಕೆಟ್ಟದು ಎಂದು ನ್ಯಾಯಪೀಠ ಹೇಳಿದೆ. ಅನುಮತಿಯಿಲ್ಲದೆ ಕಡಿಯಲಾದ 454 ಮರಗಳು ಸೃಷ್ಟಿಸಿದ ಹಸಿರು ಹೊದಿಕೆಯನ್ನು ಮತ್ತೆ ಪುನರುತ್ಪಾದಿಸಲು ಅಥವಾ ಮರುಸೃಷ್ಟಿಸಲು ಕನಿಷ್ಠ 100 ವರ್ಷಗಳು ಬೇಕಾಗುತ್ತದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಮಥುರಾ-ವೃಂದಾವನದ ದಾಲ್ಮಿಯಾ ಫಾರ್ಮ್‌ನಲ್ಲಿ ಶಿವಶಂಕರ್ ಅಗರ್ವಾಲ್ ಎಂಬು ವವರು 454 ಮರಗಳನ್ನು ಕಡಿದು ಹಾಕಿದ್ದಕ್ಕಾಗಿ ಪ್ರತಿ ಮರಕ್ಕೆ 1 ಲಕ್ಷ ರೂ.ಗಳ ದಂಡ ವಿಧಿಸಲು ಶಿಫಾರಸು ಮಾಡಿದ ಕೇಂದ್ರ ಉನ್ನತಾಧಿಕಾರ ಸಮಿತಿಯ (ಸಿಇಸಿ) ವರದಿಯನ್ನು ಸುಪ್ರೀಂ ಕೋರ್ಟ್ ಒಪ್ಪಿಕೊಂಡಿದೆ.

ಅಗರ್ವಾಲ್ ಪರವಾಗಿ ಹಾಜರಾದ ಹಿರಿಯ ವಕೀಲ ಮುಕುಲ್ ರೋಹಟಗಿ ಅವರು ತಪ್ಪನ್ನು ಒಪ್ಪಿಕೊಂಡಿದ್ದಾರೆ ಆದರೆ ದಂಡದ ಮೊತ್ತವನ್ನು ಕಡಿಮೆ ಮಾಡಲು ನ್ಯಾಯಾಲಯ ನಿರಾಕರಿಸಿದೆ ಎಂದು ಹೇಳಿದರು.

# ಉನ್ನತ ಹುದ್ದೆಗೆ ಭಾರತೀಯ ಜೈ ಭಟ್ಟಚಾರ್ಯ ನೇಮಕ

**ವಾಷಿಂಗ್ಟನ್:** ಅಮೆರಿಕದ ಉನ್ನತ ಆರೋಗ್ಯ ಸಂಶೋಧನೆ, ಧನಸಹಾಯ ಸಂಸ್ಥೆಗಳಾದ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಹೆಲ್ತ್‌ನ ನಿರ್ದೇಶಕರಾಗಿ ಭಾರತೀಯ-ಅಮೆರಿಕನ್ ವಿಜ್ಞಾನಿ ಜೈ ಭಟ್ಟಾಚಾರ್ಯ ಅವರ ನೇಮಕವನ್ನು ಯುಎಸ್ ಸೆನೆಟ್ ದೃಢಪಡಿಸಿದೆ. ಸ್ಟ್ಯಾನ್‌ಫೋರ್ಡ್ ವಿಶ್ವವಿದ್ಯಾನಿಲಯದ ಆರೋಗ್ಯ ನೀತಿಯ ಪ್ರಾಧ್ಯಾಪಕ ಭಟ್ಟಾಚಾರ್ಯ ಅವರು 53-47 ಮತಗಳಿಂದ ದೃಢಪಟ್ಟಿದ್ದಾರೆ ಎಂದು ಯುಎಸ್ ಸೆನೆಟ್‌ನ ಅಧಿಕೃತ ವೆಬ್‌ಸೈಟ್ ತಿಳಿಸಿದೆ.

ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಕಳೆದ ವರ್ಷ ನವೆಂಬರ್‌ನಲ್ಲಿ ಭಟ್ಟಾಚಾರ್ಯರನ್ನು 18 ನೇ ಎನ್‌ಐಎಚ್ ನಿರ್ದೇಶಕರಾಗಿ ನಾಮನಿರ್ದೇಶನ ಮಾಡಿದ್ದರು. ಡಾ. ಭಟ್ಟಾಚಾರ್ಯ ಅವರು ರಾಬರ್ಟ್ ಎಫ್ ಕೆನಡಿ ಜೂನಿಯರ್ ಅವರ ಜೊತೆಗೆ ರಾಷ್ಟ್ರದ ವೈದ್ಯಕೀಯ ಸಂಶೋಧನೆಯನ್ನು ನಿರ್ದೇಶಿಸಲು, ಆರೋಗ್ಯವನ್ನು ಸುಧಾರಿಸುವ, ಜೀವಗಳನ್ನು ಉಳಿಸುವ ಪ್ರಮುಖ ಆವಿಷ್ಕಾರಗಳನ್ನು ಮಾಡಲು ಕೆಲಸ ಮಾಡು ತ್ತಾರೆ ಎಂದು ಟ್ರಂಪ್ ಹೇಳಿದ್ದರು.



ದೃಢೀಕರಿಸಿದರೆ ಅಮೆರಿಕ ಆರೋಗ್ಯವನ್ನು ಮತ್ತಷ್ಟು ಸುಧಾರಿಸುವ ಅಧ್ಯಕ್ಷ ಟ್ರಂಪ್, (ಆರೋಗ್ಯ, ಮಾನವ ಸೇವೆ) ಕಾರ್ಯದರ್ಶಿ ಕೆನಡಿಯವರ ಅಜೆಂಡಾವನ್ನು ಕೈಗೆತ್ತಿಕೊಳ್ಳುತ್ತೇನೆ. ವಿಜ್ಞಾನ, ನಾವೀನ್ಯತೆಯೊಂದಿಗೆ ದೇಶದ ತೀವ್ರ ದೀರ್ಘಕಾಲದ ಆರೋಗ್ಯ ಅಗತ್ಯಗಳನ್ನು ಪರಿಹರಿಸಲು NIHಗೆ ಬದ್ಧವಾಗಿರುವುದಾಗಿ ಜೈ ಭಟ್ಟಾಚಾರ್ಯ ಹೇಳಿದ್ದಾರೆ. ಭಟ್ಟಾಚಾರ್ಯ ಅವರ ನೇಮಕಕ್ಕೆ ಹೆಮ್ಮೆಯಿಂದ ಸ್ಟ್ಯಾನ್‌ಫೋರ್ಡ್ ಮೆಡಿಸಿನ್ ಅಭಿನಂದಿಸಿದೆ, ಸಾರ್ವಜನಿಕ ಸೇವೆಗೆ ಅವರ ಬದ್ಧತೆಯನ್ನು ಶ್ಲಾಘನೀಯ ಎಂದು ಕರೆದಿದೆ. ಒಂದು ಸಂಸ್ಥೆಯಾಗಿ ನಾವು NIH ಮಿಷನ್‌ನ ದೃಢವಾದ ಬೆಂಬಲಿಗರಾಗಿದ್ದೇವೆ. ಇದು ವೈದ್ಯಕೀಯ ಜ್ಞಾನದ ಗಡಿಗಳನ್ನು ಮುಂದು ವರಿಸಲು, ಆರೋಗ್ಯ ಸುಧಾರಣೆಗೆ ಹೊಸ ಆವಿಷ್ಕಾರಗಳನ್ನು ಮುಂದುವರೆಸಿದೆ ಎಂದು ಅದು ಹೇಳಿಕೆಯಲ್ಲಿ ತಿಳಿಸಿದೆ.



# ಛತ್ತೀಸ್‌ಗಢ ಮಾಜಿ ಸಿಎಂ ಬಘೇಲ್ ನಿವಾಸದ ಮೇಲೆ ಸಿಬಿಐ ರೇಡ್




**ರಾಯ್‌ಪುರ:** ಛತ್ತೀಸ್‌ಗಢದ ಮಾಜಿ ಸಿಎಂ ಭೂಪೇಶ್ ಬಘೇಲ್ ಅವರ ನಿವಾಸದ ಮೇಲೆ ಸಿಬಿಐ ದಾಳಿ ನಡೆಸಿದೆ. ಕಾಂಗ್ರೆಸ್ ಸಭೆಯಲ್ಲಿ ಪಾಲ್ಗೊಳ್ಳಲು ನವದೆಹಲಿಗೆ ತೆರಳುವ ಮುನ್ನ ಸಿಬಿಐ ಬಘುಲ್ ನಿವಾಸದಲ್ಲಿ ಶೋಧ ನಡೆಸಿದೆ ಎಂದು ವರದಿಯಾಗಿದೆ. ಕೇಂದ್ರ ತನಿಖಾ ದಳದ (ಸಿಬಿಐ) ತಂಡಗಳು ಇಂದು ರಾಯ್ಪುರ ಮತ್ತು ಭಿಲಾಯ್‌ನಲ್ಲಿರುವ ಬಘೇಲ್ ಅವರ ನಿವಾಸಗಳು, ಹಿರಿಯ ಪೊಲೀಸ್ ಅಧಿಕಾರಿ ಮತ್ತು ಮಾಜಿ ಸಿಎಂ



ಅವರ ಆಪ್ತರ ನಿವಾಸಗಳ ಮೇಲೆ ದಾಳಿ ನಡೆಸಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಶೋಧಗಳು ನಡೆಯುತ್ತಿರುವ ವಿಷಯದ ಬಗ್ಗೆ ಏಜೆನ್ಸಿ ಬಿಗಿಯಾಗಿ ಮೌನವಹಿಸಿದೆ. ಆದಾಗ್ಯೂ, ಇದು ಮಹಾದೇವ್ ಆನ್ ಲೈನ್ ಬೆಟ್ಟಿಂಗ್ ಅಪ್ಲಿಕೇಶನ್ ಹಗರಣದೊಂದಿಗೆ ಸಂಬಂಧ ಹೊಂದಿದೆ ಎಂದು ಮೂಲಗಳು ತಿಳಿಸಿವೆ. ಈ ಕ್ರಮದ ಬಗ್ಗೆ ಪ್ರತಿಕ್ರಿಯಿಸಿದ ಬಘೇಲ್ ಅವರ ಕಚೇರಿ, ಈಗ ಸಿಬಿಐ ಬಂದಿದೆ. ಮಾಜಿ ಮುಖ್ಯಮಂತ್ರಿ ಭೂಪೇಶ್ ಬಘೇಲ್ ಅವರು ಏಪ್ರಿಲ್ 8, 9 ರಂದು ಅಹಮದಾಬಾದ್ (ಗುಜರಾತ್)ನಲ್ಲಿ ನಡೆಯಲಿರುವ ಎಐಸಿಸಿ ಸಭೆಗಾಗಿ ರಚಿಸಲಾದ ಕರಡು ಸಮಿತಿ ಸಭೆಯಲ್ಲಿ ಭಾಗವಹಿಸಲು ಬುಧವಾರ ದೆಹಲಿಗೆ ತೆರಳಲಿದ್ದಾರೆ. ಅದಕ್ಕೂ ಮೊದಲು ಸಿಬಿಐ ರಾಯ್ಪುರ ಮತ್ತು ಭಿಲಾಯ್ ನಿವಾಸಗಳನ್ನು ತಲುಪಿದೆ ಎಂದು ಅದು ಹೇಳಿದೆ.

### ಹಮಾಸ್ ಅಧಿಕಾರದಿಂದ ಕೆಳಗಿಳಿಯಬೇಕು ಎಂದು ಒತ್ತಾಯಿಸಿ ಪ್ರತಿಭಟನೆ

# ಗಾಜಾದಲ್ಲಿ ಭುಗಿಲೆದ್ದ ಪ್ರತಿಭಟನೆ ಕಂಡು ಬೆಚ್ಚಬಿದ್ದ ಹಮಾಸ್



ಒಂದು ಸುತ್ತು ಹಾಕಿತು ಕಾಲಚಕ್ರ

**ಗಾಜಾ:** ಕಾಲಚಕ್ರ ಒಂದು ಸುತ್ತು ಹಾಕಿತೆಂದರೆ ಪರಿಸ್ಥಿತಿಗಳು ತಾನಾಗಿಯೇ ಅದಲುಬದಲಾಗುತ್ತಾ ಹೋಗುತ್ತದೆ. ಇದಕ್ಕೆ ತಾಜಾ ಉದಾಹರಣೆ ಪ್ಯಾಲೆಸ್ಟೈನಿಯನ್ನರ ಏಕಮಾತ್ರ ರಕ್ಷಕ ಎಂದು ಬಿಂಬಿಸಿಕೊಳ್ಳುತ್ತಿದ್ದ ಹಮಾಸ್, ಇದೀಗ ಪ್ಯಾಲೆಸ್ಟೈನಿಯನ್ನರಿಂದಲೇ ಭಾರೀ ವಿರೋಧವನ್ನು ಎದುರಿಸುತ್ತಿದೆ. ಹೌದು, ಇಸ್ರೇಲ್ ಜೊತೆಗಿನ ಸುದೀರ್ಘ ಯುದ್ಧದಿಂದ ಬಸವಳಿದಿರುವ, ಘನಘೋರ ಕದನದಲ್ಲಿ ತಮ್ಮ ಪ್ರೀತಿ ಪಾತ್ರರನ್ನು ಕಳೆದು ಕೊಂಡು ಕಣ್ಣೀರಿಡುತ್ತಿರುವ ಪ್ಯಾಲೆಸ್ಟೈನಿಯನ್ನರು, ಇದೀಗ ಇಸ್ರೇಲ್ ಹೊತೆ ಸಂಘರ್ಷಕ್ಕಿಳಿದಿರುವ ಹಮಾಸ್ ವಿರುದ್ಧ ತಿರುಗಿ ಬಿದ್ದಿದ್ದಾರೆ. ಗಾಜಾದಲ್ಲಿ ಸಾವಿರಾರು ಪ್ಯಾಲೆಸ್ಟೈನಿಯನ್ನರು ಹಮಾಸ್ ವಿರುದ್ಧ ಬೀದಿಗಿಳಿದು ಪ್ರತಿಭಟನೆ ನಡೆಸಿದ್ದಾರೆ. ಇದು ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದ್ದು, ಇಸ್ರೇಲ್ ಜೊತೆಗಿನ ಸಂಘರ್ಷ ತನ್ನನ್ನು ಹೀರೋ ಮಾಡಲಿದೆ ಎಂಬ ಹಮಾಸ್‌ನ ಲೆಕ್ಕಾಚಾರಗಳು ತಲೆಕೆಳಗಾಗಿವೆ.

- ಜಗತ್ತಿನ ಗಮನ ಸೆಳೆದ ಗಾಜಾದಲ್ಲಿ ನಡೆದ ಹಮಾಸ್ ವಿರೋಧಿ ಪ್ರತಿಭಟನೆ
- ಇಸ್ರೇಲ್ ಜೊತೆಗಿನ ಸಂಘರ್ಷ ಕೊನೆಗಾಣಿಸಲು ಪ್ರತಿಭಟನಾಕಾರರ ಒತ್ತಾಯ

ಹಮಾಸ್ ವಿರೋಧಿ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಪ್ಯಾಲೆಸ್ಟೈನಿಯನ್ ಪ್ರತಿಭಟನಾಕಾರರು, ಇಸ್ರೇಲ್ ಜೊತೆಗಿನ ಸಂಘರ್ಷವನ್ನು ಕೊನೆಗಾಣಿಸಬೇಕು, ಹಮಾಸ್ ಅಧಿಕಾರದಿಂದ ಕೆಳಗಿಳಿಯಬೇಕು ಎಂದು ಒತ್ತಾಯ ಮಾಡಿದ್ದಾರೆ. ಈ ವಿರೋಧ ಪ್ಯಾಲೆಸ್ಟೈನ್‌ನನ್ನು ತನಗೆ ಬರೆದುಕೊಟ್ಟವರಂತೆ ವರ್ತಿಸುತ್ತಿದ್ದ ಹಮಾಸ್‌ನ ಮೇಲೆ ಬರಸಿಡಿಲಿನಂತೆ ಬಂದೆರಗಿದೆ. ಗಾಜಾ ಪಟ್ಟಿಯ ಉತ್ತರ ಭಾಗದಲ್ಲಿರುವ ಬೀಟ್ ಲಾಹಿಯಾದಲ್ಲಿ ಹಮಾಸ್ ವಿರೋಧಿ ಪ್ರದರ್ಶನಗಳು ನಡೆದಿದ್ದು, ಇಸ್ರೇಲ್ ಜೊತೆಗೆ ಹಿಂಸಾತ್ಮಕ ಸಂಘರ್ಷದಲ್ಲಿ ನಿರತವಾಗಿ ಸಾವಿರಾರು ಪ್ಯಾಲೆಸ್ಟೈನಿಯನ್ನರ ಸಾವು-ನೋವುಗಳಿಗೆ ಕಾರಣವಾಗುತ್ತಿರುವ ಹಮಾಸ್, ಅಧಿಕಾರದಿಂದ ಕೆಳಗಿಳಿಯಬೇಕು.. ಎಂಬ ಒಕ್ಕೊರಲಿನ ಒತ್ತಾಯ ಕೇಳಿಬಂದಿತು.

ಅದೇ ರೀತಿ ಗಾಜಾ ನಗರದ ಪಶ್ಚಿಮ ಭಾಗದಲ್ಲಿರುವ ಜಬಾಲಿಯಾ ನಿರಾಶ್ರಿತರ ಶಿಬಿರಗಳಲ್ಲೂ ಹಮಾಸ್ ವಿರೋಧಿ ಪ್ರದರ್ಶನಗಳನ್ನು ಹಮ್ಮಿಕೊಳ್ಳ ಲಾಗಿದೆ. ಡಜನ್ ಗಟ್ಟಲೆ ಪ್ರತಿಭಟನಾಕಾರರು ಟೈರ್‌ಗಳನ್ನು ಸುಟ್ಟು, ಯುದ್ಧವನ್ನು ಕೊನೆಗೊಳಿಸುವಂತೆ ಕೋರಿ ಪ್ರತಿಭಟನೆ ನಡೆಸಿದ್ದಾರೆ.

ಯುದ್ಧವನ್ನು ನಿಲ್ಲಿಸಿ ನಾವು ಶಾಂತಿಯಿಂದ ಬದುಕಲು ಬಯಸುತ್ತೇವೆ ಎಂಬ ಭಿತ್ತಿಪತ್ರಗಳನ್ನು ಪ್ರದರ್ಶಿಸಿರುವ ಹಮಾಸ್ ವಿರೋಧಿ ಪ್ರತಿಭಟನಾಕಾರರು, ಔಟ್, ಔಟ್, ಔಟ್, ಹಮಾಸ್ ಔಟ್, ಹಮಾಸ್ ಭಯೋತ್ಪಾದಕರು ಎಂದು ಘೋಷಣೆಗಳನ್ನು ಕೂಗಿದ್ದು, ಕಾಲಚಕ್ರದ ಮುಂದೆ ಎಲ್ಲರೂ ನಶ್ವರ ಎಂಬುದನ್ನು ಸಾಬೀತುಪಡಿಸಿತು.

ಆದರೆ ಪ್ಯಾಲೆಸ್ಟೈನ್ ಮೇಲಿನ ತನ್ನ ಹಿಡಿತವನ್ನು ಬಿಡಲೊಪ್ಪದ ಹಮಾಸ್, ಈ ಪ್ರತಿಭಟನೆಗಳನ್ನು ಅತ್ಯಂತ ಕ್ರೂರವಾಗಿ ಹತ್ತಿಕ್ಕಿದೆ. ಪ್ರತಿಭಟನಾಕಾರರ ಮೇಲೆ ಲಾಠಿ ಪ್ರಹಾರ, ಗುಂಡಿನ ದಾಳಿಗಳನ್ನು ನಡೆಸಿ, ಪ್ರತಿಭಟನೆಯನ್ನು ಹತ್ತಿಕ್ಕುವ ಕಾರ್ಯಕ್ಕೆ ಹಮಾಸ್ ಮುಂದಾಗಿದೆ. ಅದೇ ರೀತಿ ಹಮಾಸ್ ಪರ ಬೆಂಬಲಿಗರು ಚಳುವಳಿಯ ಮಹತ್ವವನ್ನು ಕಡಿಮೆ ಮಾಡುವ ಮೂಲಕ, ಪ್ರತಿಭಟನಾಕಾರರನ್ನು ದೇಶದ್ರೋಹಿಗಳೆಂದು ಆರೋಪಿಸುವ ಮೂಲಕ, ಹಮಾಸ್‌ನ್ನು ಸಮರ್ಥಿಸಿಕೊಂಡಿದ್ದಾರೆ.

**ಹಮಾಸ್ ಇತಿಹಾಸ:** ಹಮಾಸ್ 2007ರಿಂದ ಗಾಜಾವನ್ನು ಆಳುತ್ತಿದೆ. ಒಂದು ವರ್ಷದ ಹಿಂದೆ ಪ್ಯಾಲೆಸ್ಟೈನ್‌ನಲ್ಲಿ ನಡೆದ ಚುನಾವಣೆಯಲ್ಲಿ ಹಮಾಸ್ ಅಧಿಕಾರಕ್ಕೇರಿತು.

ಆದರೆ ಅಧಿಕಾರಕ್ಕೇರುತ್ತಿದ್ದಂತೇ ಪ್ರತಿಸ್ಪರ್ಧಿಗಳನ್ನು ಹಿಂಸಾತ್ಮಕವಾಗಿ ಹೊಸಕಿಹಾಕಿದ ಹಮಾಸ್, ಇಡೀ ಪ್ಯಾಲೆಸ್ಟೈನ್ ಮೇಲೆ ನಿಯಂತ್ರಣ ಸಾಧಿಸಿತು. ಆದರೀಗ ಪ್ಯಾಲೆಸ್ಟೈನ್ ಜನ ಹಮಾಸ್ ವಿರುದ್ಧ ತಿರುಗಿ ಬಿದ್ದಿದ್ದು, ಇಸ್ರೇಲ್ ಜೊತೆಗಿನ ಅನವಶ್ಯಕ ಸಂಘರ್ಷವನ್ನು ಕೊನೆಗೊಳಿಸುವಂತೆ ಒತ್ತಾಯಿಸುತ್ತಿದ್ದಾರೆ. ಗಾಜಾದಲ್ಲಿರುವ ಶೇ. 35ರಷ್ಟು ಪ್ಯಾಲೆಸ್ಟೀನಿಯನ್ನರು ಹಮಾಸ್ ಅನ್ನು ಬೆಂಬಲಿಸುವುದಾಗಿ ಹೇಳಿದ್ದಾರೆ. ಶೇ. 26ರಷ್ಟು ಜನರು ಅದರ ಪ್ರತಿಸ್ಪರ್ಧಿ, ರಮಲ್ಲಾ ಮೂಲದ ಪ್ಯಾಲೆಸ್ಟೀನಿಯನ್ ಪ್ರಾಧಿಕಾರದ ಅಧ್ಯಕ್ಷ ಮಹ್ಮದ್ ಅಬ್ಬಾಸ್ ಅವರ ಪಕ್ಷವಾದ ಫತಾಹ್ ಅನ್ನು ಬೆಂಬಲಿಸುವುದಾಗಿ ಹೇಳಿದ್ದಾರೆ ಎಂದು ಮೂಲಗಳು ತಿಳಿಸಿವೆ. ಗಾಜಾದಲ್ಲಿರುವ ಹಮಾಸ್ ಪ್ರತಿಸ್ಪರ್ಧಿ ಫತಾಹ್‌ನ ವಕ್ತಾರ ಮಾಂಥರ್ ಅಲ್-ಹಯೆಕ್ ಅವರು, ಗಾಜಾ ಪಟ್ಟಿಯಲ್ಲಿ ಪ್ಯಾಲೆಸ್ಟೈನಿಯನ್ನರ ಅಸ್ತಿತ್ವವನ್ನು ಕಾಪಾಡಲು ಆಡಳಿತದಿಂದ ಹಿಂದೆ ಸರಿಯುವಂತೆ ಹಮಾಸ್‌ಗೆ ಕರೆ ನೀಡಿದ್ದಾರೆ.

**ಗಾಜಾ ಯುದ್ಧ**

**ಇಸ್ರೇಲ್, ಹಮಾಸ್ ನಡುವಿನ 17 ತಿಂಗಳಿಗೂ ಹೆಚ್ಚು ಕಾಲದ ಯುದ್ಧದಿಂದ ಗಾಜಾ ಪಟ್ಟಿ ಸಂಪೂರ್ಣವಾಗಿ ಧ್ವಂಸಗೊಂಡಿದೆ, ಹಮಾಸ್ ವಶದಲ್ಲಿರುವ ಇಸ್ರೇಲಿ ಒತ್ತೆಯಾಳುಗಳ ಬಿಡುಗಡೆಗೆ ಒತ್ತಾಯಿಸುತ್ತಿರುವ ಇಸ್ರೇಲ್, ಇದಕ್ಕಾಗಿ ಕದನ ವಿರಾಮವನ್ನು ಮುರಿದು ಗಾಜಾ ಮೇಲೆ ನಿರಂತರವಾಗಿ ದಾಳಿ ನಡೆಸುತ್ತಿದೆ. ಹಮಾಸ್ ಆಡಳಿತವೇ ನೀಡಿರುವ ಮಾಹಿತಿ ಪ್ರಕಾರ ಇಸ್ರೇಲ್ ದಾಳಿಗಳಲ್ಲಿ ಇದುವರೆಗೂ ಕನಿಷ್ಠ 792 ಪ್ಯಾಲೆಸ್ಟೀನಿಯನ್ನರು ಸಾವನ್ನಪ್ಪಿದ್ದಾರೆ. 2023ರಲ್ಲಿ ಆರಂಭವಾದ ನೇರ ಸಂಘರ್ಷದಲ್ಲಿ ಇಸ್ರೇಲ್‌ನ ಪ್ರತೀಕಾರದ ಮಿಲಿಟರಿ ದಾಳಿಯು, ಗಾಜಾದಲ್ಲಿ ಕನಿಷ್ಠ 50,021 ಜನರ ಸಾವಿಗೆ ಕಾರಣವಾಗಿದೆ ಎಂಬ ಅಂಕಿ-ಅಂಶಗಳು ಜಗತ್ತನ್ನು ಬೆಚ್ಚಿ ಬೀಳಿಸಿದೆ.**

# ಮಿನಿ ನ್ಯೂಸ್

## ಪತ್ನಿಯೊಂದಿಗೆ ಅಕ್ರಮ ಸಂಬಂಧ ಜೀವಂತ ಸಮಾಧಿ ಮಾಡಿದ ಪತಿ

**ಹರಿಯಾಣ:** ಪತ್ನಿಯೊಂದಿಗೆ ಅಕ್ರಮ ಸಂಬಂಧ ಹೊಂದಿದ್ದ ಬಾಡಿಗೆದಾರನನ್ನು ವ್ಯಕ್ತಿಯೊಬ್ಬ 7 ಅಡಿ ಆಳದ ಗುಂಡಿಯಲ್ಲಿ ಜೀವಂತ ಸಮಾಧಿ ಮಾಡಿರುವ ಘಟನೆ ಹರಿಯಾಣದ ರೋಹ್ಟಕ್ನಲ್ಲಿ ನಡೆದಿದೆ. ಮಹಿಳೆ ಮೋಹದಿಂದ ಜೀವಂತ ಸಮಾಧಿಯಾದ ವ್ಯಕ್ತಿಯನ್ನು ಯೋಗ ಶಿಕ್ಷಕ ಜಗದೀಪ್ ಎಂದು ಗುರುತಿಸಲಾಗಿದೆ. ತನ್ನ ಪತ್ನಿಯೊಂದಿಗೆ ಅಕ್ರಮ ಸಂಬಂಧ ಹೊಂದಿದ್ದ ಜಗದೀಪ್ ನನ್ನು ಸ್ನೇಹಿತರ ಸಹಾಯದಿಂದ ಅಪಹರಿಸಿದ್ದ ಹರ್ ದೀಪ್ ಎಂಬಾತ ತನ್ನ ಹೊಲದಲ್ಲಿ 7 ಅಡಿ ಆಳದ ಗುಂಡಿ ತೋಡಿ ಜೀವಂತವಾಗಿ ಹೂತು ಹಾಕಿದ್ದ. ಕಳೆದ ವರ್ಷ ಡಿಸೆಂಬರ್‌ನಲ್ಲಿ ಯೋಗ ಶಿಕ್ಷಕರನ್ನು ಕೊಲೆ ಮಾಡಲಾಗಿತ್ತು. ಆದರೆ ಸುದೀರ್ಘ ತನಿಖೆ ನಂತರ ಪೊಲೀಸರು ಈಗ ಆರೋಪಿಯನ್ನು ಬಂಧಿಸಿದ್ದಾರೆ. ಯೋಗ ಶಿಕ್ಷಕರ ಮೃತದೇಹವನ್ನು ಹೊಲದಿಂದ ವಶಪಡಿಸಿಕೊಳ್ಳಲಾಗಿದೆ. ರೋಹಕ್ ಬಾಬಾ ಮಸ್ನಾಥ್ ವಿಶ್ವವಿದ್ಯಾಲಯದಲ್ಲಿ ಯೋಗ ಶಿಕ್ಷಕರಾಗಿದ್ದವರು ಬಾಡಿಗೆ ಮನೆಯೊಂದರಲ್ಲಿ ವಾಸಿಸುತ್ತಿದ್ದರು. ಅಲ್ಲಿ ಬಾಡಿಗೆ ಮನೆಯ ಓನರ್ ಜತೆ ಅಕ್ರಮ ಸಂಬಂಧ ಹೊಂದಿದ್ದರು.

ಕಳೆದ ಡಿಸೆಂಬರ್ 24 ರಂದು, ಹರ್ದೀಪ್, ಅವನ ಕೆಲವು ಸ್ನೇಹಿತರು ಜಗದೀಪ್ ನನ್ನು ಅವಹರಿಸಿ, ಕೈಕಾಲುಗಳನ್ನು ಕಟ್ಟಿ, ಚಾರ್ಕಿ ದಾದ್ರಿಯಲ್ಲಿರುವ ಗುಂಡಿ ಬಳಿ ಕರೆದೊಯ್ದು ಥಳಿಸಿದ್ದಾರೆ. ಜಮೀನಿನ ಬಳಿ ಹೋಗಿ ಜೀವಂತವಾಗಿ ಸುಟ್ಟು ಬಳಿಕ ಹೂತುಹಾಕಿ ಗುಂಡಿಯನ್ನು ಮಣ್ಣಿನಿಂದ ಮುಚ್ಚಿದ್ದಾರೆ. ಕೊಲೆಯಾದ 10 ದಿನಗಳ ನಂತರ ಶಿವಾಜಿ ಕಾಲೋನಿ ಪೊಲೀಸ್ ಠಾಣೆಯಲ್ಲಿ ಜಗದೀಪ್ ನಾಪತ್ತೆ ದೂರು ದಾಖಲಾಗಿತ್ತು. ಸ್ವಲ್ಪ ಸಮಯದ ಹಿಂದೆ ಜಗದೀಪ್ ಅವರ ಕರೆ ದಾಖಲೆಗಳನ್ನು ಪರಿಶೀಲಿಸುವವರೆಗೂ ಪೊಲೀಸರಿಗೆ ಯಾವುದೇ ಸುಳಿವು ಸಿಗಲಿಲ್ಲ. ಇದಾದ ನಂತರ, ಹರ್ದೀಪ್ ಮತ್ತು ಅವನ ಸ್ನೇಹಿತ ಧರ್ಮಪಾಲ್‌ರನ್ನು ಬಂಧಿಸಲು ಸಾಕಷ್ಟು ಪುರಾವೆಗಳು ದೊರೆತವು. ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ ಕಸ್ಟಡಿಗೆ ಪಡೆದ ನಂತರ, ಪೊಲೀಸ್ ಅಧಿಕಾರಿಗಳು ಇಬ್ಬರನ್ನೂ ವಿಚಾರಣೆಗೆ ಒಳಪಡಿಸಿದರು.

ವಿಚಾರಣೆಯ ಸಮಯದಲ್ಲಿ, ಇಬ್ಬರೂ ಕೊಲೆಯ ಬಗ್ಗೆ ಸಂಪೂರ್ಣ ವಿವರಗಳನ್ನು ನೀಡಿದ್ದಾರೆ.

## ತೆಲಂಗಾಣದಲ್ಲಿ ವಿಶ್ವಸುಂದರಿ ಸ್ಪರ್ಧೆ

**ಹೈದರಾಬಾದ್:** ಬರುವ ಮೇ ತಿಂಗಳಲ್ಲಿ ತೆಲಂಗಾಣದಲ್ಲಿ ವಿಶ್ವಸುಂದರಿ ಸ್ಪರ್ಧೆ ನಡೆಯಲಿದೆ. ವಿಶ್ವಸುಂದರಿ ಸ್ಪರ್ಧೆ ಆಯೋಜನೆಯಿಂದ ರಾಜ್ಯವನ್ನು ಜಾಗತಿಕವಾಗಿ ಪ್ರವಾಸೋದ್ಯಮ ತಾಣವಾಗಿ ಉತ್ತೇಜಿಸಲಿದೆ, ಆರ್ಥಿಕ ಚಟುವಟಿಕೆಗಳಿಗೆ ಅನುಕೂಲವಾಗಲಿದೆ ಎಂದು ತೆಲಂಗಾಣ ಪ್ರವಾಸೋದ್ಯಮ ಸಚಿವ ಜುಪಲ್ಲಿ ಕೃಷ್ಣ ರಾವ್ ಹೇಳಿದ್ದಾರೆ.

ರಾಜ್ಯ ವಿಧಾನಸಭೆಯಲ್ಲಿ ಪ್ರಸಕ್ತ ಸಾಲಿನ ಅನುದಾನದ ಬೇಡಿಕೆಗಳ ಮತದಾನದ ಮೇಲಿನ ಒಂದು ದಿನದ ಚರ್ಚೆಗೆ ಉತ್ತರಿಸಿದ ಸಚಿವರು. ಪ್ರವಾಸೋದ್ಯಮ ಉತ್ತೇಜನಕ್ಕಾಗಿ ಯುಕೆಗೆ ಭೇಟಿ ನೀಡಿದಾಗ, ತೆಲಂಗಾಣ ಎಲ್ಲಿದೆ ಎಂದು ಕೇಳಲಾಯಿತು ಎಂದು ಹೇಳಿದರು. ವಿಶ್ವದ ಅನೇಕ ದೇಶಗಳಿಗೆ ತೆಲಂಗಾಣದ ಬಗ್ಗೆ ತಿಳಿದಿಲ್ಲ.

ತೆಲಂಗಾಣದ ಸಂಸ್ಕೃತಿಯನ್ನು ಜಗತ್ತಿಗೆ ಪ್ರದರ್ಶಿಸಲು ಪ್ರಪಂಚದಾದ್ಯಂತದ ಪ್ರವಾಸಿಗರನ್ನು ಆಕರ್ಷಿಸಲು ಮಿಸ್ ವರ್ಲ್ಡ್ ಸ್ಪರ್ಧೆಯ ಲಾಭವನ್ನು ಪಡೆಯುವುದು ಯೋಜನೆಯ ಉದ್ದೇಶವಾಗಿದೆ ಎಂದು ರಾವ್ ಹೇಳಿದರು. ಈ ಕಾರ್ಯಕ್ರಮದಲ್ಲಿ 120-140 ದೇಶಗಳ ಪ್ರತಿನಿಧಿಗಳು, ಸುಮಾರು 3.500 ಪತ್ರಕರ್ತರು ಭಾಗವಹಿಸಲಿದ್ದಾರೆ ಎಂದು ಅವರು ಹೇಳಿದರು. ಮುಂಬೈನ ಜಿಯೋ ವರ್ಲ್ಡ್ ಸೆಂಟರ್ ಮಾದರಿಯಲ್ಲಿ ಹೈದರಾಬಾದ್‌ನಲ್ಲಿ 20,000 ಜನರ ಸಾಮರ್ಥ್ಯದ ಅಂತರರಾಷ್ಟ್ರೀಯ ಸಮಾವೇಶ ಕೇಂದ್ರವನ್ನು ಸ್ಥಾಪಿಸಲು ರಾಜ್ಯ ಸರ್ಕಾರ ಯೋಜಿಸಿದೆ, ಹೈದರಾಬಾದ್ ಕಾರ್ನಿವಲ್ ಅನ್ನು ಆಯೋಜಿಸಲು ಯೋಜಿಸಿದೆ ಎಂದು ಅವರು ಮಾಹಿತಿ ನೀಡಿದರು.

# ಎ.1 ರಿಂದ ಟೋಲ್ ಶುಲ್ಕ ಹೆಚ್ಚಳ, ಶೇ.3 ರಿಂದ 5 ರಷ್ಟು ಏರಿಕೆ

**ನವದೆಹಲಿ:** ಏಪ್ರಿಲ್ 1 ರಿಂದ ಅನ್ವಯವಾಗುವಂತೆ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಟೋಲ್ ಶುಲ್ಕವನ್ನು ಶೇ.3 ರಿಂದ 5 ರಷ್ಟು ಹೆಚ್ಚಿಸಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಮುಂದಾಗಿದೆ. ಈಗಾಗಲೇ ಹಲವು ಬೆಲೆ ಏರಿಕೆಯಿಂದ ಜನಸಾಮಾನ್ಯರು ತತ್ತರಿಸಿ ಹೋಗಿದ್ದು, ಟೋಲ್ ಶುಲ್ಕ ಪರಿಷ್ಕರಣೆ ವಾಹನ ಸವಾರರಿಗೆ ಬೆವರಿಳಿಸುವ ಸಾಧ್ಯತೆಯಿದೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ರಾಜ್ಯ ಯೋಜನಾ ನಿರ್ದೇಶಕ ಕೆ.ಬಿ.ಜಯರಾಂ ಟೋಲ್ ಶುಲ್ಕ ಹೆಚ್ಚಳದ ಮುನ್ಸೂಚನೆ ನೀಡಿದ್ದಾರೆ. ರಾಜ್ಯದಲ್ಲಿರುವ ಮೈಸೂರು-ಬೆಂಗಳೂರು ರಸ್ತೆ, ಬೆಂಗಳೂರು-ತಿರುಪತಿ ರಸ್ತೆ, ಬೆಂಗಳೂರು-ಹೈದರಾಬಾದ್ ರಸ್ತೆ, ಬೆಂಗಳೂರು ವಿಮಾನನಿಲ್ದಾಣ ರಸ್ತೆ, ದಾಬಸ್‌ಪೇಟ್-ದೇವನಹಳ್ಳಿ ನಡುವಿನ ಉಪನಗರ ವರ್ತುಲ ರಸ್ತೆ ಸೇರಿದಂತೆ 66 ಟೋಲ್‌ಗಳಲ್ಲಿ ಶುಲ್ಕ ಪರಿಷ್ಕರಣೆ ಅನ್ವಯವಾಗಲಿದೆ ಎಂದು ತಿಳಿಸಿದ್ದಾರೆ.

**ಗಡ್ಕರಿ ಸ್ಪಷ್ಟನೆ :** ಟೋಲ್ ಶುಲ್ಕ ಸಂಗ್ರಹದ ಬಗ್ಗೆ ರಾಜ್ಯಸಭೆಯಲ್ಲಿ ಉತ್ತರ ನೀಡಿರುವ ಕೇಂದ್ರ ಹೆದ್ದಾರಿ ಮತ್ತು ಭೂ ಸಾರಿಗೆ ಸಚಿವ ನಿತಿನ್ ಗಡ್ಕರಿ, ದೇಶದ ಒಟ್ಟು ಟೋಲ್ ಶುಲ್ಕ ಸಂಗ್ರಹ 64,809 ಕೋಟಿ ರೂ.ಗಳಿಗೆ ಹೆಚ್ಚಾಗಿದೆ ಎಂದು ತಿಳಿಸಿದ್ದಾರೆ.

ರಾಜ್ಯಸಭೆಯಲ್ಲಿ ಈ ಬಗ್ಗೆ ಹೇಳಿಕೆ ನೀಡಿರುವ ಅವರು, 2019-20 ರಲ್ಲಿ 27,503 ಕೋಟಿಗಳಷ್ಟಿದ್ದ ಶುಲ್ಕದ ಸಂಗ್ರಹ 2023-24ರ ವೇಳೆಗೆ ಶೇ.35ರಷ್ಟು ಏರಿಕೆಯಾಗಿದೆ ಎಂದು ಹೇಳಿದ್ದಾರೆ. ಉಪಗ್ರಹ ಆಧರಿತ ಟೋಲ್ ಶುಲ್ಕ ಸಂಗ್ರಹ ವ್ಯವಸ್ಥೆಯನ್ನು ಭದ್ರತೆ ಹಾಗೂ ಗೌಪ್ಯತೆಯ ಕಾರಣಗಳಿಗಾಗಿ ಮತ್ತಷ್ಟು ಚರ್ಚೆಗೆ ಒಳಪಡಿಸಲಾಗುತ್ತಿದೆ. ಪ್ರಾಯೋಗಿಕವಾಗಿ ಕೆಲವು ಕಡೆ ಜಾರಿಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.




ಉಪಗ್ರಹ ಆಧರಿತ ಟೋಲ್ ಶುಲ್ಕ ಸಂಗ್ರಹ ವ್ಯವಸ್ಥೆ ಮಹತ್ವಾಕಾಂಕ್ಷೆಯ ಯೋಜನೆಯಾಗಿದೆ. ಇಂಡಿಯನ್ ರೀಜಿನಲ್ ನ್ಯಾವಿಗೇಷನ್ ಸೆಟಲೈಟ್ ಸಿಸ್ಟಂ (ಐಆರ್‌ಎನ್‌ಎಸ್‌ಎಸ್) ಎಂದು ಕರೆಯಲಾಗುವ ನಾವ್ ಐಸಿ ವ್ಯವಸ್ಥೆ ಜಾರಿಗೆ ಅಮೆರಿಕದ ಗ್ಲೋಬಲ್ ಪೊಸಿಷನಿಂಗ್ ಸಿಸ್ಟಂ ಪ್ರಸ್ತಾವನೆ ನೀಡಿದ್ದು, ಟೋಲ್‌ಗಳನ್ನು ತೆರವು ಮಾಡಿ ಉಪಗ್ರಹ ಆಧಾರಿತ ಶುಲ್ಕ ಸಂಗ್ರಹಣೆಯ ಈ ವ್ಯವಸ್ಥೆಯನ್ನು ಭದ್ರತೆ ಹಾಗೂ ಗೌಪ್ಯತೆಯ ಕಾರಣಕ್ಕಾಗಿ ಮರುಪರಿಶೀಲಿಸುವ ಅಗತ್ಯವಿದೆ ಎಂದು ತಜ್ಞರ ಉನ್ನತಾಧಿಕಾರ ಸಮಿತಿ ಸಲಹೆ ನೀಡಿದೆ. ಈಗಾಗಲೇ ಸರಣಿ ಸಭೆಗಳನ್ನು ನಡೆಸಿ ಚರ್ಚೆಗಳನ್ನು ಮುಂದುವರೆಸಲಾಗಿದೆ. ಕಾರಿಡಾರ್ ಅಥವಾ ಒಂದು ಯೋಜನೆಯ ವ್ಯಾಪ್ತಿಯಲ್ಲಿ ಎಎನ್‌ಪಿಆರ್ ಫಾಸ್ಟ್ ಟ್ಯಾಗ್ ವ್ಯವಸ್ಥೆಯನ್ನು ರೂಪಿಸಿ ತಡೆರಹಿತ ಪ್ರಯಾಣಕ್ಕೆ, ಕಡಿಮೆ ಬಳಕೆದಾರರ ಶುಲ್ಕಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

> **ಈಗಿರುವ ವ್ಯವಸ್ಥೆಯಲ್ಲಿ ನಾವ್ ಐಸಿ ಜಾರಿಗೊಳಿಸಲು ಹೆಚ್ಚುವರಿ ಉಪಗ್ರಹಗಳನ್ನು ಸ್ಥಾಪಿಸಬೇಕಿದೆ ಮತ್ತು ಸ್ವೀಕಾರಾರ್ಹ ವ್ಯವಸ್ಥೆಯನ್ನು ರೂಪಿಸಿ ಕರಾರುವಾಕ್ಕಾದ ಸ್ಥಳ ಗುರುತಿಸುವಿಕೆಗೂ ಕ್ರಮ ಕೈಗೊಳ್ಳಬೇಕಿದೆ ಎಂದಿದ್ದಾರೆ. ಉತ್ತರ ಪ್ರದೇಶದ ದ್ವಾರಕಾ ಎಕ್ಸ್‌ಪ್ರೆಸ್‌ಗೆ ಗೋರಂಡ,ಚೊರ್ಸಾಯಿ, ನೆಮಿಲಿ, ಅರ್ಬನ್ ಎಕ್ಸ್‌ಟೆನ್ಷನ್ ರೋಡ್ ಪ್ರಾಯೋಗಿಕವಾಗಿ ಟೋಲ್ ರಹಿತವಾದ ಶುಲ್ಕ ಸಂಗ್ರಹಣೆಗೆ ಆಸಕ್ತರಿಂದ ಪ್ರಸ್ತಾವನೆಗಳನ್ನು ಸ್ವೀಕರಿಸಲಾಗಿದೆ. ಈ ಪ್ರಾಯೋಗಿಕ ಯೋಜನೆಯ ಪರಿಣಾಮಗಳು ಹಾಗೂ ಸಾಮರ್ಥ್ಯವನ್ನು ಆಧರಿಸಿ ಇತರ ಕಡೆಗಳಲ್ಲಿ ಅನುಷ್ಠಾನಕ್ಕೆ ತರಲು ಚರ್ಚಿಸುವುದಾಗಿ ತಿಳಿಸಿದ್ದಾರೆ.**

# ಮರಾಠಿ ಮಾತನಾಡದ ಹಿಂದಿವಾಲಾನಿಗೆ ಎಂಎನ್‌ಎಸ್ ಪುಂಡರಿಂದ ಕಪಾಳಮೋಕ್ಷ

**ಮುಂಬೈ:** ಮರಾಠಿ ಮಾತನಾಡದ ಹಿಂದಿವಾಲಾನಿಗೆ ಎಂಎನ್‌ಎಸ್ ಕಾರ್ಯಕರ್ತರು ಕಪಾಳ ಮೋಕ್ಷ ಮಾಡಿರುವ ಘಟನೆ ಮುಂಬೈನಲ್ಲಿ ನಡೆದಿದೆ. ಮರಾಠಿಯಲ್ಲಿ ಮಾತನಾಡಲಿಲ್ಲ ಎಂಬ ಕಾರಣಕ್ಕೆ ರಾಜ್ ಠಾಕ್ರೆ ನೇತೃತ್ವದ ಮಹಾರಾಷ್ಟ್ರ ನವನಿರ್ಮಾಣ ಸೇನೆ, ಕಾರ್ಯ ಕರ್ತರು ಮುಂಬೈನ ಡಿ ಮಾರ್ಟ್ ಸೂಪರ್ ಮಾರ್ಕೆಟ್ ಅಂಗಡಿಯ ಉದ್ಯೋಗಿಯೊಬ್ಬರಿಗೆ ಕಪಾಳಮೋಕ್ಷ ಮಾಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಅಂಧೇರಿಯ (ಪಶ್ಚಿಮ) ವರ್ಸೋವಾದಲ್ಲಿರುವ ಡಿ-ಮಾರ್ಟ್ ಅಂಗಡಿಯಲ್ಲಿ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿರುವ ವೀಡಿಯೊದಲ್ಲಿ, ಅಂಗಡಿಯ ಉದ್ಯೋಗಿ ಗ್ರಾಹಕರೊಬ್ಬರಿಗೆ ನಾನು ಮರಾಠಿಯಲ್ಲಿ ಮಾತನಾ ಡುವುದಿಲ್ಲ, ನಾನು ಹಿಂದಿಯಲ್ಲಿ ಮಾತ್ರ ಮಾತನಾಡುತ್ತೇನೆ. ನೀವು ಏನು ಮಾಡಲು ಬಯಸುತ್ತೀರೋ ಅದನ್ನು ಮಾಡಿ ಎಂದಿದ್ದ. ಉದ್ಯೋಗಿಯ ಹೇಳಿಕೆಯ ಬಗ್ಗೆ ಎಂಎನ್‌ಎಸ್ ಕಾರ್ಯಕರ್ತರಿಗೆ ತಿಳಿದ ನಂತರ, ಪಕ್ಷದ ವರ್ಸೋವಾ ಘಟಕದ ಅಧ್ಯಕ್ಷ ಸಂದೇಶ್ ದೇಸಾಯಿ ನೇತೃತ್ವದ ಕಾರ್ಯಕರ್ತರ ಗುಂಪು ಅಂಗಡಿಗೆ ಹೋಗಿ ಸಿಬ್ಬಂದಿಗೆ ಕಪಾಳಮೋಕ್ಷ ಮಾಡಿದೆ ಎಂದು ಆರೋಪಿಸಲಾಗಿದೆ. ಕಪಾಳಮೋಕ್ಷ ಮಾಡಿದ ಘಟನೆಯ ವಿಡಿಯೋ ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್‌ಗಳಲ್ಲಿ ಕಾಣಿಸಿಕೊಂಡಿದೆ. ನಂತರ ಅಂಗಡಿಯ ಸಿಬ್ಬಂದಿ ತನ್ನ ವರ್ತನೆಗೆ ಕ್ಷಮೆಯಾಚಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ರಾಮನವಮಿ ಮೆರವಣಿಗೆ ಮೇಲೆ ಕಲ್ಲು ತೂರಾಟ, ಹಜಾರಿಬಾಗ್ ಉದ್ವಿಗ್ನ

**ಹಜಾರಿಬಾಗ್:** ಜಾರ್ಖಂಡ್ ನ ಹಜಾರಿಬಾಗ್ ಜಿಲ್ಲೆಯಲ್ಲಿ ಧಾರ್ಮಿಕ ಮೆರವಣಿಗೆ ವೇಳೆ ಕಲ್ಲು ತೂರಾಟ ನಡೆದಿದ್ದು, ಈ ಪ್ರದೇಶದಲ್ಲಿ ಉದ್ವಿಗ್ನತೆ ಉಂಟಾಗಿದೆ. ರಾಮನವಮಿ ಆಚರಣೆಯ ಅಂಗವಾಗಿ ಮಂಗಳಾ ಮೆರವಣಿಗೆ ನಡೆಯುತ್ತಿದ್ದಾಗ ರಾತ್ರಿ 11 ಗಂಟೆ ಸುಮಾರಿಗೆ ಜಾಮಾ ಮಸೀದಿ ಚೌಕ್ ಬಳಿ ಈ ಘಟನೆ ನಡೆದಿದೆ ಎಂದು ಹಜಾರಿಬಾಗ್ ಉಪ ವಿಭಾಗದ ಪೊಲೀಸ್ ಅಧಿಕಾರಿ ಪರಮೇಶ್ವರ ಕಾಯ್ತಿ ತಿಳಿಸಿದ್ದಾರೆ. ಎರಡೂ ಕಡೆಯಿಂದ ಕಲ್ಲು ತೂರಾಟ ನಡೆಸಲಾಗಿದೆ ಎಂದರು.

ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲು ಪೊಲೀಸರು ಗಾಳಿಯಲ್ಲಿ ಗುಂಡು ಹಾರಿಸಿದರು ಎಂದು ಮತ್ತೊಬ್ಬ ಅಧಿಕಾರಿ ತಿಳಿಸಿದ್ದಾರೆ. ಆದಾಗ್ಯೂ, ಪರಿಸ್ಥಿತಿ ನಿಯಂತ್ರಣದಲ್ಲಿದೆ, ಘಟನಾ ಸ್ಥಳದಲ್ಲಿ ಭದ್ರತಾ ನಿಯೋಜನೆಯನ್ನು ಖಚಿತಪಡಿಸಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ. ಕಲ್ಲು ತೂರಾಟಕ್ಕೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ಘಟನೆಯಲ್ಲಿ ಭಾಗಿಯಾಗಿರುವ ಜನರನ್ನು ಗುರುತಿಸಲಾಗುತ್ತಿದೆ, ಅವರನ್ನು ಶೀಘ್ರದಲ್ಲೇ ಬಂಧಿಸಲಾಗುವುದು ಎಂದು ಅವರು ಹೇಳಿದರು. ಸ್ಥಳೀಯರ ಪ್ರಕಾರ, ಕೋಮು ಗೀತೆಗಳನ್ನು ನುಡಿಸುವ ಬಗ್ಗೆ ಎರಡು ಗುಂಪುಗಳ ನಡುವೆ ವಿವಾದ ಉಂಟಾಯಿತು, ನಂತರ ಪರಿಸ್ಥಿತಿ ಕಲ್ಲು ತೂರಾಟಕ್ಕೆ ತಿರುಗಿತು. ಎರಡೂ ಕಡೆಯಿಂದ ಕಲ್ಲುಗಳನ್ನು ಎಸೆಯಲಾಯಿತು ಎಂದು ತಿಳಿದುಬಂದಿದೆ.

## ಭೀಕರ ಅಪಘಾತದಲ್ಲಿ ತಾಯಿ, ಮಗಳು ಸೇರಿ ನಾಲ್ವರ ದುರ್ಮರಣ

**ಶಿಮ್ಲಾ:** ಭೀಕರ ಅಪಘಾತದಲ್ಲಿ ನಾಲ್ವರು ಸಾವನ್ನಪ್ಪಿರುವ ಘಟನೆ ಶಿಮ್ಲಾದಲ್ಲಿ ನಡೆದಿದೆ. ಶಿಮ್ಲಾದ ಉಪನಗರದಲ್ಲಿರುವ ಆನಂದಪುರ-ಮೆಹ್ಲಿ ರಸ್ತೆಯಲ್ಲಿ ವಾಹನವೊಂದು ಕಮರಿಗೆ ಬಿದ್ದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ. ಘಟನೆಯಲ್ಲಿ ಮಹಿಳೆ, ಆಕೆಯ ಮಗಳು ಸೇರಿದಂತೆ ನಾಲ್ವರು ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಲಾಲ್ಪಾನಿ ಸೇತುವೆ ಬಳಿ ತಡರಾತ್ರಿ ಈ ಘಟನೆ ನಡೆದಿದೆ. ನಾಲ್ವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಅವರ ಶವಗಳನ್ನು ಪೊಲೀಸರು ಮತ್ತು ರಾಜ್ಯ ವಿಪತ್ತು ಪ್ರತಿಕ್ರಿಯೆ ಪಡೆ ಹೊರತೆಗೆದು ಮರಣೋತ್ತರ ಪರೀಕ್ಷೆಗೆ ಕಳುಹಿಸಿದೆ. ಮೃತರನ್ನು ಜೈ ಸಿಂಗ್ ನೇಗಿ (40), ಮುಕುಲ್ (10), ರೂಪಾ (45), ಅವರ 14 ವರ್ಷದ ಮಗಳು ಪ್ರಗತಿ ಎಂದು ಗುರುತಿಸಲಾಗಿದೆ. ಇವರೆಲ್ಲರೂ ಶಿಮ್ಲಾ ನಿವಾಸಿಗಳಾಗಿದ್ದರು.

# ಫ್ರಾನ್ಸ್ ಏರ್ ಶೋ ವೇಳೆ ಭೀಕರ ಅಪಘಾತ ವಿಮಾನಗಳ ಢಿಕ್ಕಿ, ಪೈಲಟ್‌ಗಳು ಪ್ರಜ್ಞಾಹೀನ



**ಪ್ಯಾರಿಸ್:** ಫ್ರಾನ್ಸ್‌ನಲ್ಲಿ ನಡೆಯುತ್ತಿದ್ದ ಏರ್ ಶೋ ವೇಳೆ ಭೀಕರ ವಿಮಾನ ಅಪಘಾತ ಸಂಭವಿಸಿದ್ದು, ಎರಡು ವಿಮಾನಗಳು ಢಿಕ್ಕಿಯಾಗಿ ಮೂರು ಮಂದಿ ಗಾಯಗೊಂಡಿರುವ ಘಟನೆ ನಡೆದಿದೆ. ಈಶಾನ್ಯ ಫ್ರಾನ್ಸ್‌ನ ವಾಯುನೆಲೆಯ ಬಳಿ ಫ್ರೆಂಚ್ ವಾಯುಪಡೆಯ ಚಮತ್ಕಾರಿಕ ತಂಡದ ಎರಡು ವಿಮಾನಗಳು ಢಿಕ್ಕಿ ಹೊಡೆದುಕೊಂಡಿವೆ. ಈ ಅಪಘಾತದಲ್ಲಿ ಮೂವರು ಪೈಲಟ್ ಗಳು ಗಾಯಗೊಂಡಿದ್ದು, ಪ್ರಜ್ಞಾಹೀನ ಸ್ಥಿತಿಯಲ್ಲಿ ಕೆಳಗೆ ಬಿದ್ದಿದ್ದಾರೆ. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಈಶಾನ್ಯ ಫ್ರಾನ್ಸ್‌ನ ಸೇಂಟ್-ಡಿಜಿಯರ್‌ನ ಪಶ್ಚಿಮದಲ್ಲಿರುವ ವಾಯುನೆಲೆಯ ಬಳಿ ನಡೆಯುತ್ತಿರುವ ಏರ್ ಶೋ ವೇಳೆ ಆಲ್ಫಾ ಜೆಟ್ ವಿಮಾನಗಳು ಡಿಕ್ಕಿ ಹೊಡೆದವು. ಒಂದು ವಿಮಾನವು ಸಿಲೋಗೆ ಡಿಕ್ಕಿ ಹೊಡೆದು ಬೆಂಕಿ ಕಾಣಿಸಿಕೊಂಡಿತು ಎಂದು ಫ್ರೆಂಚ್ ವಾಯು ಮತ್ತು ಬಾಹ್ಯಾಕಾಶ ಪಡೆ ಸುದ್ದಿ ಸಂಸ್ಥೆ ತಿಳಿಸಿದೆ.

ಈ ವಿಮಾನಗಳು ಫ್ರೆಂಚ್ ವಾಯು, ಬಾಹ್ಯಾಕಾಶ ಪಡೆಗಳ ನಿಖರ ಏರೋಬ್ಯಾಟಿಕ್ಸ್ ಪ್ರದರ್ಶನ ಘಟಕವಾದ ಪ್ಯಾಟ್ರೌಯಿಲ್ ಡಿ ಫ್ರಾನ್ಸ್‌ನಿಂದ ಬಂದವಾಗಿವೆ. ಇಬ್ಬರು ಪೈಲಟ್‌ಗಳು ಮತ್ತು ಒಬ್ಬ ಪ್ರಯಾಣಿಕ ವಿಮಾನದಿಂದ ಹೊರಗೆ ಹಾರಿದ್ದಾರೆಯಾದರೂ, ಅವರು ಗಾಯಗೊಂಡು ಪ್ರಜ್ಞಾಹೀನ ಪರಿಸ್ಥಿತಿಯಲ್ಲಿ ಸಿಕ್ಕಿದ್ದಾರೆ. ದುರ್ಘಟನೆಯಲ್ಲಿ ಯಾವುದೇ ನಾಗರಿಕ ಸಾವುನೋವುಗಳು ಸಂಭವಿಸಿಲ್ಲ ಎಂದು ವರದಿಯಲ್ಲಿ ತಿಳಿಸಲಾಗಿದೆ. ಕಳೆದ ವರ್ಷ ಆಗಸ್ಟ್‌ನಲ್ಲಿ, ಪೂರ್ವ ಫ್ರಾನ್ಸ್‌ನಲ್ಲಿ ಎರಡು ಫ್ರೆಂಚ್ ರಫೇಲ್ ಜೆಟ್‌ಗಳು ಆಗಸದಲ್ಲೇ ಡಿಕ್ಕಿ ಹೊಡೆದು ಇಬ್ಬರು ಪೈಲಟ್‌ಗಳ ಸಾವಿಗೆ ಕಾರಣವಾಗಿತ್ತು.

# ಹಿಂದೂಗಳು ಸುರಕ್ಷಿತವಾಗಿದ್ದರೆ ಮಾತ್ರ ಮುಸ್ಲಿಮರು ಸುರಕ್ಷಿತ: ಯೋಗಿ

### 100 ಹಿಂದೂ ಕುಟುಂಬಗಳ ನಡುವೆ ಒಂದು ಮುಸ್ಲಿಂ ಕುಟುಂಬ ಭದ್ರವಾಗಿದೆ

**ಲಖ್ನೋ:** ಉತ್ತರ ಪ್ರದೇಶದಲ್ಲಿ ಹಿಂದೂಗಳು ಸುರಕ್ಷಿತವಾಗಿದ್ದರೆ ಮುಸ್ಲಿಮರೂ ಸುರಕ್ಷಿತವಾಗಿರುತ್ತಾರೆ ಎಂದು ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಹೇಳಿದ್ದಾರೆ. ಸಂದರ್ಶನವೊಂದರಲ್ಲಿ ಮಾತನಾಡಿದ ಅವರು, ಉತ್ತರಪ್ರದೇಶದಲ್ಲಿ ಎಲ್ಲಾ ಧರ್ಮದ ಜನರು ಸುರಕ್ಷಿತವಾಗಿದ್ದಾರೆ. ಹಿಂದೂಗಳು ಸುರಕ್ಷಿತವಾಗಿದ್ದರೆ ಮುಸ್ಲಿಮರೂ ಸೇಫಾಗಿರುತ್ತಾರೆ. 100 ಹಿಂದೂ ಕುಟುಂಬಗಳ ನಡುವೆ ಒಂದು ಮುಸ್ಲಿಂ ಕುಟುಂಬ ಭದ್ರವಾಗಿದೆ ಎಂದು ತಿಳಿಸಿದರು. ಉತ್ತರಪ್ರದೇಶದಲ್ಲಿ ಎಲ್ಲಾ ಧರ್ಮದ ಜನ ಸುರಕ್ಷಿತವಾಗಿದ್ದಾರೆ. ಅವರಿಗೆ ಎಲ್ಲಾ ಧಾರ್ಮಿಕ ಪದ್ಧತಿಗಳನ್ನು ಆಚರಿಸುವ ಸ್ವಾತಂತ್ರ್ಯವಿದೆ. 100 ಹಿಂದೂ ಕುಟುಂಬಗಳ ನಡುವೆ ಒಂದು ಮುಸ್ಲಿಂ ಕುಟುಂಬ ಸುರಕ್ಷಿತವಾಗೇ ಇರುತ್ತದೆ. ಆದರೆ 100 ಮುಸ್ಲಿಂ ಕುಟುಂಬಗಳ ನಡುವೆ 50 ಹಿಂದೂ ಕುಟುಂಬಗಳಿದ್ದರೂ ಸುರಕ್ಷಿತವಾಗಿರಲು ಸಾಧ್ಯವಿಲ್ಲ ಎಂದರು. ಹಿಂದೂ ಆಡಳಿತಗಾರರು ಇತರರ ಮೇಲೆ ಆಧಿಪತ್ಯ ಸ್ಥಾಪಿಸಿದ ಉದಾಹರಣೆ ವಿಶ್ವ ಇತಿಹಾಸದಲ್ಲಿ ಇಲ್ಲ. ಇದಕ್ಕೆ ಬಾಂಗ್ಲಾ ದೇಶದಲ್ಲಿ ನಡೆಯುತ್ತಿರುವ ಹಿಂಸಾಚಾರವೇ ಕಾರಣ, ಇದಕ್ಕೂ ಮುನ್ನ ಪಾಕಿಸ್ತಾನದಲ್ಲೂ ಈ ಉದಾಹರಣೆ ಇತ್ತು. ಅಫ್ಘಾನಿಸ್ತಾನದಲ್ಲೂ ಏನಾಯ್ತು ಅನ್ನೋದು ನಮಗೆ ಗೊತ್ತಿದೆ ಎಂದು ಹೇಳಿದರು.

2017ರಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ನಂತರ ರಾಜ್ಯದಲ್ಲಿ ಒಂದೇ ಒಂದು ಕೋಮುಗಲಭೆ ನಡೆದಿಲ್ಲ ಎಂದ ಅವರು, ಉತ್ತರ ಪ್ರದೇಶದಲ್ಲಿ ಹಿಂದೂಗಳು ಸುರಕ್ಷಿತವಾಗಿದ್ದರೆ ಮುಸ್ಲಿಮರೂ ಸುರಕ್ಷಿತ. ನಾನು ಒಬ್ಬ ಸಾಮಾನ್ಯ ಪ್ರಜೆ, ಉತ್ತರ ಪ್ರದೇಶದ ಪ್ರಜೆ. ಎಲ್ಲಾರ ಸಂತೋಷಕ್ಕಾಗಿ ಹಾರೈಸುವ ಯೋಗಿ ನಾನು. ಎಲ್ಲಾರ ಬೆಂಬಲದಿಂದ ಅಭಿವೃದ್ಧಿ ಸಾಧ್ಯ ಅಂತ ನಂಬುವವನು ನಾನು.

**ರಾಹುಲ್ ಗಾಂಧಿ ವಿರುದ್ಧ ವಾಗ್ದಾಳಿ**

**ಸಂದರ್ಶನದ ವೇಳೆ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ವಿರುದ್ಧ ವಾಗ್ದಾಳಿ ನಡೆಸಿದ ಯೋಗಿ, ಒಂದು ಭಾರತ ಶ್ರೇಷ್ಠ ಭಾರತ ಆಗಬೇಕಲ್ಲವೇ ಅವರು ದಶಕಗಳಿಂದ ಏನು ಮಾಡುತ್ತಿದ್ದರು ಅವರು ಯಾಕೆ ರಾಮ ಮಂದಿರ ನಿರ್ಮಾಣ ಮಾಡಲಿಲ್ಲ ರಾಹುಲ್ ಗಾಂಧಿ ತನ್ನ ಅಜ್ಜ, ಅಜ್ಜಿ, ತಂದೆಯನ್ನು ಕೇಳಬೇಕಿತ್ತು ಆ ಸಮಯದಲ್ಲಿ ಅವರು ಅದನ್ನು ಏಕೆ ಮಾಡಲಿಲ್ಲ ಎಂದು ಪ್ರಶ್ನಿಸಿದರು.ಅವರು ಯಾವಾಗಲೂ ಅಯೋಧ್ಯೆ ವಿವಾದವನ್ನು ವಿವಾದವಾಗಿಯೇ ಉಳಿಯಲು ಬಯಸುತ್ತಿದ್ದರು. ತಮ ಜೀವನದುದ್ದಕ್ಕೂ ಕಾಶಿಯ ಕಿರಿದಾದ ಬೀದಿಗಳಲ್ಲಿ ಗಾಂಧೀಜಿಯವರ ಹೆಸರಿನಲ್ಲಿ ರಾಜಕೀಯ ಮಾಡುತ್ತಿದ್ದಾರೆ. ಆದರೆ 1916ರಲ್ಲಿ ಗಾಂಧೀಜಿ ಕಾಶಿಯ ಕಿರಿದಾದ ಬೀದಿಗಳ ಬಗ್ಗೆ ಕಠಿಣವಾದ ಟೀಕೆಯನ್ನು ಮಾಡಿದ್ದರು ಎಂಬುದನ್ನು ತಿಳಿಯಬೇಕು ಎಂದು ನುಡಿದರು. ಕಾಂಗ್ರೆಸ್ ನಾಯಕರ ಭಾರತ್ ಜೋಡೋ ರಾಷ್ಟ್ರವ್ಯಾಪಿ ಅಭಿಯಾನ ವಾಸ್ತವವಾಗಿ ಭಾರತ್ ತೋಡೋ ಅಭಿಯಾನ. ದೇಶದ ಹೊರಗೆ ಹೋಗಿ ಭಾರತವನ್ನು ಟೀಕಿಸುತ್ತಾರೆ ಎಂದು ಅವರು ಕಿಡಿಕಾರಿದರು.**

> **ಸನಾತನ ಧರ್ಮದ ಅನುಯಾಯಿಗಳು ಎಂದಿಗೂ ಇತರರನ್ನು ನಂಬಿಸಿ ಮತಾಂತರ ಮಾಡಿಲ್ಲ. ಆದರೆ ಪ್ರತಿಯಾಗಿ ಅವರು ಏನು ಪಡೆದರು ಪ್ರತಿಯಾಗಿ ಅವರು ಏನು ಗಳಿಸಿದರು? ಹಿಂದೂ ಆಡಳಿತಗಾರರು ತಮ ಸ್ವಂತ ಶಕ್ತಿಯನ್ನು ಬಳಸಿಕೊಂಡು ಇತರರ ಮೇಲೆ ಪ್ರಭುತ್ವ ಸ್ಥಾಪಿಸಿದ ಉದಾಹರಣೆ ಜಗತ್ತಿನಲ್ಲಿ ಎಲ್ಲಿಯೂ ಇಲ್ಲ. ಅಂತಹ ನಿದರ್ಶನಗಳು ಅಸ್ತಿತ್ವದಲ್ಲಿಲ್ಲ**
>
> **-ಯೋಗಿ ಆದಿತ್ಯನಾಥ್, ಮುಖ್ಯಮಂತ್ರಿ**




ಸನಾತನ ಧರ್ಮವು ವಿಶ್ವದ ಅತ್ಯಂತ ಪುರಾತನ ಧರ್ಮವಾಗಿದೆ ಎಂದು ಒತ್ತಿ ಹೇಳಿದರು. ಉತ್ತರ ಪ್ರದೇಶದಲ್ಲಿ ಮುಸ್ಲಿಮರು ಅತ್ಯಂತ ಸುರಕ್ಷಿತರು. ಹಿಂದೂಗಳು ಸುರಕ್ಷಿತವಾಗಿದ್ದರೆ, ಅವರು ಸಹ ಸುರಕ್ಷಿತವಾಗಿರುತ್ತಾರೆ. 2017 ಕ್ಕಿಂತ ಮೊದಲು ಯುಪಿಯಲ್ಲಿ ಗಲಭೆಗಳಾಗಿದ್ದರೆ, ಹಿಂದೂ ಅಂಗಡಿಗಳು ಉರಿಯುತ್ತಿದ್ದರೆ, ಮುಸ್ಲಿಂ ಅಂಗಡಿಗಳು ಸಹ ಉರಿಯುತ್ತಿದ್ದವು. ಹಿಂದೂ ಮನೆಗಳು ಉರಿಯುತ್ತಿದ್ದರೆ, ಮುಸ್ಲಿಂ ಮನೆಗಳು ಸಹ ಉರಿಯುತ್ತಿದ್ದವು. 2017ರ ನಂತರ ಗಲಭೆಗಳು ನಿಂತುಹೋದವು. ರಾಜ್ಯದ ಅಭಿವೃದ್ಧಿಯಲ್ಲಿ ನನಗೆ ನಂಬಿಕೆ ಇದೆ ಎಂದು ಅವರು ಹೇಳಿದರು. ಸನಾತನ ಧರ್ಮದ ಕುರಿತು ಮಾತನಾಡಿದ ಯೋಗಿ ಆದಿತ್ಯ ನಾಥ್, ಮುಖ್ಯಮಂತ್ರಿ, ಸನಾತನ ಧರ್ಮವು ವಿಶ್ವದ ಅತ್ಯಂತ ಪ್ರಾಚೀನ ಧರ್ಮ ಮತ್ತು ಸಂಸ್ಕೃತಿ ಎಂದು ಬಣ್ಣಿಸಿದರು.

ಇತ್ತೀಚೆಗೆ ನಡೆದ ಸಂಭಾಲ್ ಕುರಿತು ಪ್ರತಿಕ್ರಿಯಿಸಿದ ಸಿಎಂ , ಸಂಭಾಲ್‌ನಲ್ಲಿ ಏನು ನಡೆದಿದೆ ಎನ್ನುವುದು ಎಲ್ಲರಿಗೂ ತಿಳಿದಿರುವುದು. ಶಾಹಿ ಜಾಮಾ ಮಸೀದಿಯನ್ನು ಪ್ರಾಚೀನ ದೇವಾಲಯದ ಅವಶೇಷಗಳ ಮೇಲೆ ನಿರ್ಮಿಸಲಾಗಿದೆ. ಹಿಂದೂ ದೇವಾಲಯಗಳನ್ನು ನಾಶಮಾಡಿದ ನಂತರ ನಿರ್ಮಿಸಲಾದ ಪೂಜಾ ಸ್ಥಳಗಳನ್ನು ದೇವರು ಸ್ವೀಕರಿಸುವುದಿಲ್ಲ ಎಂದು ಇಸ್ಲಾಂ ಹೇಳುತ್ತದೆ. ಹಾಗಾದರೆ ಅವುಗಳನ್ನು ಏಕೆ ನಿರ್ಮಿಸಲಾಯಿತು ನ್ಯಾಯಾಲಯದ ತೀರ್ಪು ಬಂದ ನಂತರ ಅಲ್ಲಿ ದೇವಾಲಯ ನಿರ್ಮಾಣ ಕಾರ್ಯ ಪ್ರಾರಂಭಿಸಲಾಗುತ್ತದೆ ಎಂದು ಅವರು ಹೇಳಿದ್ದಾರೆ.

ಉದಯ ವಾಹಿನಿ
www.udayavahini.in
epaper.udayavahini.in
Udaya vahini news
Udaya vahini news
Udayavahini news youtube
udayavahininews@gmail.com





# ಸ್ಟಾರ್ ಹೀರೋ ಸಿನಿಮಾದಿಂದ ಔಟ್ ಆಗಿದ್ದೇಕೆ

ನಿತಿನ್ ಅವರ ಮುಂಬರುವ ಚಿತ್ರವೇ ರಾಬಿನ್ ಹುಡ್. ಈ ಚಿತ್ರವನ್ನು ವೆಂಕಿ ಕುಡುಮುಲ ನಿರ್ದೇಶಿಸಿದ್ದು, ಮೈತ್ರಿ ಮೂವಿ ಮೇಕರ್ಸ್ ಬ್ಯಾನರ್ ಅಡಿಯಲ್ಲಿ ನವೀನ್ ಯೆರ್ನೇನಿ ಮತ್ತು ವೈ ರವಿಶಂಕರ್ ನಿರ್ಮಿಸಿದ್ದಾರೆ. ನಿತಿನ್ ಗೆ ಜೋಡಿಯಾಗಿ ಶ್ರೀಲೀಲಾ ನಾಯಕಿಯಾಗಿ ನಟಿಸುತ್ತಿದ್ದಾರೆ. ಈ ಚಿತ್ರದ ಚಿತ್ರೀಕರಣ ಈಗಾಗಲೇ ಪೂರ್ಣಗೊಂಡಿದ್ದು, ಪ್ರಚಾರ ಕಾರ್ಯ ನಡೆಯುತ್ತಿದೆ. ಈ ಚಿತ್ರವನ್ನು ಮಾರ್ಚ್ 28 ರಂದು ಅದ್ದೂರಿಯಾಗಿ ಬಿಡುಗಡೆ ಮಾಡಲಾಗುತ್ತದೆ.

ಈ ಸಂದರ್ಭದಲ್ಲಿ, ಶ್ರೀಲೀಲಾ ಇತ್ತೀಚಿನ ಸಂದರ್ಶನದಲ್ಲಿ ಕೆಲವು ಆಸಕ್ತಿದಾಯಕ ವಿಷಯಗಳನ್ನು ಹಂಚಿಕೊಂಡರು. ಆರಂಭದಲ್ಲಿ ತಯಾರಕರು ಈ ಚಿತ್ರದ ನಾಯಕಿಯಾಗಿ ರಶ್ಮಿಕಾ ಮಂದಣ್ಣ ಅವರನ್ನು ಪರಿಗಣಿಸಿದ್ದರು. ಆದರೆ ಶ್ರೀಲೀಲಾ ಕೊನೆಗೆ ಹೇಗೆ ಆಯ್ಕೆ ಆದರು ಎಂಬುದನ್ನ ರಿವೀಲ್ ಮಾಡಿದ್ದಾರೆ. ಈ ಬಗ್ಗೆ ಶ್ರೀಲೀಲಾ ಮಾತನಾಡಿ, ನಾನು ಸತತ ಸಿನಿಮಾಗಳಲ್ಲಿ ನಟಿಸಿದ ನಂತರ, ಸ್ವಲ್ಪ ಸಮಯ ಶಿಕ್ಷಣಕ್ಕಾಗಿ ರಜೆ ಪಡೆಯಲು ಯೋಜಿಸಿದ್ದೆ. ಆಗ ನಿರ್ದೇಶಕ ವೆಂಕಿ ಕುಡುಮುಲ ಕರೆ ಮಾಡಿ ಈ ಚಿತ್ರದ ಕಥೆ ಹೇಳಿದರು. ರಶ್ಮಿಕಾ ಅವರಿಗೆ ಈ ಪಾತ್ರ ತುಂಬಾ ಇಷ್ಟವಾಯಿತು, ಆದರೆ ಡೇಟ್ಸ್ ಸಿಕ್ಕದ ಕಾರಣ ಅವರು ಅದನ್ನು ಮಾಡಲಿಲ್ಲ. ಶೂಟಿಂಗ್ ಸಮಯದಲ್ಲಿ ಅವರನ್ನು ನಾನು ಭೇಟಿಯಾದಾಗ, ಅವರು ಆಲ್ ದಿ ಬೆಸ್ಟ್ ಹೇಳಿದರು. ನನಗೆ ಈ ಪಾತ್ರ ತುಂಬಾ ಇಷ್ಟವಾಯಿತು ಎಂದು ಶ್ರೀಲೀಲಾ ಹೇಳಿದರು.

**ನನಗೆ ಈ ಪಾತ್ರ ತುಂಬಾ ಇಷ್ಟ**

ರಾಬಿನ್ ಹುಡ್ ಚಿತ್ರದ ಗೆಲ್ಲು ಧಾರಾವಾಹಿಗೆ ಕೇತಿಕಾ ಶರ್ಮಾ ಅವರನ್ನು ಆಯ್ಕೆ ಮಾಡಲಾಗಿದೆ. ಅವರು ಅವಳೊಂದಿಗೆ ಒಂದು ವಿಶೇಷ ಹಾಡು ಮಾಡಿದ್ದಾರೆ. ಈ ಹಾಡಿನ ಲಿರಿಕಲ್ ವಿಡಿಯೋ ಇತ್ತೀಚೆಗೆ ಬಿಡುಗಡೆಯಾಗಿದೆ. ಈ ಹಾಡು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

# ಸೀಸ್ ಕಡ್ಡಿ ಬಿಡುಗಡೆಗೆ ರೆಡಿ!

ಇತ್ತೀಚಿನ ದಿನಗಳಲ್ಲಿ ಮಕ್ಕಳ ಚಿತ್ರಗಳ ಸಂಖ್ಯೆ ಕಡಿಮೆಯಾಗಿದೆ ಅಂತೊಂದು ಕೊರಗು ಕನ್ನಡದ ಸಿನಿಮಾ ಪ್ರೇಮಿಗಳಲ್ಲಿದೆ. ಒಂದು ಸಿನಿಮಾ ರಂಗದ ಜೀವಂತಿಕೆಯ ದೃಷ್ಟಿಯಿಂದ ಎಲ್ಲಾ ಬಗೆಯ ಸಿನಿಮಾಗಳು ಕೂಡ ಕಾಲ ಕಾಲಕ್ಕೆ ರೂಪುಗೊಳ್ಳಬೇಕಾಗುತ್ತದೆ. ಈ ನಿಟ್ಟಿನಲ್ಲಿ ಸಿನಿಮಾಸಕ್ತರ ನಡುವಲ್ಲೊಂದು ಚರ್ಚೆ ಚಾಲ್ತಿಯಲ್ಲಿರುವಾಗಲೇ ಸದ್ದಿಲ್ಲದೆ ತಯಾರಾಗಿ ನಿಂತಿರುವ ವಿಶಿಷ್ಟ ಕಥಾನಕದ ಮಕ್ಕಳ ಚಿತ್ರವೊಂದು ಅಂತಾರಾಷ್ಟ್ರೀಯ ಸಿನಿಮೋತ್ಸವಗಳಲ್ಲಿ ಸದ್ದು ಮಾಡಿದೆ. ಇನ್ನೇನು ಆರಂಭವಾಗಲಿರೋ ಶಾಲಾ



ರಜಾ ದಿನಗಳು ಅಂತಿಮ ಘಟ್ಟ ತಲುಪಿಕೊಳ್ಳುವ ಹೊತ್ತಿಗೆಲ್ಲ ಅದ್ದೂರಿಯಾಗಿ ತೆರೆಗಾಣಲು ತಯಾರಿಯೂ ಆರಂಭವಾಗಿದೆ. ಹಾಗೆ ಬಿಡುಗಡೆಗೆ ತಯಾರಾಗಿರುವ ಮಕ್ಕಳ ಚಿತ್ರ 'ಸೀಸ್ ಕಡ್ಡಿ'.

ಇದು ಕನ್ನಡ ಚಿತ್ರರಂಗದಲ್ಲಿ ನಿರ್ಮಾಪಕರಾಗಿ, ನಿರ್ದೇಶಕರಾಗಿ ಪರಿಚಿತರಾಗಿರುವ ರತನ್ ಗಂಗಾಧರ್ ನಿರ್ದೇಶನದ ಚಿತ್ರ. 'ಸೀಸ್ ಕಡ್ಡಿ' ಎಂಬುದು ನಮ್ಮೆಲ್ಲರ ಪಾಲಿಗೆ ಅಕ್ಷರದ ಬೆಳಕು ತೋರುವ ವಸ್ತು. ಅಂತಹ ಪೆನ್ಸಿಲ್ ಅನ್ನು ರೂಪಕವಾಗಿಟ್ಟುಕೊಂಡು, ಅದರ ಭಾಗವಾಗಿರೋ ಲೆಡ್, ಶಾರ್ಪ್ನರ್, ಇರೇಜರ್ ಮುಂತಾದವುಗಳನ್ನು ಹೋಲುವ ಪಾತ್ರಗಳ ಮೂಲಕ ಈ ಸಿನಿಮಾ ಕಥೆ ತುಂಬಿಕೊಂಡಿದೆಯಂತೆ. ಈ ರೂಪಕಗಳನ್ನಿಟ್ಟುಕೊಂಡು ಎಂತಹ ಪಾತ್ರಗಳು ಸೃಷ್ಟಿಯಾಗಿರಬಹುದೆಂಬ ಕುತೂಹಲಕ್ಕೆ ತಿಂಗಳೊಪ್ಪತ್ತಿನಲ್ಲಿಯೇ ಮಜವಾದ ಉತ್ತರ ಸಿಗಲಿದೆ. ಒಂದು ಪೆನ್ಸಿಲ್‌ನ ರೂಪಕದೊಂದಿಗೆ ಬದುಕಿನ ಅಚ್ಚರಿದಾಯಕ ಮಜಲುಗಳನ್ನು ತೆರೆದಿಡುವ ಈ ಸಿನಿಮಾ ಮಕ್ಕಳ ಚಿತ್ರಗಳ ಸಾಲಿನಲ್ಲಿ ಭಿನ್ನವಾಗಿ ನೆಲೆಕಂಡುಕೊಳ್ಳುವ ಸಾಧ್ಯತೆಗಳಿವೆ. ಇದುವರೆಗೂ ಸಿನಿಮೋತ್ಸವಗಳಲ್ಲಿ ಪ್ರದರ್ಶನಗೊಂಡಿದ್ದ ಈ ಚಿತ್ರವನ್ನು ನೋಡಿದವರೆಲ್ಲ ನಾನಾ ದಿಕ್ಕಿನಲ್ಲಿ ವಿಮರ್ಶೆ ಮಾಡಿದ್ದಾರೆ.

# ಕೆಜಿಎಫ್ ಕ್ವೀನ್ ಬ್ಯಾಕ್ ಟು ರಾಕ್

ಕನ್ನಡದ ನಟಿ ಶ್ರೀನಿಧಿ ಶೆಟ್ಟಿ ಮತ್ತೆ ಬೆಳ್ಳಿಪರದೆಯಲ್ಲಿ ಬ್ಯಾಕ್ ಟು ಬ್ಯಾಕ್ ಸಿನಿಮಾಗಳ ಮೂಲಕ ಮಿಂಚಲು ಸಜ್ಜಾಗಿದ್ದಾರೆ. 3 ವರ್ಷಗಳ ಬಳಿಕ ಮತ್ತೆ ಬೆಳ್ಳಿಪರದೆಯತ್ತ ನಟಿ ಎಂಟ್ರಿ ಕೊಡ್ತಿದ್ದಾರೆ. ಯಾವೆಲ್ಲಾ ಸಿನಿಮಾಗಳು ಕುಡ್ಲದ ಬೆಡಗಿ ಕೈಯಲ್ಲಿದೆ ಗೊತ್ತಾ ಇಲ್ಲಿದೆ ವಿವರ. ರಾಕಿಂಗ್ ಸ್ಟಾರ್ ಯಶ್‌ಗೆ ನಾಯಕಿಯಾಗಿ ಸತತ 5 ವರ್ಷಗಳ ಕಾಲ 'ಕೆಜಿಎಫ್ 1' ಮತ್ತು 'ಕೆಜಿಎಫ್ 2'ಗೆ 5 ವರ್ಷ ಮೀಸಲಿಟ್ಟು ಗೆದ್ದು ಬೀಗಿದ್ದರು. ಆ ನಂತರ ಚಿಯಾನ್ ವಿಕ್ರಮ್‌ಗೆ ನಾಯಕಿಯಾಗಿ 'ಕೋಬ್ರಾ' ಮೂಲಕ ಹಿಟ್ ಕೊಡಲು ರೆಡಿಯಾದ್ರು. ಆದರೆ ಅದ್ಯಾಕೋ ಸಕ್ಸಸ್ ಸಿಗದೇ ನಟಿ ಸೈಲೆಂಟ್ ಆದರು. ಈಗ ಬರೋಬ್ಬರಿ 3 ಬಿಗ್ ಪ್ರಾಜೆಕ್ಟ್‌ಗಳ ಮೂಲಕ ಮೂರು ವರ್ಷಗಳ ಬಳಿಕ ಕೆಜಿಎಫ್ ಕ್ವೀನ್ ಶ್ರೀನಿಧಿ ಬರುತ್ತಿದ್ದಾರೆ. ನ್ಯಾಚುರಲ್ ಸ್ಟಾರ್ ನಾನಿ ಜೊತೆ ಹಿಟ್ 3, ಸಿದ್ದು ಜೊನ್ನಲಗಡ್ಡ ಜೊತೆ 'ತೆಲುಸು ಕದಾ' ಸಿನಿಮಾಗಳನ್ನ ಮಾಡಿದ್ದಾರೆ. ಕಿಚ್ಚ ಸುದೀಪ್ ನಟನೆಯ 'ಕಿಚ್ಚ 47' ಸಿನಿಮಾಗೂ ಇವರೇ ನಾಯಕಿ ಅನ್ನೋದು ಚಿತ್ರತಂಡದ ಕಡೆಯಿಂದ ಅಧಿಕೃತವಾಗಿದೆ. ಅಲ್ಲಿಗೆ 'ಕೆಜಿಎಫ್' ಕ್ವೀನ್ ಈಸ್ ಬ್ಯಾಕ್.



# ಹೈದರಾಬಾದ್ ಉದ್ಯಮಿಯ ಅಳಿಯ ಆಗ್ತಾರಾ ಪ್ರಭಾಸ್

**ಸಾವಿರಾರು ಕೋಟಿ ಒಡೆತನದ ಪುತ್ರಿ ಜೊತೆ ನಿಶ್ಚಿತಾರ್ಥ**

ಸಾಮಾಜಿಕ ಜಾಲತಾಣಗಳಲ್ಲಿ ಸಿನಿಮಾ ತಾರೆಯರ ವೈಯಕ್ತಿಕ ಜೀವನ ಯಾವಾಗಲೂ ಬಿಸಿ ಚರ್ಚೆಯ ವಿಷಯವಾಗಿರುತ್ತದೆ. ಇನ್ನೂ ಮುಖ್ಯವಾಗಿ, ನಟರ ಪ್ರೀತಿ ಮತ್ತು ಮದುವೆಯ ಬಗ್ಗೆ ನಿರಂತರ ಚರ್ಚೆಗಳು ನಡೆಯುತ್ತಲೇ ಇರುತ್ತವೆ. ಮದುವೆ ವಿಷಯದಲ್ಲಿ ಚರ್ಚೆಗೊಳಗಾಗೋ ಟಾಲಿವುಡ್ ನ ನಂಬರ್ ಒನ್ ಹೀರೋ ಪ್ರಭಾಸ್ ಎಂದರೆ ಅತಿಶಯೋಕ್ತಿಯಲ್ಲ.

ನಟ ಕೃಷ್ಣಂ ರಾಜು ಅವರ ಉತ್ತರಾಧಿಕಾರಿಯಾಗಿ ಬೆಳ್ಳಿತೆರೆಗೆ ಬಂದು ತನಗೊಂದು ವಿಶೇಷ ಇಮೇಜ್ ಸೃಷ್ಟಿಸಿಕೊಂಡ ಪ್ರಭಾಸ್, ಕ್ರಮೇಣ ಪ್ಯಾನ್-ಇಂಡಿಯಾ ತಾರೆಯಾಗಿ ಮಿಂಚಿದರು. ಬಾಹುಬಲಿಯಂತಹ ಸಿನಿಮಾಗಳಿಂದ ಅವರು ವಿಶ್ವಾದ್ಯಂತ ಅಭಿಮಾನಿಗಳನ್ನು ಗಳಿಸಿದ್ದಾರೆ. ಇದೆಲ್ಲವೂ ಒಂದು ವಿಷಯವಾದರೆ, ಪ್ರಭಾಸ್ ಮದುವೆ ವಿಷಯ ಇನ್ನೊಂದು. ನಲವತ್ತರ ಹರೆಯದಲ್ಲಿದ್ದರೂ, ಟಾಲಿವುಡ್‌ನ ಮೋಸ್ಟ್ ಎಲಿಜಿಬಲ್ ಬ್ಯಾಚುಲರ್ ಇನ್ನೂ ಮದುವೆಯಾಗಿಲ್ಲ, ಆದ್ದರಿಂದ ಎಲ್ಲಾರ ಕಣ್ಣುಗಳು ಅವರ ಮೇಲಿವೆ. ಪ್ರಭಾಸ್ ನಾಯಕಿ ಅನುಷ್ಕಾ ಜೊತ ಪ್ರೀತಿಯಲ್ಲಿದ್ದು, ರಹಸ್ಯ ಸಂಬಂಧ ಹೊಂದಿದ್ದಾರೆ ಎಂಬ ಸುದ್ದಿ ಎಲ್ಲೆಡೆ ಸುದ್ದಿಯಾಗಿತ್ತು. ಪ್ರಭಾಸ್ ಮತ್ತು ಅನುಷ್ಕಾ ಶೀಘ್ರದಲ್ಲೇ ಮದುವೆಯಾಗಲಿದ್ದಾರೆ ಎಂಬ ವರದಿಗಳು ಬಹಳ ದಿನಗಳಿಂದ ಬರುತ್ತಿವೆ. ಅನುಷ್ಕಾ ಮತ್ತು ಪ್ರಭಾಸ್ ಅಂತಹದ್ದೇನೂ ಇಲ್ಲ ಎಂದು ಪ್ರತಿಕ್ರಿಯಿಸಿದ್ದರೂ, ಸುದ್ದಿಗಳ ಹರಿವು ನಿಲ್ಲುತ್ತಿಲ್ಲ. ಈ ಮಧ್ಯೆ, ರೆಬೆಲ್ ಸ್ಟಾರ್ ಕುಟುಂಬದಿಂದ ಇತ್ತೀಚೆಗೆ ಮತ್ತೊಂದು ದೊಡ್ಡ ರಹಸ್ಯ ಹೊರಬಂದಿದೆ. ಪ್ರಭಾಸ್ ಮದುವೆ ನಿಶ್ಚಯವಾಗಿದ್ದು, ಇಡೀ ಪ್ರಕರಣವನ್ನು ರಹಸ್ಯವಾಗಿಡಲಾಗುತ್ತಿದೆ ಎಂಬ ಮಾತು ಕೇಳಿಬರುತ್ತಿದೆ.



# ತಮಿಳಿನತ್ತ ಕನ್ನಡದ ನಟ



'ಸಪ್ತಸಾಗರದಾಚೆ ಎಲ್ಲೋ' ಸಿನಿಮಾದಲ್ಲಿ 'ಲವ್ ಯೂ ಮನು' ಎನ್ನುತ್ತಾ ಭಯ ಹುಟ್ಟಿಸಿದ್ದ ರಮೇಶ್ ಇಂದಿರಾ ಇದೀಗ ತಮಿಳಿನತ್ತ ಮುಖ ಮಾಡಿದ್ದಾರೆ. ಸ್ಟಾರ್ ನಟ ಚಿಯಾನ್ ವಿಕ್ರಮ್ ಸಿನಿಮಾದಲ್ಲಿ ಅವರು ನಟಿಸಿದ್ದಾರೆ.

ನಿರ್ದೇಶಕನಾಗಿ ಸೈ ಎನಿಸಿಕೊಂಡಿದ್ದ ರಮೇಶ್ ಇಂದಿರಾ ಹಿರಿತೆರೆಯಲ್ಲಿ ಖಳ ನಟನಾಗಿ ಬ್ಯುಸಿಯಾಗಿದ್ದಾರೆ. ಇತ್ತೀಚೆಗೆ ಡಾಲಿ ನಟನೆಯ 'ಕೋಟಿ' ಸಿನಿಮಾದಲ್ಲೂ ಅವರು ನಟಿಸಿದ್ದರು. ಈಗ ಕಾಲಿವುಡ್‌ನಲ್ಲಿ ಅವರಿಗೆ ಬಂಪರ್ ಅವಕಾಶ ಸಿಕ್ಕಿದೆ. ಸಿಕ್ಕಿರೋ ಅವಕಾಶವನ್ನು ಅವರು ಸದುಪಯೋಗಪಡಿಸಿಕೊಂಡಿದ್ದಾರೆ. ಚಿಯಾನ್ ವಿಕ್ರಮ್ ನಟನೆಯ 'ವೀರ ಧೀರ ಶೂರನ್' ಸಿನಿಮಾದಲ್ಲಿ ಪವರ್‌ಫುಲ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಸದ್ಯ ಈಗಾಗಲೇ ರಿಲೀಸ್ ಆಗಿರೋ ಚಿತ್ರದ ಟ್ರೈಲರ್‌ನಲ್ಲಿ ರಮೇಶ್ ಇಂದಿರಾ ಕಾಣಿಸಿಕೊಂಡಿದ್ದಾರೆ. ಆದರೆ ಅವರ ಪಾತ್ರ ಹೇಗಿದೆ ಎಂಬುದಕ್ಕೆ ಮಾ.27ರಂದು ಉತ್ತರ ಸಿಗಲಿದೆ. ಚಿಯಾನ್ ವಿಕ್ರಮ್ ಜೊತೆ ರಮೇಶ್ ತೆರೆಹಂಚಿಕೊಂಡಿದ್ದಾರೆ .

# ಐಪಿಎಲ್‌ನಲ್ಲಿ ಈ ನಿಯಮದ ಅಗತ್ಯವೇ ಇಲ್ಲ

ಇಂಪ್ಯಾಕ್ಟ್ ಪ್ಲೇಯರ್ ಎಂದರೆ ಬದಲಿ ಆಟಗಾರ. ಅಂದರೆ ಟಾಸ್ ಸಮಯದಲ್ಲಿ ತಂಡಗಳು ಪ್ಲೇಯಿಂಗ್ ಇಲೆವೆನ್ ಘೋಷಿಸುವ ವೇಳೆ ಹೆಚ್ಚುವರಿ 5 ಆಟಗಾರರನ್ನು ಹೆಸರಿಸಬಹುದು. ಈ 5 ಆಟಗಾರರಲ್ಲಿ, ಯಾವುದಾದರೂ ಒಬ್ಬ ಆಟಗಾರನನ್ನು ಪಂದ್ಯದ ಮಧ್ಯದಲ್ಲಿ ಮತ್ತೊಬ್ಬ ಆಟಗಾರನ ಬದಲಿಯಾಗಿ ಕಣಕ್ಕಿಳಿಸಬಹುದು. ಇದೀಗ ಈ ನಿಯಮದ ವಿರುದ್ಧ ಪರ-ವಿರೋಧ ಚರ್ಚೆಗಳು ಮುಂದುವರೆದಿದೆ.

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-18 ಶುರುವಾಗಿ 5 ಪಂದ್ಯಗಳು ಮುಗಿದರೂ ಇಂಪ್ಯಾಕ್ಟ್ ಪ್ಲೇಯರ್ ನಿಯಮದ ಚರ್ಚೆಗಳು ಮುಂದುವರೆದಿದೆ.

ಇದೀಗ ಈ ಚರ್ಚೆಗೆ ಚೆನ್ನೈ ಸೂಪರ್ ಕಿಂಗ್ಸ್ ತಂಡದ ಮಾಜಿ ನಾಯಕ ಮಹೇಂದ್ರ ಸಿಂಗ್ ಧೋನಿ ಕೂಡ ಎಂಟ್ರಿ ಕೊಟ್ಟಿದ್ದಾರೆ. ಅದು ಸಹ ಐಪಿಎಲ್ ಇಂಪ್ಯಾಕ್ಟ್ ಪ್ಲೇಯರ್ ನಿಯಮವನ್ನು ವಿರೋಧಿಸುವ ಮೂಲಕ ಎಂಬುದು ವಿಶೇಷ. ಜಿಯೋಸ್ಟಾರ್ ಜೊತೆ ಈ ಬಗ್ಗೆ ಮಾತನಾಡಿದ ಮಹೇಂದ್ರ ಸಿಂಗ್ ಧೋನಿ, ಐಪಿಎಲ್‌ನಲ್ಲಿ ಇಂಪ್ಯಾಕ್ಟ್ ಪ್ಲೇಯರ್ ನಿಯಮದ ಅಗತ್ಯವಿಲ್ಲ ಎಂಬುದು ನನ್ನ ಭಾವನೆ. ಏಕೆಂದರೆ ಆಟಗಾರನು ಇಡೀ ಪಂದ್ಯದಲ್ಲಿ ಭಾಗಿಯಾಗಬೇಕು. ಆದರೆ ಹೊಸ ನಿಯಮವು ಇಡೀ ಪಂದ್ಯದ ಫಲಿತಾಂಶದ ಮೇಲೆ ಪ್ರಭಾವ ಬೀರುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಇಂಪ್ಯಾಕ್ಟ್ ಪ್ಲೇಯರ್ ನಿಯಮ ಜಾರಿಗೆ ಬಂದಾಗಲೇ ನನಗೆ ಈ ನಿಯಮದ ಅಗತ್ಯವೇ ಇಲ್ಲ ಎಂದು ಅನಿಸಿತ್ತು. ಒಂದು ರೀತಿಯಲ್ಲಿ,



**ಇಂಪ್ಯಾಕ್ಟ್ ಪ್ಲೇಯರ್ ನಿಯಮದ ಪರವಿಲ್ಲ**

ಇಂತಹ ನಿಯಮ ನನ್ನಂತಹ ಹಿರಿಯ ಆಟಗಾರರಿಗೆ ಸಹಾಯ ಮಾಡುತ್ತದೆ. ಆದರೆ ನಾನು ವಿಕೆಟ್ ಕೀಪರ್. ಹೀಗಾಗಿ ನಾನು ಇಂಪ್ಯಾಕ್ಟ್ ಪ್ಲೇಯರ್ ಆಗಿ ಕಣಕ್ಕಿಳಿಯಲು ಆಗುವುದಿಲ್ಲ.

ನಾನು ಇಡೀ ಪಂದ್ಯದಲ್ಲಿ ತೊಡಗಿಸಿಕೊಳ್ಳಬೇಕೆಂದು ಬಯಸುವ ಆಟಗಾರ. ಆದರೆ ಇಂಪ್ಯಾಕ್ಟ್ ಪ್ಲೇಯರ್ ಆಗಿ ಕಣಕ್ಕಿಳಿಯುವ ಆಟಗಾರ ಒಂದಾದರೆ ಬ್ಯಾಟಿಂಗ್ ಅಥವಾ ಬೌಲಿಂಗ್ ಮಾತ್ರ ಮಾಡುತ್ತಾರೆ. ಇದರಿಂದಾಗಿಯೇ ಈಗ ಹೆಚ್ಚಿನ ಪಂದ್ಯಗಳಲ್ಲಿ ಬೃಹತ್ ಸ್ಕೋರ್ ಮೂಡಿಬರುತ್ತಿದೆ ಎಂದು ಧೋನಿ ಅಭಿಪ್ರಾಯಪಟ್ಟಿದ್ದಾರೆ. ಏಕೆಂದರೆ ಆಟಗಾರನು ಆರಾಮದಾಯಕವಾಗಿ ಮೈದಾನಕ್ಕಿಳಿದು ಹೆಚ್ಚಿನ ರನ್‌ಗಳಿಸುತ್ತಿದ್ದಾರೆ. ಹೆಚ್ಚುವರಿ ಬ್ಯಾಟರ್‌ನ ಬಳಕೆಯೊಂದಿಗೆ ಪಂದ್ಯದ ಫಲಿತಾಂಶ ಕೂಡ ಬದಲಾಗುತ್ತಿದೆ. ಹೀಗಾಗಿ ನಾನು ಇಂಪ್ಯಾಕ್ಟ್ ಪ್ಲೇಯರ್ ನಿಯಮದ ಪರವಿಲ್ಲ ಎಂದು ಧೋನಿ ಹೇಳಿದ್ದಾರೆ.

ಇದಕ್ಕೂ ಮುನ್ನ ಭಾರತದ ಟೆಸ್ಟ್ ಮತ್ತು ಏಕದಿನ ನಾಯಕ ರೋಹಿತ್ ಶರ್ಮಾ ಮತ್ತು ಸ್ಟಾರ್ ಆಲ್‌ರೌಂಡರ್ ಹಾರ್ದಿಕ್ ಪಾಂಡ್ಯ ಸಹ ಈ ನಿಯಮವನ್ನು ಟೀಕಿಸಿದ್ದರು. ಇಂತಹ ನಿಯಮವು ಆಲ್‌ರೌಂಡರ್ ಗಳ ಬೆಳವಣಿಗೆ ಅಡ್ಡಿಯಾಗುತ್ತದೆ ಎಂದು ಅಭಿಪ್ರಾಯಪಟ್ಟಿದ್ದರು. ಇದಾಗ್ಯೂ ಫಾಫ್ ಡುಪ್ಲೆಸಿಸ್ ಸೇರಿದಂತೆ ಕೆಲ ಆಟಗಾರರು ಇಂಪ್ಯಾಕ್ಟ್ ಪ್ಲೇಯರ್ ನಿಯಮದ ಪರವಿದ್ದಾರೆ. ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧದ ಪಂದ್ಯದಲ್ಲಿ ಇಂಪ್ಯಾಕ್ಟ್ ಪ್ಲೇಯರ್ ಆಗಿ ಕಣಕ್ಕಿಳಿದಿದ್ದ ಅಶುತೋಷ್ ಶರ್ಮಾ ಸ್ಫೋಟಕ 66 ರನ್ ಬಾರಿಸಿ ಡೆಲ್ಲಿ ಕ್ಯಾಪಿಟಲ್ಸ್ ತಂಡಕ್ಕೆ ಜಯ ತಂದುಕೊಟ್ಟಿದ್ದರು. ಇದನ್ನೇ ಪ್ರಸ್ತಾಪಿಸಿ ಡುಪ್ಲೆಸಿಸ್ ಈ ನಿಯಮವನ್ನು ವಿರೋಧಿಸುವವರಿಗೆ ತಿರುಗೇಟು ನೀಡಿದ್ದರು.

# ರಾಯಲ್ಸ್ ವಿರುದ್ಧ ಗೆದ್ದು ಬೀಗಿದ ಕೆಕೆಆರ್

ಬೌಲರ್ ಗಳ ಸಂಘಟಿತ ದಾಳಿ ಮತ್ತು ವಿಕೆಟ್ ಕೀಪರ್ ಬ್ಯಾಟರ್ ಕ್ವಿಂಟನ್ ಡಿ ಕಾಕ್ ಅವರ ಆಕರ್ಷಕ ಅರ್ಧ ಶತಕಗಳ ನೆರವಿನಿಂದ ಕೋಲ್ಕತಾ ನೈಟ್ ರೈಡರ್ಸ್ ತಂಡ ರಾಜಸ್ಥಾನ ರಾಯಲ್ಸ್ ತಂಡವನ್ನು 8 ವಿಕೆಟ್ ಗಳಿಂದ ಪರಾಭವಗೊಳಿಸಿದೆ. ಆರ್ ಸಿಬಿ ವಿರುದ್ಧ ಆಡಿದ್ದ ಪ್ರಥಮ ಪಂದ್ಯದಲ್ಲಿ ಮುಖಭಂಗ ಅನುಭವಿಸಿದ್ದ ಕೋಲ್ಕತಾ ತಂಡ ಇದೀಗ ಸೀಸನ್ ನಲ್ಲಿ ಮೊದಲ ಜಯ ದಾಖಲಿಸಿದೆ. ಇದೇ ವೇಳೆ ಕಳೆದ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ ಪರಾಜಯ ಅನುಭವಿಸಿದ್ದ ರಾಜಸ್ಥಾನ ರಾಯಲ್ಸ್ ಇದೀಗ ನಿರಂತರ 2ನೇ ಪಂದ್ಯದಲ್ಲೂ ಪರಾಭವಗೊಂಡಿದೆ. ಬುಧವಾರ ಗುವಾಹಟಿಯಲ್ಲಿ ನಡೆದ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ ತಂಡ 20 ಓವರ್ ಗಳಲ್ಲಿ 151 ರನ್ ಗಳಿಸಿದರು. ಇದನ್ನು ಕೋಲ್ಕತಾ ನೈಟ್ ರೈಡರ್ಸ್ ತಂಡ ಇನ್ನೂ 15 ಎಸೆತಗಳು ಬಾಕಿ ಇರುವಂತೆಯೇ ಗುರಿ ತಲುಪಿತು. ಆರಂಭಿಕ ಆಟಗಾರ ಮೊಯಿನ್ ಅಲಿ ಅವರು ತಂಡದ ಮೊತ್ತ 41 ಆಗಿದ್ದಾಗ ರನೌಟ್ ಆದರು. ಆದರೆ ಬಳಿಕ ಕ್ವಿಂಟನ್ ಡಿ ಕಾಕ್ ಅವರು ಅದ್ಭುತವಾಗಿ ಆಟವಾಡಿ ತಂಡದ ಜಯಕ್ಕೆ ಕಾರಣಕರ್ತರಾದರು. ಕೇವಲ 61 ಎಸೆತಗಳಿಂದ 97 ರನ್ ಗಳಿಸಿದ ಅವರು ಮಂಗಳವಾರದ ಪಂದ್ಯದಲ್ಲಿ ಶ್ರೇಯಸ್ ಅಯ್ಯರ್ ಅವರಂತೆಯೇ 3 ರನ್ ಗಳಿಂದ ಶತಕ ವಂಚಿತರಾದರು.



**ಡಿಕಾಕ್ ಸಿಡಿಲಬ್ಬರದ ಬ್ಯಾಟಿಂಗ್!**

## ಕೋಲ್ಕತಾ ಸಂಘಟಿತ ದಾಳಿ

ರಾಜಸ್ಥಾನ ರಾಯಲ್ಸ್ ತಂಡ ಕೋಲ್ಕತಾ ನೈಟ್ ರೈಡರ್ಸ್ ತಂಡದ ಬೌಲರ್ ಗಳ ಬಿಗು ದಾಳಿಯಿಂದಾಗಿ ದೊಡ್ಡ ಮೊತ್ತ ಗಳಿಸಲು ಸಾಧ್ಯವಾಗಲಿಲ್ಲ. ವಿಕೆಟ್ ಕೀಪರ್ ಬ್ಯಾಯರ್ ಧ್ರುವ ಜ್ಯುರೆಲ್ 33, ಆರಂಭಿಕ ಯಶಸ್ವಿ ಜೈಸ್ವಾಲ್ 29, ನಾಯಕ ರಿಯಾನ್ ಪರಾದ್ ಅವರು ಇದ್ದಿದ್ದರಲ್ಲಿ ಚೆನ್ನಾಗಿ ಆಡಿದರು. ಆಧರೆ ರಿಯಾನ್ ಪರಾಗಿ ಹೊರತುಪಡಿಸಿದರೆ ಉಳಿದವರೆಲ್ಲರೂ ವೇಗವಾಗಿ ರನ್ ಗಳಿಸಲು ವಿಫಲರಾದರು. ಡೆತ್ ಓವರ್ ಗಳಲ್ಲಿ ಜೋಫ್ರಾ ಅರ್ಚರ್ ಎರಡು ಸಿಕ್ಸರ್ ಗಳನ್ನು ಸಿಡಿಸಿದ್ದರಿಂದ ತಂಡ 150ರ ಗಡಿ ದಾಟುವಂತಾಯಿತು. ಕೋಲ್ಕತಾ ಪರ ವೈಭವ್ ಅರೋರಾ, ಹರ್ಷಿತ್ ರಾಣಾ, ಮೊಯಿನ್ ಅಲಿ ಮತ್ತು ವರುಣ್ ಚಕ್ರವರ್ತಿ ತಲಾ 2 ವಿಕೆಟ್ ಗಳಿಸಿದರು. ಉಳಿದೊಂದು ವಿಕೆಟ್ ಸ್ಪೆನ್ಸರ್ ಜಾನ್ಸನ್ ಪಾಲಾಯಿತು.

**ಸಂಕ್ಷಿಪ್ತ ಸ್ಕೋರ್:** ರಾಜಸ್ಥಾನ ರಾಯಲ್ಸ್ 20 ಓವರ್ ಗಳಲ್ಲಿ 151/9, ಧ್ರುವ ಜ್ಯುರೆಲ್ 33, ಯಶಸ್ವಿ ಜೈಸ್ವಾಲ್ 29, ರಿಯಾನ್ ಪರಾಗ್ 25, ವರುಣ್ ಚಕ್ರವರ್ತಿ 17ಕ್ಕೆ 2, ಮೊಯಿನ್ ಅಲಿ 23ಕ್ಕೆ 2 ಕೋಲ್ಕತಾ ನೈಟ್ ರೈಡರ್ಸ್ 17.3 ಓವರ್ ಗಳಲ್ಲಿ 153/2, ಕ್ವಿಂಟನ್ ಡಿ ಕಾಕ್ ಅಜೇಯ 97, ಅಂಗರಿಕ್ಷ್ ರಘುವಂಶಿ ಔಟಾಗದೆ 22, ವಹಿಂದು ಹಸರಂಗ 34ಕ್ಕೆ 1

# ಆರ್‌ಸಿಬಿ ವಿರುದ್ಧ ಸೋಲು, ಪಿಚ್ ಬದಲಿಸಲು ಕೆಕೆಆರ್ ಪಟ್ಟು



ಐಪಿಎಲ್ 2025 ರಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ತಂಡವು ತವರಿನಲ್ಲಿ 7 ಪಂದ್ಯಗಳನ್ನಾಡಲಿದೆ. ಅಂದರೆ ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ಲೀಗ್ ಹಂತದಲ್ಲಿ ಏಳು ಪಂದ್ಯಗಳಲ್ಲಿ ಕಣಕ್ಕಿಳಿಯಬೇಕಿದೆ.

ಆದರೆ ಮೊದಲ ಪಂದ್ಯದಲ್ಲೇ ತವರಿನಲ್ಲಿ ಸೋತಿರುವ ಕೊಲ್ಕತ್ತಾ ನೈಟ್ ರೈಡರ್ಸ್ ತಂಡವು ಇದೀಗ ಪಿಚ್ ಬಗ್ಗೆ ಅಪಸ್ವರ ಎತ್ತಿದ್ದಾರೆ.

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-18ರ ಮೊದಲ ಪಂದ್ಯದಲ್ಲೇ ಹಾಲಿ ಚಾಂಪಿಯನ್ ಕೊಲ್ಕತ್ತಾ ನೈಟ್ ರೈಡರ್ಸ್ ತಂಡವು ಭಾರೀ ಮುಖಭಂಗಕ್ಕೊಳಗಾಗಿದೆ. ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಕೆಕೆಆರ್ ವಿರುದ್ಧ ಆರ್‌ಸಿಬಿ ತಂಡವು 7 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿತ್ತು. ಈ ಹೀನಾಯ ಸೋಲಿನ ಬೆನ್ನಲ್ಲೇ ಕೊಲ್ಕತ್ತಾ ನೈಟ್ ರೈಡರ್ಸ್ ತಂಡದ ನಾಯಕ ಅಜಿಂಕ್ಯ ರಹಾನೆ ಪಿಚ್ ಬಗ್ಗೆ ಅಪಸ್ವರ ಎತ್ತಿದ್ದಾರೆ.

**ಪಿಚ್ ಬದಲಿಸಲು ಒತ್ತಾಯ:**

ಆರ್‌ಸಿಬಿ ವಿರುದ್ಧದ ಪಂದ್ಯದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕೆಕೆಆರ್ ತಂಡದ ನಾಯಕ ಅಜಿಂಕ್ಯ ರಹಾನೆ, 'ಸ್ಪಿನ್ ಬೌಲರ್‌ಗಳಿಗೆ ಸಹಾಯಕವಾಗುವಂತಹ ಪಿಚ್ ನಮಗೆ ಬೇಕು. ಆದರೆ ಈ ಪಿಚ್ ಕಳೆದ ಒಂದೂವರೆ ದಿನಗಳಿಂದ ಮುಚ್ಚಿಡಲಾಗಿತ್ತು ಎಂದಿದ್ದರು. ಅಲ್ಲದೆ ಕೆಕೆಆರ್ ತಂಡದಲ್ಲಿ ಸುನಿಲ್ ನರೈನ್ ಮತ್ತು ವರುಣ್ ಚಕ್ರವರ್ತಿಯಂತಹ ಗುಣಮಟ್ಟದ ಸ್ಪಿನ್ನರ್‌ಗಳಿದ್ದಾರೆ. ಅವರು ಯಾವುದೇ ಪಿಚ್‌ನಲ್ಲಿ ಬೌಲಿಂಗ್ ಮಾಡಬಲ್ಲರು. ಇದಾಗ್ಯೂ ನಮಗೆ ತವರು ಮೈದಾನವು ಸಹಾಯಕವಾಗಬೇಕೆಂದು ರಹಾನೆ ಆಗ್ರಹಿಸಿದ್ದರು.

**ಪಿಚ್ ಬದಲಾವಣೆಗೆ ನಕಾರ**

ಐಪಿಎಲ್ ನಿಯಮಗಳ ಪ್ರಕಾರ, ಫ್ರಾಂಚೈಸಿಗಳು ಪಿಚ್‌ನಲ್ಲಿ ಹಸ್ತಕ್ಷೇಪ ಮಾಡಲು ಸಾಧ್ಯವಿಲ್ಲ. ನಾನು ಕ್ಯುರೇಟರ್ ಆಗಿದ್ದಾಗಿನಿಂದ ಈಡನ್ ಗಾರ್ಡನ್ಸ್ ಮೈದಾನದ ಪಿಚ್ ಒಂದೇ ಆಗಿದೆ. ಇದನ್ನು ಬದಲಾಯಿಸಲಾಗು ವುದಿಲ್ಲ ಎಂದು ಕ್ಯುರೇಟರ್ ಸುಜನ್ ಮುಖರ್ಜಿ ತಿಳಿಸಿದ್ದಾರೆ.

ಏಕೆಂದರೆ ಆರ್‌ಸಿಬಿ ಮತ್ತು ಕೆಕೆಆರ್ ನಡುವಣ ಪಂದ್ಯದಲ್ಲಿ ಕೃನಾಲ್ ಪಾಂಡ್ಯ (3 ವಿಕೆಟ್) ಮತ್ತು ಸುಯಾಶ್ ಶರ್ಮಾ (1 ವಿಕೆಟ್) ವಿಕೆಟ್ ಕಬಳಿಸಿದ್ದರು. ಹಾಗೆಯೇ ಕೆಕೆಆರ್ ಪರ ವರುಣ್ ಚಕ್ರವರ್ತಿ (1 ವಿಕೆಟ್) ಹಾಗೂ ಸುನಿಲ್ ನರೈನ್ (1 ವಿಕೆಟ್) ಸಹ ವಿಕೆಟ್ ಪಡೆದಿದ್ದರು. ಈ ಪಿಚ್ ಸ್ಪಿನ್ ಸ್ನೇಹಿಯಾಗಿಲ್ಲದಿದ್ದರೆ, ಆರ್‌ಸಿಬಿ ಬೌಲರ್‌ಗಳು 4 ವಿಕೆಟ್ ಪಡೆದಿರುವುದು ಹೇಗೆ ಸುಜನ್ ಮುಖರ್ಜಿ ಪ್ರಶ್ನಿಸಿದ್ದಾರೆ.

**10 ವರ್ಷದಿಂದ ಒಂದೇ ಪಿಚ್:**

2015 ರಲ್ಲಿ ಸೌರವ್ ಗಂಗೂಲಿ ಅವರು ಸುಜನ್ ಮುಖರ್ಜಿ ಅವರನ್ನು ಈಡನ್ ಗಾರ್ಡನ್ಸ್ ಕ್ರೀಡಾಂಗಣದ ಕ್ಯುರೇಟರ್ ಆಗಿ ನೇಮಿಸಿದರು. ಅಂದಿನಿಂದ ಇಲ್ಲಿನ ಪಿಚ್ ಸಮತೋಲಿತ ಮತ್ತು ಕ್ರೀಡಾಭರಿತವಾಗಿದೆ. ಇದಾಗ್ಯೂ 2023 ರಲ್ಲಿ ಕೆಕೆಆರ್ ತಂಡಕ್ಕೆ 'ಹೋಮ್ ಅಡ್ವಾಂಟೇಜ್' ಸಿಗಲಿಲ್ಲ ಎಂದು ಅಂದಿನ ನಾಯಕ ನಿತೀಶ್ ರಾಣಾ ದೂರಿದ್ದರು. ಆದರೆ 2024 ರಲ್ಲಿ ಕೆಕೆಆರ್ ತಂಡವು ತವರಿನಲ್ಲಿ ಅದ್ಭುತ ಪ್ರದರ್ಶನ ನೀಡಿತ್ತು. ಹೀಗಾಗಿ ಪಿಚ್ ಬಗ್ಗೆ ಯಾವುದೇ ತಕರಾರು ಇರಲಿಲ್ಲ. ಇದೀಗ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧದ ಸೋಲಿನ ಬೆನ್ನಲ್ಲೇ ಕೊಲ್ಕತ್ತಾ ನೈಟ್ ರೈಡರ್ಸ್ ಫ್ರಾಂಚೈಸಿ ಪಿಚ್ ಬದಲಿಸಬೇಕೆಂದು ಆಗ್ರಹಿಸಿದ್ದಾರೆ. ಈ ಬೇಡಿಕೆಗೆ ಕೊಲ್ಕತ್ತಾ ಕ್ರಿಕೆಟ್ ಬೋರ್ಡ್ ಹೇಗೆ ಪ್ರತಿಕ್ರಿಯಿಸಲಿದೆ ನೋಡಬೇಕಿದೆ.

# 2 ಮನೆ ಖರೀದಿಸಿದ ಸೂರ್ಯ



**21.1 ಕೋಟಿ ರೂ.ಗೆ ಖರೀದಿ**

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-18 ರ ಮೊದಲ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡ ವನ್ನು ಸೂರ್ಯಕುಮಾರ್ ಯಾದವ್ ಮುನ್ನಡೆಸಿದ್ದರು. ಕಳೆದ ಸೀಸನ್‌ನ ಕೊನೆಯ ಪಂದ್ಯದಲ್ಲಿ ಸ್ಲೋ ಓವರ್ ರೇಟ್ ತಪ್ಪು ಮಾಡಿದ್ದಕ್ಕಾಗಿ ಹಾರ್ದಿಕ್ ಪಾಂಡ್ಯಗೆ ಒಂದು ಮ್ಯಾಚ್‌ನ ನಿಷೇಧ ಹೇರಲಾಗಿತ್ತು. ಹೀಗಾಗಿ ಸಿಎಸ್‌ಕೆ ವಿರುದ್ಧದ ಪಂದ್ಯದಲ್ಲಿ ಪಾಂಡ್ಯ ಕಾಣಿಸಿಕೊಂಡಿರಲಿಲ್ಲ. ಟೀಮ್ ಇಂಡಿಯಾ ಟಿ20 ತಂಡದ ನಾಯಕ ಸೂರ್ಯಕುಮಾರ್ ಯಾದವ್ ಮತ್ತೆ ಸುದ್ದಿಯಲ್ಲಿದ್ದಾರೆ. ಆದರೆ ಈ ಬಾರಿ ಸುದ್ದಿಯಾಗಿರುವುದು ಐಪಿಎಲ್‌ನಲ್ಲಿ ಭರ್ಜರಿ ಇನಿಂಗ್ಸ್‌ನಿಂದಲ್ಲ. ಬದಲಾಗಿ ಮುಂಬೈನಲ್ಲಿ ಐಷಾರಾಮಿ ಎರಡು ಫ್ಲ್ಯಾಟ್‌ಗಳನ್ನು ಖರೀದಿಸುವ ಮೂಲಕ. ಅದು ಕೂಡ 21.1 ಕೋಟಿ ರೂ.ಗೆ! ಸೂರ್ಯಕುಮಾರ್ ಯಾದವ್ ಮುಂಬೈನ ದಿಯೋನಾರ್ ಪ್ರದೇಶದಲ್ಲಿರುವ ಅಪಾರ್ಟ್‌ಮೆಂಟ್‌ನಲ್ಲಿ ಎರಡೂ ಫ್ಲಾಟ್‌ಗಳನ್ನು ಖರೀದಿಸಿದ್ದಾರೆ.

ಇದರ ಒಟ್ಟು ಬೆಲೆ 21.1 ಕೋಟಿ ರೂ. ಎಂದು ವರದಿಯಾಗಿದೆ. ಈ ಬಾರಿಯ ಐಪಿಎಲ್‌ಗೂ ಮುನ್ನ ಸೂರ್ಯಕುಮಾರ್ ಯಾದವ್ ಅವರನ್ನು ಮುಂಬೈ ಇಂಡಿಯನ್ಸ್ ಫ್ರಾಂಚೈಸಿ 16.35 ಕೋಟಿ ರೂ.ಗೆ ಉಳಿಸಿಕೊಂಡಿದೆ. ಅಂದರೆ ಐಪಿಎಲ್ 2025 ಕ್ಕೆ ಅವರು ಪಡೆಯುತ್ತಿರುವ ಹಣಕ್ಕಿಂತ ಸುಮಾರು ಒಂದೂವರೆ ಪಟ್ಟು ಹೆಚ್ಚು ಮೊತ್ತ ನೀಡಿ 2 ಮನೆಗಳನ್ನು ಖರೀದಿಸಿದ್ದಾರೆ.

**ಫ್ಲಾಟ್‌ಗಳ ವಿಶೇಷತೆಗಳೇನು**

ಸೂರ್ಯಕುಮಾರ್ ಯಾದವ್ ಅವರ ಎರಡೂ ಫ್ಲಾಟ್‌ಗಳು ಗೋದ್ರೇಜ್ ಸ್ಕೈ ಟೆರೇಸ್ ಯೋಜನೆಯಲ್ಲಿವೆ. ಇದರ ಒಟ್ಟು ಕಾರ್ಪೆಟ್ ಪ್ರದೇಶ 4,222.7 ಚದರ ಅಡಿ. ಅಲ್ಲದೆ ಫ್ಲಾಟ್‌ಗಳನ್ನು 4,568 ಚದರ ಅಡಿಗಳಲ್ಲಿ ನಿರ್ಮಿಸಲಾಗಿದೆ. ಇದೀಗ ಸೂರ್ಯಕುಮಾರ್ ಯಾದವ್ ಖರೀದಿಸಿದ ಎರಡೂ ಫ್ಲಾಟ್‌ಗಳು ಅಪಾರ್ಟ್‌ಮೆಂಟ್‌ನ ಎರಡು ವಿಭಿನ್ನ ಮಹಡಿಗಳಲ್ಲಿವೆ.

ಫ್ಲಾಟ್ ಇರುವ ಅಪಾರ್ಟ್‌ಮೆಂಟ್‌ನಲ್ಲಿ 6-ಪದರದ ಕಾರ್ ಪಾರ್ಕಿಂಗ್ ಪ್ರದೇಶವೂ ಇದೆ. ಸದ್ಯ ಐಪಿಎಲ್‌ನಲ್ಲಿ ತೊಡಗಿಸಿಕೊಂಡಿರುವ ಸೂರ್ಯಕುಮಾರ್ ಯಾದವ್ ಮುಂದಿನ ಪಂದ್ಯಕ್ಕಾಗಿ ಸಜ್ಜಾಗುತ್ತಿದ್ದಾರೆ. ಇದರ ನಡುವೆಯೇ ಮಹಾನಗರ ಮುಂಬೈನಲ್ಲಿ ಸೂರ್ಯ ಎರಡು ಫ್ಲಾಟ್‌ಗಳನ್ನು ಖರೀದಿಸಿರುವುದು ವಿಶೇಷ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966